ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 303
28–5–2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 303

### ಬಂಟ್ವಾಳದಲ್ಲಿ ಮತ್ತೆ ಹರಿದ ನೆತ್ತರು

## ಪಿಕಪ್ ವಾಹನ ಚಾಲಕ ರಹೀಮ್ ಬರ್ಬರ ಹತ್ಯೆ

**ಬಂಟ್ವಾಳ:** ಮಂಗಳೂರಿನಲ್ಲಿ ಮತ್ತೆ ನೆತ್ತರು ಹರಿದಿದ್ದು ಹಿಂದೂ ಸಂಘಟನೆ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಬೆನ್ನಲ್ಲೇ ಇದೀಗ ಪಿಕಪ್ ವಾಹನ ಚಾಲಕನಾಗಿದ್ದ ರಹೀಮ್ ಎಂಬಾತನನ್ನು ಹಾಡಹಗಲೇ ಬೈಕಿನಲ್ಲಿ ಬಂದಿದ್ದ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿ ಪರಾರಿಯಾಗಿದ್ದಾರೆ.




ಬಂಟ್ವಾಳ ತಾಲೂಕಿನ ಕುರಿಯಾಳ ಸಮೀಪದ ಇರಾಕೋಡಿ ಎಂಬಲ್ಲಿ ಈ ಘಟನೆ ನಡೆದಿದ್ದು, ಕೊಳತ್ತಮಜಲು ನಿವಾಸಿ ಪಿಕಪ್ ಚಾಲಕ ರಹೀಮ್ ನನ್ನು ಕೊಲೆ ಮಾಡಲಾಗಿದೆ. ಇರಾಕೋಡಿ ಎಂಬಲ್ಲಿ ಮನೆಯೊಂದರ ಮುಂದೆ ಮರಳು ಅನ್ ಲೋಡ್ ಮಾಡುತ್ತಿದ್ದ ವೇಳೆ ಬೈಕಿನಲ್ಲಿ ಬಂದಿದ್ದ ಇಬ್ಬರು ದುಷ್ಕರ್ಮಿಗಳು ಕೃತ್ಯ ಎಸಗಿದ್ದಾರೆ. ಇನ್ನು ರಹೀಮ್ ಜೊತೆಗಿದ್ದ ಹನೀಫ್ ಎಂಬಾತ ಮೇಲೂ ದಾಳಿ ಮಾಡಲಾಗಿದ್ದು ಆತನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಥಳಕ್ಕೆ ಬಂಟ್ವಾಳ ಗ್ರಾಮಾಂತರ ಪೋಲೀಸರು ಭೇಟಿ ಪರಿಶೀಲನೆ ನಡೆಸಿದರು.

### ಬಿಜೆಪಿ ಶಿಸ್ತು ಸಮಿತಿ ವರದಿ:

## ಪಕ್ಷದಿಂದ ಎಸ್.ಟಿ.ಸೋಮಶೇಖರ್, ಶಿವರಾಂ ಹೆಬ್ಬಾರ್ 6 ವರ್ಷ ಉಚ್ಚಾಟನೆ

**ಬೆಂಗಳೂರು:** ಮಹತ್ವದ ಬೆಳವಣಿಗೆಯಲ್ಲಿ ಪಕ್ಷವಿರೋಧಿ ಚಟುವಟಿಕೆ ಆರೋಪದ ಮೇರೆಗೆ ಭಾರತೀಯ ಜನತಾ ಪಕ್ಷ (ಃಎಕ) ಯಲ್ಲಿ ಮತ್ತೆರಡು ತಲೆದಂಡವಾಗಿದ್ದು, ಶಾಸಕ ಖಿ ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ.



ಈ ಹಿಂದೆ ಬಿಜೆಪಿ ಪಕ್ಷದ ವಿರುದ್ಧವೇ ಬಹಿರಂಗವಾಗಿ ಮಾತನಾಡುತ್ತಿದ್ದ ಮತ್ತು ಕಾಂಗ್ರೆಸ್ ಪಾಳಯದಲ್ಲಿ ಪದೇ ಪದೇ ಗುರುತಿಸಿಕೊಳ್ಳುತ್ತಿದ್ದ ರೆಬೆಲ್ ಶಾಸಕರಾದ ಖಿ ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ಅವರನ್ನು ನಿರೀಕ್ಷೆಯಂತೆಯೇ ಬಿಜೆಪಿ ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ. ಮುಂದಿನ 6 ವರ್ಷಗಳ ಕಾಲ ಇಬ್ಬರೂ ಶಾಸಕರನ್ನು ಪಕ್ಷದಿಂದ ಉಚ್ಚಾಟಿಸಲಾಗಿದೆ ಎಂದು ತಿಳಿದುಬಂದಿದೆ.

**ಶಿಸ್ತು ಸಮಿತಿ ವರದಿ ಬೆನ್ನಲ್ಲೇ ಕಠಿಣ ಕ್ರಮ :** ಈ ಹಿಂದೆ ಪಕ್ಷ ವಿರೋದಿ ಚಟುವಟಿಕೆ ಹಿನ್ನಲೆಯಲ್ಲಿ ಶಾಸಕರಾದ ಎಸ್.ಟಿ. ಸೋಮಶೇಖರ್ ಮತ್ತು ಶಿವರಾಮ ಹೆಬ್ಬಾರ್ ಅವರನ್ನು ಪಕ್ಷದಿಂದ ಉಚ್ಚಾಟಿಸುವಂತೆ ಕೇಂದ್ರ ಸಮಿತಿಗೆ ಬಿಜೆಪಿ ಶಿಸ್ತು ಸಮಿತಿ ವರದಿ ನೀಡಿತ್ತು.

ಈ ಕುರಿತು ಮಾತನಾಡಿದ್ದ ಬಿಜೆಪಿ ರಾಜ್ಯ ಘಟಕದ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜ ಪಾಟೀಲ ಅವರು, 'ಶಾಸಕರಾದ ಎಸ್.ಟಿ. ಸೋಮಶೇಖರ್ ಮತ್ತು ಶಿವರಾಮ ಹೆಬ್ಬಾರ್ ಅವರನ್ನು ಪಕ್ಷದಿಂದ ಉಚ್ಚಾಟಿಸುವಂತೆ ಕೇಂದ್ರ ಸಮಿತಿಗೆ ವರದಿ ನೀಡಿದ್ದೇನೆ.

## ಶಿವರಾಮ್ ಹೆಬ್ಬಾರ್ ಯಾರ ಮೇಲಾದರೂ ಅತ್ಯಾಚಾರ ಮಾಡಿದ್ದರೇ..? : ಡಿಕೆಶಿ

**ಬೆಂಗಳೂರು :** ಉತ್ತರ ಕನ್ನಡ ಜಿಲ್ಲೆಯ ಅರೆಬೈಲು ಕ್ಷೇತ್ರದ ಶಾಸಕ ಶಿವರಾಮ್ ಹೆಬ್ಬಾರ್ ಅವರನ್ನು ಬಿಜೆಪಿಯಿಂದ ಉಚ್ಚಾಟನೆ ಮಾಡಿರುವುದಕ್ಕೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಅವರೇನು ವಿಧಾನಸೌಧದಲ್ಲಿ ಯಾರ ಮೇಲಾದರೂ ಅತ್ಯಾಚಾರ ಮಾಡಿದ್ದರೇ ಎಂದು ಖಾರವಾಗಿ ಪ್ರಶ್ನಿಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಉಚ್ಚಾಟನೆ ಮಾಡಲು ಆ ಶಾಸಕರು ವಿಧಾನಸೌಧದಲ್ಲಿ ಯಾರನ್ನು ರೇಪ್ ಮಾಡಿರಲಿಲ್ಲ. ಯಾರಿಗೂ ಏಡ್ಸ್ ಇಂಜಕ್ಷನ್ ಚುಚ್ಚಲು ಹೋಗಿರಲಿಲ್ಲ. ಬಿಜೆಪಿಯವರು ತಮ ಬಳಿ ಮುತ್ತು ರತ್ನಗಳನ್ನು ಇಟ್ಟುಕೊಳ್ಳಲಿ ಎಂದು ಹೇಳುವ ಮೂಲಕ ಪರೋಕ್ಷವಾಗಿ ಮುನಿರತ್ನ ಪ್ರಕರಣವನ್ನು ಉಲ್ಲೇಖಿಸಿ ಬಿಜೆಪಿಗೆ ಟಾಂಗ್ ನೀಡಿದರು.



### ಸಾಧನ ಸಮಾವೇಶ ಯಶಸ್ವಿ:

## ಉಸ್ತುವಾರಿ ಸಚಿವರಿಗೆ ಕೆಪಿಸಿಸಿ ಅಧ್ಯಕ್ಷರಿಂದ ಪ್ರಶಂಸೆ

**ದಾವಣಗೆರೆ:** ಇತ್ತೀಚೆಗೆ ಹೊಸಪೇಟೆಯಲ್ಲಿ ಆಯೋಜಿಸಲಾಗಿದ್ದ ಸರ್ಕಾರದ ಸಾಧನೆಯ ಸಮರ್ಪಣ ಸಮಾವೇಶ ಯಶಸ್ವಿಯಾಗಿ ನಡೆದಿರುವ ಹಿನ್ನಲೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರಿಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರು ಹಾಗೂ ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪತ್ರದ ಮೂಲಕ ಅಭಿನಂದನೆ ಹಾಗೂ ಧನ್ಯವಾದವನ್ನು ಸಲ್ಲಿಸಿದ್ದಾರೆ.



ಬೃಹತ್ ಸಮಾವೇಶವನ್ನು ಯಶಸ್ವಿಗೊಳಿಸುವ ಸಲುವಾಗಿ ವಿಧಾನಸಭಾವಾರು ಸ್ಥಳೀಯ ಮುಖಂಡರು ಹಾಗು ಅಧಿಕಾರಿಗಳ ಸಭೆಗಳನ್ನು ಆಯೋಜಿಸಿ ಯಶಸ್ವಿಗೊಳಿಸಲು ಸಹಕರಿಸುವಂತೆ ನೀಡಿದ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಿದ್ದು, ಧನ್ಯವಾದ ಹಾಗೂ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಯಶಸ್ಸಿಗೆ ಸಹಕರಿಸಿದ ದಾವಣಗೆರೆ ಜಿಲ್ಲೆಯ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು, ಉಪಾಧ್ಯಕ್ಷರು, ಎಲ್ಲಾ ಪದಾಧಿಕಾರಿಗಳು, ಮಹಿಳಾ ವಿಭಾಗದ ಅಧ್ಯಕ್ಷರು ಉಪಾಧ್ಯಕ್ಷರು ಹಾಗೂ ಪದಾಧಿಕಾರಿಗಳಿಗೂ ಮತ್ತು ಎಪಿಎಂಸಿಯ ಮಾರುಕಟ್ಟೆಯ ಮಾಜಿ ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು, ಕೆಪಿಸಿಸಿ ಸದಸ್ಯರುಗಳು, ಮಹಾನಗರ ಪಾಲಿಕೆಯ ಮಾಜಿ ಮಹಾಪೌರರು ಹಾಗೂ ಮಾಜಿ ಸದಸ್ಯರುಗಳು, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯ್ತಿಯ ಮಾಜಿ ಅಧ್ಯಕ್ಷರು ಹಾಗೂ ಸದಸ್ಯರುಗಳು, ಗ್ರಾಮ ಪಂಚಾಯ್ತಿಯ ಹಾಲಿ ಹಾಗೂ ಮಾಜಿ ಅಧ್ಯಕ್ಷರು ಹಾಗೂ ಸದಸ್ಯರುಗಳು, ಕಾಂಗ್ರೆಸ್ ಪಕ್ಷದ ಎಲ್ಲಾ ವಿಭಾಗದ ಮುಖಂಡರು ಹಾಗೂ ಕಾರ್ಯಕರ್ತರುಗಳಿಗೆ ಮತ್ತು ಕಾರ್ಯಕರ್ತೆಯರುಗಳಿಗೆ ಸಚಿವ ಎಸ್.ಎಸ್ ಮಲ್ಲಿಕಾರ್ಜುನ್ ಧನ್ಯವಾದಗಳನ್ನು ತಿಳಿಸಿದ್ದಾರೆ.

## ಸಕಾಲದಲ್ಲಿ ರೈತರಿಗೆ ಬಿತ್ತನೆ ಬೀಜ ವಿತರಿಸಿ: ಶಾಸಕ ಕೆ.ಎಸ್. ಬಸವಂತಪ್ಪ




**ದಾವಣಗೆರೆ:** ರೈತರಿಗೆ ಅವಶ್ಯವಿರುವ ವಿವಿಧ ತಳಿಯ ಮೆಕ್ಕೆಜೋಳ, ವಿವಿಧ ತಳಿಯ ತೊಗರಿ ಬಿತ್ತನೆ ಬೀಜಗಳ ದಾಸ್ತಾನು ಮಾಡಿದ್ದು, ಅಗತ್ಯಕ್ಕೆ ತಕ್ಕಂತೆ ವಿತರಣೆ ಮಾಡಲಾಗುತ್ತದೆ ಎಂದು ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ ಹೇಳಿದರು.

ತಾಲ್ಲೂಕಿನ ಆನಗೋಡು ಗ್ರಾಮದ ರೈತ ಸಂಪರ್ಕ ಕೇಂದ್ರದಲ್ಲಿ ಮಂಗಳವಾರ ರೈತರಿಗೆ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಂಗಾರು ಪೂರ್ವದಲ್ಲಿಯೇ ಮಳೆ ಆರಂಭವಾಗಿದ್ದು, ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಅಭಾವ ಸೃಷ್ಟಿ ಆಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸುವ ಮೂಲಕ ರೈತರಿಗೆ ಸಮರ್ಪಕವಾಗಿ ಬೀಜ, ರಸಗೊಬ್ಬರ ವಿತರಿಸಂಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರೈತರು ಭೂಮಿ ಹದ ಮಾಡಿಕೊಂಡು ಈಗಾಗಲೇ ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದಾರೆ. ಕೃಷಿ ಇಲಾಖೆಯಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳು ದೊರೆಯುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಯಾವುದೇ ಕಾರಣಕ್ಕೂ ಕೃತಕ ಅಭಾವ ಸೃಷ್ಟಿ ಮಾಡದಂತೆ ಅಧಿಕಾರಿಗಳು ಗಮನ ಹರಿಸಬೇಕೆಂದು ತಾಕೀತು ಮಾಡಿದರು.

**ಬೇಡಿಕೆಗೆ ತಕ್ಕಂತೆ ಬೀಜ–ಗೊಬ್ಬರ ಪೂರೈಸಿ :** ರೈತರ ಬೇಡಿಕೆಗಳಿಗೆ ತಕ್ಕಂತೆ ಬಿತ್ತನೆ ಬೀಜ, ರಸಗೊಬ್ಬರ ಸರಬರಾಜು ಮಾಡಬೇಕು. ಈ ಭಾಗದಲ್ಲಿ 3175 ಕ್ವಿಂಟಾಲ್ ಡಿಎಪಿ ಬೇಡಿಕೆ ಇದ್ದು, 3115 ಕ್ವಿಂಟಾಲ್ ದಾಸ್ತಾನು ಇದೆ. ಯೂರಿಯಾ 6293 ಕ್ವಿಂಟಾಲ್ ಬೇಡಿಕೆ ಇದ್ದು, 14500 ಕ್ವಿಂಟಾಲ್ ದಾಸ್ತಾನು ಇದೆ. ರೈತರು ಯೂರಿಯಾಗಿಂತ ಅತೀ ಹೆಚ್ಚು ಡಿಎಪಿ ರಸಗೊಬ್ಬರ ಬಳಸುವುದರಿಂದ ಕೇಂದ್ರ ಸರ್ಕಾರ ಕೂಡಲೇ ಅಗತ್ಯಕ್ಕಿಂತ ಹೆಚ್ಚು ಡಿಎಪಿ ರಸಗೊಬ್ಬರ ಪೂರೈಕೆ ಮಾಡಬೇಕೆಂದು ಒತ್ತಾಯಿಸಿದರು.

**ದರ ಏರಿಸಿದರೆ ಕ್ರಮ :** ಒಂದು ಬ್ಯಾಗ್‌ಗೆ ಡಿಎಪಿ ರೂ. 1350, ಪೋಟಾಷ್ 1625 , 20:20 ಗೊಬ್ಬರ 1400 ದರ ನಿಗದಿ ಮಾಡಲಾಗಿದೆ. ಇದಕ್ಕಿಂತ ಹೆಚ್ಚಿನ ದರದಲ್ಲಿ ಗೊಬ್ಬರ ಮಾರಾಟ ಮಾಡುವುದು ಕಂಡು ಬಂದರೆ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು. ಒಂದು ವೇಳೆ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದರೆ ರೈತರು ಶಾಸಕರು ಅಥವಾ ಅಧಿಕಾರಿಗಳ ಗಮನಕ್ಕೆ ತರಬೇಕು.

ಕೆಲವು ಸೊಸೈಟಿ, ಅಂಗಡಿಗಳಲ್ಲಿ ನಿಗದಿಪಡಿಸಿದ ದರಕ್ಕಿಂತ ನೂರು, ಇನ್ನೂರು, ಹೆಚ್ಚಿಗೆ ತೆಗೆದುಕೊಳ್ಳಲಾಗುತ್ತಿದೆ ಎಂದು ರೈತರು ದೂರು ನೀಡಿದ್ದಾರೆ. ಈ ಬಗ್ಗೆ ಅಧಿಕಾರಿಗಳು ಪರಿಶೀಲನೆ ನಡೆಸಿ ವರದಿ ನೀಡಬೇಕೆಂದು ಸೂಚನೆ ನೀಡಿದರು.

## ಶ್ರೀ ಶನೈಶ್ಚರ ಸ್ವಾಮಿಯ ಬ್ರಹ್ಮ ರಥೋತ್ಸವ

**ದಾವಣಗೆರೆ:** ಶನೈಶ್ಚರ ಸ್ವಾಮಿಯ ಜಯಂತಿಯಾದ ಮಂಗಳವಾರ ಕೆಟಿಜೆ ನಗರದ 10 ನೇ ತಿರುವಿನಲ್ಲಿರುವ ಶ್ರೀ ಶನೀಶ್ವರ ದೇವಾಲಯ ಟ್ರಸ್ಟ್ ವತಿಯಿಂದ ಮಂಗಳವಾರ ಸ್ವಾಮಿಯ ಬ್ರಹ್ಮ ರಥೋತ್ಸವ ಭಕ್ತರ ಸಮೂಹದ ಸಮ್ಮುಖದಲ್ಲಿ ವೈಭವದಿಂದ ಜರುಗಿತು.



ಮಂಗಳವಾರ ಬೆಳಿಗ್ಗೆ ದೇವಾಲಯದ ಮುಂಭಾಗ ಸ್ವಾಮಿಯ ಬ್ರಹ್ಮ ರಥೋತ್ಸವಕ್ಕೆ ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಚಾಲನೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ದೇವಸ್ಥಾನ ಸಮಿತಿ ಅಧ್ಯಕ್ಷ ಬಿ.ಎನ್. ಮಲ್ಲೇಶ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ನಂತರ ರಥೋತ್ಸವವು ಬಡಾವಣೆಯ ಪ್ರಮುಖ ರಸ್ತೆಗಳಲ್ಲಿ ಭಕ್ತರ ಜಯಘೋಷದ ಮಧ್ಯೆ ಅದ್ದೂರಿಯಾಗಿ ಜರುಗಿತು. ನಂತರ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು. ಭಕ್ತರು ಸ್ವಾಮಿಯನ್ನು ಕಣ್ತುಂಬಿಕೊಂಡು, ಪ್ರಸಾದ ಸ್ವೀಕರಿಸಿ ಶನೈಶ್ಚರ ಸ್ವಾಮಿಯ ಕೃಪೆಗೆ ಪಾತ್ರರಾದರು.

### 'ಪಾರು' ಧಾರಾವಾಹಿ ಖ್ಯಾತಿಯ ಕಿರುತೆರೆ ನಟ

## ಶ್ರೀಧರ್ ನಾಯಕ್ ವಿಧಿವಶ

**ಬೆಂಗಳೂರು, ಮೇ 27–** ಕಿರುತೆರೆ ಹಾಗೂ ಬೆಳ್ಳಿತೆರೆಯಲ್ಲಿ ಇನ್ನೂ ಬಹಳಷ್ಟು ಕಾಲ ಮಿಂಚಬೇಕು ಎಂದು ಅಪಾರ ಕನಸು ಹೊತ್ತಿದ್ದ ನಟ ಶ್ರೀಧರ್ ನಾಯಕ್ (47) ಅವರ ಕನಸು ಈಡೇರುವ ಮುನ್ನವೇ ಬಣ್ಣದ ಲೋಕದ ನಂಟು ಕಳಚಿ ಬಾರದ ಲೋಕಕ್ಕೆ ತೆರಳಿದ್ದಾರೆ.



ಕಿರುತೆರೆಯಲ್ಲಿ ಸಣ್ಣ ಪುಟ್ಟ ಪಾತ್ರ ಮಾಡುವ ಮೂಲಕ ಜನರಿಗೆ ಚಿರಪರಿಚಿತರಾಗಿದ್ದ ಶ್ರೀಧರ್ ನಾಯಕ್ ಅವರಿಗೆ ಕೋವಿಡ್ ಸಮಯದಲ್ಲಿ ಯಾವುದೇ ಧಾರಾವಾಹಿಯಲ್ಲಿ ನಟಿಸಲು ಅವಕಾಶ ಸಿಗದೆ ಮನೆ ಬಾಡಿಗೆ ಕಟ್ಟಲು ಪರದಾಟ ನಡೆಸಿದ್ದರು. ಅಲ್ಲದೆ ಊಟ ಸರಿಯಾಗಿ ಮಾಡದೆ ದೇಹದಲ್ಲಿ ವಿಟಮಿನ್ ಹಾಗೂ ಪ್ರೋಟಿನ್ ಕಡಿಮೆಯಾಗಿತ್ತು. ಇದರಿಂದ ಆರೋಗ್ಯ ದಿನದಿಂದ ದಿನಕ್ಕೆ ಹದಗೆಡುತ್ತಾ ಹೋಯ್ತು ಎಂದು ಸ್ವತ: ಶ್ರೀಧರ್ ನಾಯಕ್ ಈ ಹಿಂದೆ ನೀಡಿದ್ದ ಸಂದರ್ಶನದಲ್ಲಿ ಹೇಳಿಕೊಂಡಿದ್ದರು.

ಕಳೆದ ಒಂದು ತಿಂಗಳ ಹಿಂದೆ ತಾವು ಅನಾರೋಗ್ಯ ಪೀಡಿತರಾಗಿ ಹೆಬ್ಬಾಳದ ಬ್ಯಾಪ್ಟಿಸ್ಟ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ದೃಶ್ಯವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡು ತಾವು ಆರ್ಥಿಕವಾಗಿ ಬಳಲುತ್ತಿದ್ದು ಧನಸಹಾಯಕ್ಕಾಗಿ ನೆರವು ಕೋರಿದ್ದರು. ನಂತರ ಕಿರುತೆರೆ, ಹಿರಿತೆರೆ ಕಲಾವಿರು, ತಂತ್ರಜ್ಞರಲ್ಲದೆ ಸಾರ್ವಜನಿಕರು ಕೂಡ ಸಹಾಯಹಸ್ತ ಚಾಚಿದ್ದರು.

ಶ್ರೀಧರ್ ನಾಯಕ್ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದ ವಿಡೀಯೋದಲ್ಲಿ ತಾವು ಶೀಘ್ರ ಗುಣಮುಖರಾಗಿ ಮತ್ತೆ ನಟಿಸುವುದಾಗಿ ಹೇಳಿದ್ದರು. ಆದರೆ ಅವರ ಆಸೆ ಕೊನೆಗೂ ಈಡೇರದೆ ಕಳೆದ ರಾತ್ರಿ 10 ಗಂಟೆ ಸುಮಾರಿಗೆ ನಿಧನರಾಗಿದ್ದು ಇಂದು ಅವರ ಅಂತ್ಯಕ್ರಿಯೆ ನೆರವೇರಲಿದೆ. ಕಲಾವಿದರು ಹಾಗೂ ಅಭಿಮಾನಿಗಳು ಶ್ರೀಧರ್ ನಾಯಕ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆಯಲು ಹೆಬ್ಬಾಳದ ಬ್ಯಾಪ್ಟಿಸ್ಟ್ ಆಸ್ಪತ್ರೆಯಲ್ಲಿ ಬೆಳಿಗ್ಗೆ 11 ಗಂಟೆಯವರೆಗೆ ವ್ಯವಸ್ಥೆ ಮಾಡಲಾಗಿತ್ತು.

ಪಾರು, ಮಂಗಳಗೌರಿ, ವಧು, ಮನೆಯೇ ಮಂತ್ರಾಲಯ ಸೇರಿದಂತೆ 40ಕ್ಕೂ ಹೆಚ್ಚು ಧಾರಾವಾಹಿಗಳು ಹಾಗೂ ಕಿಚ್ಚ ಸುದೀಪ್ ನಟನೆಯ ಮ್ಯಾಕ್ಸ್, ಚಿರಂಜೀವಿ ಸರ್ಜಾ ಅಭಿನಯದ ರಾಜಾಮಾರ್ತಂಡ, ಈಶ ಮಹೇಶ ಸೇರಿದಂತೆ ಕೆಲವು ತಮಿಳು ಸಿನಿಮಾಗಳಲ್ಲೂ ಶ್ರೀಧರ್ ನಾಯಕ್ ನಟಿಸಿದ್ದರು.

## ಕಾಂಗ್ರೆಸ್‌ಗೆ ಎರಡು ವರ್ಷ ಅಧಿಕಾರ ನೀಡಿದರೆ ಪಾಕಿಸ್ತಾನ ನಿರ್ನಾಮ

**ದಾವಣಗೆರೆ:** ಎರಡು ವರ್ಷ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ನೀಡಿದರೆ ಪಾಕಿಸ್ತಾನವನ್ನು ನಿರ್ನಾಮ ಮಾಡುತ್ತೇವೆ ಎಂದು ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ. ಶೆಟ್ಟಿ ಹೇಳಿದರು.



ಮಂಗಳವಾರ ದಾವಣಗೆರೆ ಜಿಲ್ಲಾ ಕಾಂಗ್ರೆಸ್ ವತಿಯಿಂದ ಕಾಂಗ್ರೆಸ್ ಕಚೇರಿಯಲ್ಲಿ ದೇಶದ ಮೊದಲ ಪ್ರಧಾನಿ ದಿವಂಗತ ಪಂಡಿತ್ ಜವಾಹರ್ ಲಾಲ್ ನೆಹರು ಪುಣ್ಯಸ್ಮರಣೆ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು.

ಕಳೆದ 11 ವರ್ಷದ ಹಿಂದೆ ಅಧಿಕಾರಕ್ಕೆ ಬಂದ ಬಿಜೆಪಿ ಪಕ್ಷ ಅಂದಿನಿಂದಲೂ ಪಾಕಿಸ್ತಾನದ ಹೆಸರು ಹೇಳಿಕೊಂಡು ರಾಜಕೀಯ ಮಾಡುತ್ತಾ ಬಂದಿದ್ದು, ಪಾಕಿಸ್ತಾನದ ವಿರುದ್ಧ ಯುದ್ಧ ನಡೆಸಿದರೆ ಎಲ್ಲಿ ನಮ್ಮ ಅಸ್ತಿತ್ವ ಇರುವುದಿಲ್ಲವೋ ಎಂಬ ಭಯದಿಂದ ಪಾಕಿಸ್ತಾನದ ವಿರುದ್ಧ ಸರಿಯಾದ ರೀತಿಯಲ್ಲಿ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದೂರಿದರು.

ಇದುವರೆಗೂ ಬಿಜೆಪಿ ಪಕ್ಷದ ಯಡಿಯೂರಪ್ಪನವರ ಮಕ್ಕಳಾಗಲಿ, ಜಿಎಂ ಸಿದ್ದೇಶ್ವರ ಮಕ್ಕಳಾಗಲಿ, ರೇಣುಕಾಚಾರ್ಯ ಮಕ್ಕಳಾಗಲಿ ಎಂದಿಗೂ ಬೀದಿಗಿಳಿದು ಹೋರಾಟ ನಡೆಸದೆ ಕೇವಲ ಬಡವರ ಮಕ್ಕಳನ್ನು ಹಿಂದೂ ಮುಸ್ಲಿಂ ಹೆಸರಿನಲ್ಲಿ ಗಲಾಟೆಗೆ ಪ್ರಚೋದಿಸುತ್ತಿದ್ದಾರೆ ಎಂದು ದೂರಿದರು.

ಪಂಡಿತ್ ಜವಾಹರ್ ಲಾಲ್ ನೆಹರು ಅವರು ದೇಶದ 545 ರಾಜ್ಯಗಳನ್ನು ಒಗ್ಗೂಡಿಸಿ ಭಾರತ ಬಲಿಷ್ಠ ರಾಷ್ಟ್ರವನ್ನಾಗಿಸಲು ಸಾಕಷ್ಟು ಶ್ರಮ ಪಟ್ಟರು ಎಂದು ಸ್ಮರಿಸಿದರು.

ಮಾಜಿ ಮೇಯರ್ ಕೆ. ಚಮನ್ ಸಾಬ್ ಮಾತನಾಡಿ ಈ ದೇಶಕ್ಕೆ ಸ್ವಾತಂತ್ರ ಲಭಿಸಿದಾಗ ಒಂದು ಗುಂಡು ಸೂಜಿಯನ್ನು ಸಹ ನಿರ್ಮಾಣ ಮಾಡದಷ್ಟು ಪರಿಸ್ಥಿತಿಯಲ್ಲಿ ಇದ್ದೆವು ಇಂದು ಬ್ರಹ್ಮೋಸ್ ತಯಾರಿಸಲು ಸಾಧ್ಯವಾಗಿದ್ದು ಪಂಡಿತ್ ನೆಹರು ಅವರ ದೂರದೃಷ್ಟಿಯಿಂದ ಎಂದು ತಿಳಿಸಿದರು.

ಪಂಡಿತ್ ಜವಾಹರ್ ಲಾಲ್ ನೆಹರು ಅವರು ಸ್ಥಾಪಿಸಿದ ಅನೇಕ ಸಂಸ್ಥೆಗಳನ್ನು ಇಂದು ಮೋದಿ ಸರ್ಕಾರ ಮಾರಾಟ ಮಾಡುತ್ತಿದೆ ಎಂದು ಆರೋಪಿಸಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಸ್. ಮಲ್ಲಿಕಾರ್ಜುನ್ ಮಾತನಾಡಿ, ಸ್ವಾತಂತ್ರ ಲಭಿಸಿದಾಗ ದೇಶ ಸೂಚನೆಯ ಪರಿಸ್ಥಿತಿಯಲ್ಲಿದ್ದು ಅಂದು ಇಡೀ ದೇಶಕ್ಕೆ ಆಹಾರ ಉತ್ಪಾದನೆ, ಕೈಗಾರಿಕೆ, ನೀರಾವರಿ ಕಲ್ಪಿಸಲು ಪಂಚವಾರ್ಷಿಕ ಯೋಜನೆಗಳನ್ನು ಜಾರಿಗೆ ತರುವ ಮೂಲಕ ದೇಶವನ್ನು ಸುಭಿಕ್ಷೆ ರಾಷ್ಟ್ರವನ್ನಾಗಿಸಲು ನೆಹರು ಅವರ ಕೊಡುಗೆ ಅಪಾರ ಎಂದು ಬಣ್ಣಿಸಿದರು.

ಮಹಾನಗರ ಪಾಲಿಕೆ ಸದಸ್ಯರಾದ ಎ. ನಾಗರಾಜ್, ಸಾಗರ್, ಮಾಜಿ ಸದಸ್ಯ ಸೀಮೆಎಣ್ಣೆ ಮಲ್ಲೇಶ್, ಗೋಪಿ ನಾಯ್ಕ, ಕೊಡಪಾನ ದಾದಾಪೀರ್, ಕವಿತಾ ಚಂದ್ರಶೇಖರ್, ದ್ರಾಕ್ಷಾಯಣಮ್ಮ, ಕಾವ್ಯ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಮಹಮ್ಮದ್ ಸಮೀವುಲ್ಲಾ,ಶಹನಾಜ್ ಇನ್ನಿತರರು ಉಪಸ್ಥಿತರಿದ್ದರು.

## ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಪೌರಸೇವಾ ನೌಕರರ ಮುಷ್ಕರ

**ಚಿಕ್ಕಮಗಳೂರು**–ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಸೇವಾ ಕಾರ್ಮಿಕರ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಇಂದು ನಗರಸಭೆ ಆವರಣದಲ್ಲಿ ಪೌರಸೇವಾ ನೌಕರರ ಸಂಘದ ಜಿಲ್ಲಾ ಶಾಖೆ ನೇತೃತ್ವದಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಿದ್ದಾರೆ.

ತಮ್ಮನ್ನು ಸರ್ಕಾರಿ ನೌಕರರೆಂದು ಪರಿಗಣಿಸಬೇಕು ಹಾಗೂ ಕೆಜಿಐಡಿ, ಜಿಪಿಎಫ್, ಜ್ಯೋತಿ ಸಂಜೀವಿನಿ ಸೇರಿದಂತೆ ಸರ್ಕಾರಿ ನೌಕರರು ಪಡೆಯುತ್ತಿರುವ ಎಲ್ಲಾ ಸೌಲಭ್ಯಗಳನ್ನು ನೀಡಬೇಕೆಂಬುದೂ ಸೇರಿ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಾಗುತ್ತಿದೆ.

ಪೌರ ನೌಕರರ ಸಂಘದ ಜಿಲ್ಲಾಧ್ಯಕ್ಷ ಎನ್. ಅಣ್ಣಯ್ಯ ಮಾತನಾಡಿ, ಮಹಾನಗರ ಪಾಲಿಕೆಯಲ್ಲಿರುವ ಪೌರ ಕಾರ್ಮಿಕರನ್ನು ಮಾತ್ರ ಕಾಯಂಗೊಳಿಸಲಾಗಿದೆ. ಆದರೆ, ಸ್ಥಳೀಯ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪೌರ ಸೇವಾ ನೌಕರರನ್ನು ಸರ್ಕಾರಿ ನೌಕರ–ರೆಂದು ಪರಿಗಣಿಸುವ ಜೊತೆಗೆ ಆರೋಗ್ಯ ವಿಮೆ, ಕೆಜಿಐಡಿ ಸೌಲಭ್ಯಗಳನ್ನು ಕಳೆದ 30 ವರ್ಷಗಳಿಂದ ವಾಟರ್ ಮ್ಯಾನ್‌ಗಳಾಗಿ ಸೇವೆ ಸಲ್ಲಿಸುತ್ತಿರುವವರಿಗೆ ನೇರ ಪಾವತಿ ಅಡಿಗೆ ತರಬೇಕೆಂದು ಒತ್ತಾಯಿಸಿದರು.

ಸರ್ಕಾರ ಇಂದು ಸಂಜೆ ವೇಳೆಗೆ ತಮ್ಮ ಬೇಡಿಕೆಗಳನ್ನು ಈಡೇರಿಸುವ ತೀರ್ಮಾನ ಕೈಗೊಂಡು ಭರವಸೆ ನೀಡಿದರೆ ಮುಷ್ಕರವನ್ನು ವಾಪಸ್ ಪಡೆಯುತ್ತೇವೆ. ಇಲ್ಲದಿದ್ದರೆ ಮುಷ್ಕರವನ್ನು ತೀವ್ರತರದಲ್ಲಿ ಮುಂದುವರೆಸುತ್ತೇವೆಂದು ಎಚ್ಚರಿಸಿದ ಅವರು, ಈ ಸಂಬಂಧ ಸಚಿವರು, ಶಾಸಕರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳು ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ 45 ದಿನಗಳ ಗಡುವು ನೀಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲದ ಹಿನ್ನೆಲೆಯಲ್ಲಿ ಇಂದಿನಿಂದ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಿದ್ದೇವೆಂದರು.




ಸಂಘದ ತಾಲ್ಲೂಕು ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ, ಪೌರ ಸೇವಾ ನೌಕರರು ಎದುರಿಸುತ್ತಿರುವ ಹಲವು ಸಮಸ್ಯೆಗಳು ಹಾಗೂ ವಿವಿಧ ಬೇಡಿಕೆಗಳನ್ನೊಳಗೊಂಡ ಮನವಿಯನ್ನು ಪ್ರತೀ ಇಲಾಖೆ, ಸಚಿವರಿಗೆ, ಸರ್ಕಾರಕ್ಕೆ ಸಲ್ಲಿಸಿ ಒತ್ತಾಯಿಸಿದ್ದರೂ ಗಮನಹರಿಸಿಲ್ಲ, ನೇರ ಪಾವತಿ ಮತ್ತು ಗುತ್ತಿಗೆ ಆಧಾರದ ನೌಕರರು, ಮನೆ ಮನೆ ಕಸ ಸಂಗ್ರಹಣೆ ನೌಕರರು ನಗರಸಭೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರನ್ನು ಕಾಯಂ ಮಾಡಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದೇವೆ ಎಂದರು.

ತಮ್ಮ ಬೇಡಿಕೆಗಳು ಈಡೇರುವವರೆಗೆ ಮುಷ್ಕರ ಮುಂದುವರೆಸುತ್ತೇವೆ, ಸರ್ಕಾರ ಈ ನಮ್ಮ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ ಸಾರ್ವಜನಿಕರಿಗೆ ತೊಂದರೆ–ಯಾಗದ ರೀತಿ ಸೂಕ್ತ ಕ್ರಮ ಕೈಗೊಂಡು ಬೇಡಿಕೆಗಳನ್ನು ಈಡೇರಿಸಬೇಕೆಂದು ಮನವಿ ಮಾಡಿದರು.

ನಗರಸಭೆ ಕಚೇರಿ ವ್ಯವಸ್ಥಾಪಕ ರವಿ ಮಾತನಾಡಿ, ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ 74ನೇ ಸಂವಿಧಾನಾತ್ಮಕ ತಿದ್ದುಪಡಿಯಾಗಿದ್ದರೂ ಪೌರ ನೌಕರರಿಗೆ ಸೌಲಭ್ಯ ಕಲ್ಪಿಸುವಲ್ಲಿ ಸರ್ಕಾರಗಳು ವಿಫಲವಾಗಿದ್ದು, ಕಳೆದ 50 ವರ್ಷಗಳಿಂದ ಹೋರಾಟ ನಡೆಸುತ್ತಿದ್ದರೂ ನೌಕರರ ನ್ಯಾಯಯುತವಾದ ಬೇಡಿಕೆಗಳು ಈಡೇರಿಲ್ಲ. ಸರ್ಕಾರಗಳು ಮಲತಾಯಿ ಧೋರಣೆ ಅನುಸರಿಸುತ್ತಿವೆ ಎಂದು ದೂರಿದರು.

ಪೌರಸೇವಾ ನೌಕರರಿಗೆ ಆರೋಗ್ಯ ವಿಮೆ ನೀಡದೆ ಸರ್ಕಾರ ತಾತ್ಸಾರ ಮನೋಭಾವ ತಾಳುತ್ತಿದೆ. ಕೂಡಲೇ ಪೌರ ನೌಕರರಿಗೆ ಕೆಜಿಐಡಿ ಸೌಲಭ್ಯ ನೀಡಿ ಸರ್ಕಾರಿ ನೌಕರರೆಂದು ಪರಿಗಣಿಸಬೇಕೆಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಆರ್.ಓ ಶಿವಾನಂದ್, ಸೂಪರ್‌ಡೆಂಟ್ ಲತಾಮಣಿ. ಆರೋಗ್ಯ ನಿರೀಕ್ಷಕರಾದ ವೆಂಕಟೇಶ್, ಈಶ್ವರ್, ನಾಗಪ್ಪ, ರಂಗಪ್ಪ, ಹೊರಗುತ್ತಿಗೆ ನೌಕರರಾದ ಕೃಷ್ಣ, ಮೂರ್ತಿ, ಪ್ರಸನ್ನ ಇತರರು ಉಪಸ್ಥಿತರಿದ್ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಯಮಿತ ತೊಂದರೆ ನಿಮಗೆ ಕೆಲವು ಸಮಸ್ಯೆಗಳನ್ನು ಉಂಟುಮಾಡಬಹುದು. ನಿಮ್ಮ ನರಮಂಡಲದ ಕಾರ್ಯವೆಸಗುತ್ತಿರಲು ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳಿ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಪ್ರಣಯದ ಸಂಬಂಧ ಅತ್ಯಾಕರ್ಷಕವಾಗಿದ್ದರೂ ಅದು ಬಹು ಕಾಲ ಬಾಳುವುದಿಲ್ಲ.

### ವೃಷಭ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರೆತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ಸ್ವಾನುಕಂಪದಲ್ಲಿ ಸಮಯ ವ್ಯರ್ಥ ಮಾಡದೇ ಜೀವನದ ಪಾಠಗಳನ್ನು ಕಲಿಯಲು ಪ್ರಯತ್ನಿಸಿ.

### ಮಿಥುನ ರಾಶಿ

ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಒಂದು ಮಂಕು ಕವಿದ ಮತ್ತು ನಿಧಾನ ದಿನದಲ್ಲಿ ಸ್ನೇಹಿತರು ಮತ್ತು ಸಂಗಾತಿ ನಿಮಗೆ ಆರಾಮ ಮತ್ತು ಸಂತೋಷ ತರುತ್ತಾರೆ.

### ಕರ್ಕ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಹೊಂದಿರುವ ಸಾಧ್ಯತೆ ಇದೆ ಆದರೆ ನಿಮ್ಮ ಬುದ್ಧಿವಂತಿಕೆಯಿಂದ ಈ ಹಾನಿಯನ್ನು ಲಾಭದಲ್ಲಿ ಪರಿವರ್ತಿಸಬಹುದು ನೀವು ನಂಬಿ ಅಥವಾ ಬಿಡಿ ನಿಮ್ಮ ಬಳಿಯಿರುವ ಯಾರಾದರೂ ನಿಮ್ಮನ್ನು ಅತ್ಯಂತ ನಿಕಟವಾಗಿ ಗಮನಿಸುತ್ತಿದ್ದಾರೆ ಮತ್ತು ನಮ್ಮನ್ನು ಅವರ ಆದರ್ಶವೆಂದು ಪರಿಗಣಿಸುತ್ತಾರೆ – ಇದು ನಿಮ್ಮ ಖ್ಯಾತಿಯನ್ನು ಹೆಚ್ಚಿಸುತ್ತದೆ.

### ಸಿಂಹ ರಾಶಿ

ಮಾನಸಿಕ ಒತ್ತಡ ತರುವ ಸುಪ್ತ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಪ್ರಣಯದ ನಡತೆಗಳು ಫಲ ನೀಡುವುದಿಲ್ಲ. ಸಹಯೋಗದಲ್ಲಿ ಹೊಸ ಉದ್ಯಮ ಆರಂಭಿಸಲು ಒಳ್ಳೆಯ ದಿನ.

### ಕನ್ಯಾ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

### ತುಲಾ ರಾಶಿ

ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು. ಗುಣಪಡಿಸಲಾರದ್ದನ್ನು ತಡೆದುಕೊಳ್ಳಬೇಕು ಎಂದು ನೆನಪಿಡಿ. ಇಂದು ನಿಮ್ಮ ಯಾವುದೇ ಚಲಿಸಬಲ್ಲ ಅಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ.

### ವೃಶ್ಚಿಕ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ಕುಟುಂಬದವರು, ಮಕ್ಕಳು ಮತ್ತು ಸ್ನೇಹಿತರೊಂದಿಗೆ ಕಳೆದ ಸಮಯ ನಿಮ್ಮ ಚೈತನ್ಯವನ್ನು ಮರಳಿ ನೀಡಲು ಮುಕ್ತವಾಗಿರುತ್ತದೆ. ನಿಮ್ಮ ಪ್ರೀತಿಪಾತ್ರರೊಡನೆ ನಿಮ್ಮ ವೈಯಕ್ತಿಕ ಭಾವನೆಗಳು / ರಹಸ್ಯಗಳನ್ನು ಹಂಚಿಕೊಳ್ಳಲು ಇದು ಸರಿಯಾದ ಸಮಯವಲ್ಲ.

### ಧನು ರಾಶಿ

ಹೆಚ್ಚಿನ ಕ್ಯಾಲೋಜರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ತಪ್ಪದೆ ಮಾಡಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಬಾಕಿಯಿರುವ ಮನೆಯ ಕೆಲಸ ಮುಗಿಸಲು ನಿಮ್ಮ ಸಂಗಾತಿಯ ಜೊತೆ ಏರ್ಪಾಡುಗಳನ್ನು ಮಾಡಿ. ಪ್ರತಿ ದಿನ ಪ್ರೀತಿಯಲ್ಲಿ ಬೀಳುವ ನಿಮ್ಮ ಸ್ವಭಾವವನ್ನು ಬದಲಾಯಿಸಿ.

### ಮಕರ ರಾಶಿ

ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ.

### ಕುಂಭ ರಾಶಿ

ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ಮಕ್ಕಳಲ್ಲಿ ನಿಮಗೆ ರೋಮಾಂಚಕ ಸುದ್ದಿ ತರಬಹುದು. ನಿಮ್ಮ ಪ್ರೀತಿಯ ಕಥೆ ಇಂದು ಒಂದು ಹೊಸ ತಿರುವು ತೆಗೆದುಕೊಳ್ಳಬಹುದು, ಇಂದು ನಿಮ್ಮ ಸಂಗಾತಿ ಮದುವೆಯ ಬಗ್ಗೆ ನಿಮ್ಮೊಂದಿಗೆ ಮಾತನಾಡಬಹುದು.

### ಮೀನ ರಾಶಿ


ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು.

# ವೇತನಕ್ಕೆ ಆಗ್ರಹಿಸಿ ಮಳೆಯಲ್ಲಿಯೇ ಪ್ರತಿಭಟನೆ

## ನರೇಗಾ ಹೊರಗುತ್ತಿಗೆ ಸಿಬ್ಬಂದಿ 5 ತಿಂಗಳ ಸಂಬಳ ಬಾಕಿ

**ಗದಗ :** ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ನೂರಾರು ಹೊರಗುತ್ತಿಗೆ ನೌಕರರು ಮತ್ತು ಗ್ರಾಮ ಕಾಯಕ ಮಿತ್ರರರಿಗೆ ಕಳೆದ 5 ತಿಂಗಳಿಂದ ವೇತನ ಆಗ್ರಹಿಸಿ ಸೋಮವಾರ ನಗರದ ಜಿಲ್ಲಾಡಳಿತ ಭವನದ ಮುಂದೆ ಮಳೆಯನ್ನೂ ಲೆಕ್ಕಿಸದೆ ಶಾಂತಿಯುತವಾಗಿ ಪ್ರತಿಭಟನೆ ನಡೆಸಿ ರ್ಯಾಲಿ ಮೂಲಕ ತೆರಳಿ ಜಿಲ್ಲಾಧಿರಿ ಎನ್. ಶ್ರೀಧರ ಅವರಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ನರೇಗಾ ನೌಕರರ ಸಂಘದ ಜಿಲ್ಲಾಧ್ಯಕ್ಷ ಸುರೇಶ ಬಾಳಿಕಾಯಿ ಮಾತನಾಡಿ, ಗ್ರಾಮೀಣಾಭಿವೃದ್ಧಿಯಲ್ಲಿ ಉದ್ಯೋಗ ಖಾತರಿ ಯೋಜನೆ ಮಹತ್ತರ ಪಾತ್ರ ವಹಿಸಿದೆ. ಕೂಲಿಕಾರರಿಗೆ ನರೇಗಾ ಕೆಲಸ ಕೊಡಿಸುವುದು, ಯೋಜನೆಯಡಿ ಹಳ್ಳಿಗಳಲ್ಲಿ ಆಸ್ತಿ ಸೃಜನೆಗಳಲ್ಲಿ ನರೇಗಾ ನೌಕರರ ಪಾತ್ರ ಬಹುಮುಖ್ಯವಾಗಿದೆ. ಆದರೆ, ನೌಕರರಿಗೆ ಪ್ರತಿ ತಿಂಗಳು ವೇತನ ಸರಿಯಾಗಿ ಆಗದೆ ತುಂಬಾ ಸಮಸ್ಯೆ ಎದುರಿಸುತ್ತಿದ್ದಾರೆ. ಮಕ್ಕಳ ಶಾಲಾ ದಾಖಲಾತಿ, ಕುಟುಂಬದ ನಿರ್ವಹಣೆ, ಕೌಟುಂಬಿಕ ಆರೋಗ್ಯ ಸಮಸ್ಯೆಗೆ ವೇತನ ಪಾವತಿಯಾಗದೆ ಇರುವುದು ನಾನಾ ಸಮಸ್ಯೆ ಕಾರಣವಾಗಿದೆ. ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಜಿಲ್ಲಾ ಹಂತದಲ್ಲಿ ಎಡಿಪಿಸಿ, ಡಿಎಂಐಎಸ್, ಡಿಐಇಸಿ, ಡಿಎಎಂ ತಾಲೂಕು ಹಂತದಲ್ಲಿ ಟಿಐಇಸಿ, ಟಿಸಿ, ಟಿಎಂಐಎಸ್, ಟಿಎಇ (ಸಿವಿಲ್, ತೋಟಗಾರಿಕೆ, ರೇಷ್ಮೆ, ಅರಣ್ಯ, ಕೃಷಿ) ವಿಭಾಗದಲ್ಲಿ ಹಾಗೂ ಗ್ರಾಮ ಕಾಯಕ ಮಿತ್ರರು ಸೇರಿ ವಿವಿಧ ಹುದ್ದೆಗಳಲ್ಲಿ 130ಕ್ಕೂ ಹೆಚ್ಚು ಜನ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಎಲ್ಲ ನರೇಗಾ ಯೋಜನೆಯ ಸಿಬ್ಬಂದಿಗೆ ಕಳೆದ




5 ತಿಂಗಳಿಂದ ವೇತನ ಪಾವತಿಯಾಗಿಲ್ಲ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಾದ ಭರತ್ ಎಸ್. ಅವರು ಸ್ಥಳಕ್ಕೆ ಆಗಮಿಸಿ ಮನವಿ ಸ್ವೀಕರಿಸಿ ಮಾತನಾಡಿ, ರಾಜ್ಯಾದ್ಯಂತ ಸಮಸ್ಯೆ ಉದ್ಭವವಾಗಿದೆ. ಸರ್ಕಾರದ ಮಟ್ಟದಲ್ಲಿ ಇದನ್ನು ಬಗೆಹರಿಸಲು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

ರಾಜ್ಯ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಕುಮಾರ ಪೂಜಾರ ಅವರು ಮಾತನಾಡಿ, ಒಂದೆರಡು ತಿಂಗಳು ವೇತನವಾಗದಿದ್ದರೆ ಸಮಸ್ಯೆ ಆಗುತ್ತದೆ. ಅಂತಹದರಲ್ಲಿ ಐದು ತಿಂಗಳಿನಿಂದ ವೇತನವಿಲ್ಲದೆ ಕೆಲಸ ನಿರ್ವಹಣೆ ಮಾಡುತ್ತಿರುವುದು ಶ್ಲಾಘನೀಯವಾಗಿದೆ. ಸರ್ಕಾರ ಕೂಡಲೇ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು. ನರೇಗಾ ಅನುಷ್ಠಾನಕ್ಕೆ ಪ್ರತಿಭಟನೆಯಲ್ಲಿ ಭಾಗವಹಿಸಿರುವ ಎಲ್ಲರೂ ಅತ್ಯವಶ್ಯವಾಗಿದ್ದಾರೆ. ಆದ್ದರಿಂದ ಸರ್ಕಾರ ವೇತನ ಪಾವತಿ ವಿಳಂಬವಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಸಂಘದ ಪರವಾಗಿ ಆಗ್ರಹಿಸಿದರು.

ಜಿಲ್ಲಾ ಸಂಘದ ನಿಕಟ ಪೂರ್ವ ಅಧ್ಯಕ್ಷ ಲಿಂಗರಾಜ ಮುದಿಗೌಡ್ರ ಮಾತನಾಡಿ, ನರೇಗಾ ನೌಕರರು ವೇತನವಿಲ್ಲದೆ ಜನವರಿ 2025ರಿಂದ ಈವರೆಗೂ ಕೆಲಸ ಮಾಡುತ್ತಿದ್ದಾರೆ. ಎಷ್ಟೊ ನೌಕರರು ನಾಲ್ಕು ತಿಂಗಳಿಂದ ಕೈಗಡ ಇಲ್ಲವೆ ಬಡ್ಡಿ ಮೂಲಕ ಹಣ ಪಡೆದು ಕುಟುಂಬ ನಿರ್ವಹಣೆ ಮಾಡುತ್ತಿದ್ದಾರೆ. ವೇತನ ವಿಳಂಬ ಅನೇಕ ಸಮಸ್ಯೆಗಳಿಗೆ ಕಾರಣವಾಗಿದೆ ಎಂದರು. ಇದಲ್ಲದೆ ಕಳೆದ ರಾಜ್ಯ ಸರಕಾರದ ಬಜೆಟ್ ನಲ್ಲಿ ನರೇಗಾ ನೌಕರರಿಗೆ ಆರೋಗ್ಯ ವಿಮೆ ಸೌಲಭ್ಯ ಕಲ್ಪಿಸುವ ಆದೇಶ ಹೊರಡಿಸಿದ್ದಾರೆ. ಜೀವನ ಭದ್ರತೆ ಇಲ್ಲದೇ ಕೆಲಸ ಮಾಡುತ್ತಿರುವ ನರೇಗಾ ನೌಕರರಿಗೆ ಆರೋಗ್ಯ ವಿಮೆ ಸೌಲಭ್ಯ ಸಿಗುವುದು ಅತ್ಯಗತ್ಯವಾಗಿದೆ ಎಂದರು.

ಸಂಘದ ಜಿಲ್ಲಾ ಉಪಾಧ್ಯಕ್ಷ ಸಿದ್ದು ಗುಡಿಮನಿ ಮಾತನಾಡಿ, ಪ್ರತಿ ತಿಂಗಳ ಸಂಬಳವನ್ನೇ ನಂಬಿರುವ ಉದ್ಯೋಗ ಖಾತರಿ ಯೋಜನೆಯ ಸಿಬ್ಬಂದಿಗಳು, ವೇತನವಿಲ್ಲದೇ ಕಷ್ಟ ಎದುರಿಸುತ್ತಿದ್ದಾರೆ. ಕೂಲಿಕಾರರಿಗೆ ಕೆಲಸ ನೀಡಲು ಕ್ಷೇತ್ರ ಭೇಟಿ ನೀಡಲು ಸಮಸ್ಯೆಯಾಗಿದೆ. ನಮ್ಮ ಕುಟುಂಬದ ನಿರ್ವಹಣೆ, ಮಕ್ಕಳ ವಿದ್ಯಾಭ್ಯಾಸ, ಆಸ್ಪತ್ರೆ ಖರ್ಚು ವೆಚ್ಚಗಳು, ಇಎಂಐ ಪಾವತಿಸಲು ಹಾಗೂ ಸಂಬಳ ಇಲ್ಲದ್ದರಿಂದ ನಿತ್ಯ ಕಚೇರಿಗೆ ಹೋಗಿ ಬರಲು ಹತ್ತಾರು ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ ಎಂದರು.

ಜಿಲ್ಲಾ ಸಂಘದ ಕಾರ್ಯದರ್ಶಿ ಅರುಣ ಸಿಂಗ್ರಿ ಮಾತನಾಡಿ, ಕಳೆದ ನಾಲ್ಕು ತಿಂಗಳಿಂದ ನಮಗೆ ವೇತನ ಆಗಿಲ್ಲ. ಕೆಲಸದ ಒತ್ತಡವೂ ಹೆಚ್ಚಿದ್ದು, ಸಾಲ-ಸೂಲ ಮಾಡಿ ಜೀವನ ನಡೆಸುತ್ತಿದ್ದೇವೆ. ಗ್ರಾಮೀಣ ಜನರು ಗೂಳೆ ಹೋಗದಂತೆ ತಪ್ಪಿಸಿ ಇದ್ದ ಊರಲ್ಲಿ ಕೆಲಸ ಒದಗಿಸುವ ಕೆಲಸ ಮಾಡುತ್ತೀರುವ ನೂರಾರು ನೌಕರರೆ ಗೂಳೆ ಹೋಗುವ ಪರಿಸ್ಥಿತಿ ಉದ್ಭವಿಸಿದೆ ಎಂದು ಹತಾಶೆ ವ್ಯಕ್ತಪಡಿಸಿದರು.

ಇದೇ ವೇಳೆ ನೌಕರರು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗಿದರು. ನಂತರ ರ್ಯಾಲಿ ಮೂಲಕ ತೆರಳಿ ಜಿಲ್ಲಾಧಿಕಾರಿಯವರಿಗೆ ಮನವಿ ಸಲ್ಲಿಸಿದರು.

ಸಂಘದ ಸದಸ್ಯರಾದ ಶಾಂತಾ ತಿಮ್ಮರಡ್ಡಿ, ದಿನೇಶ ಮಲ್ಲನಗೌಡ್ರ, ಗಂಗಾಧರ ಬೇಗೂರ ಇತರರು ಮಾತನಾಡಿದರು. ಸಂಘದ ರಾಜ್ಯ ಪ್ರತಿನಿಧಿ ಕಿರಣಕುಮಾರ ಎಸ್.ಎಚ್., ಮಲ್ಲಿಕಾರ್ಜುನ ಸರ್ವಿ, ವೀರಭದ್ರಪ್ಪ ಸಜ್ಜನ, ಮಹೇಶ ಚಿತ್ತವಾಡಗಿ, ಹನುಮಂತ ಡಂಬಳ, ಪ್ರವೀಣ ಸೂಡಿ, ವೀರೇಶ ಬಸನಗೌಡ್ರ, ವಿಜಯಲಕ್ಷ್ಮೀ ಅಂಗಡಿ, ರೇಷ್ಮಾ ಕೇಳೂರ, ಮಂಜುನಾಥ ಹಳ್ಳದ, ಗ್ರಾಮ ಕಾಯಕ ಮಿತ್ರರು ಇತರರು ಇದ್ದರು.

# ಸಂಸದರಿಂದ ಭೂ ಕುಸಿತ ಪರಿಶೀಲನೆ

**ಹಾಸನ:** ರಾಷ್ಟ್ರೀಯ ಹೆದ್ದಾರಿ 75 ರಲ್ಲಿ ಭೂ ಕುಸಿತವಾಗಿರುವ ಪ್ರದೇಶಗಳಿಗೆ ಇಂದು ಸಂಸದರಾದ ಶ್ರೇಯಸ್ ಪಟೇಲ್ಅವರು ಭೇಟಿ ನೀಡಿ ಪರಿಶೀಲನೆ ನಡೆಸಿ ಸಾರ್ವಜನಿಕರಿಗೆತೊಂದರೆಯಾಗದಂತೆ ಹಾಗೂ ಸುಗಮ ಸಂಚಾರಕ್ಕೆ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇನ್ನುಎರಡು ಕಿ.ಮೀ ರಸ್ತೆಕಾಮಗಾರಿಗೆ ಭೂಕುಸಿತವೇ ದೊಡ್ಡ ಸವಾಲಾಗಿದೆ, ತಡೆಗೋಡೆಕಟ್ಟಿರುವ ಕೆಲವು ಕಡೆಗಳಲ್ಲಿ ಮಣ್ಣು ಕುಸಿದಿದ್ದು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು, ಜವಾಬ್ದಾರಿಯುತವಾಗಿ ಕೆಲಸ ನಿರ್ವಹಣೆ ಮಾಡುವಂತೆಎನ್.ಹೆಚ್.ಎ.ಐ ಅಧಿಕಾರಿಗಳಿಗೆ ಸೂಚಿಸಿದರು.

ಈ ಬಾರಿಯೂಕೂಡ ಭೂ ಕುಸಿತ ಉಂಟಾಗಿದೆಆದರೆ ಕಳೆದ ಬಾರಿ ಮುಂಜಾಗ್ರತಕ್ರಮವನ್ನುಕೈಕೊಂಡಿದ್ದರಿಂದ ಆನೆ ಮಹಲ್ ಹಾಗೂ ಮತ್ತಿತರ ಸ್ಥಳಗಳಲ್ಲಿ ಸ್ವಲ್ಪ ಭೂ ಕುಸಿತ ಉಂಟಾಗುತ್ತಿರುವುದರಿಂದ ಉಪ ವಿಭಾಗಾಧಿಕಾರಿ ಹಾಗೂ ಎನ್.ಹೆಚ್.ಎ.ಐ ಪ್ರಾಧಿಕಾರದ ಅಧಿಕಾರಿಗಳು ಮುನ್ನೆಚ್ಚರಿಕೆಕ್ರಮ ಕೈಗೊಳ್ಳುತ್ತಾರೆ ಎಂದು ತಿಳಿಸಿದರು.

ನಾವು ಕಳೆದ ಬಾರಿ ಭೇಟಿ ನೀಡಿದಾಗ ಹಾಗೂ ಇಂದು ಭೇಟಿ ನೀಡಿ ನೋಡಿದಾಗ ಸಾಕಷ್ಟು ಕೆಲಸಗಳಾಗಿವೆ. ಆದರೂಯಾವರೀತಿಯಾಗಿ ವಿಫಲರಾಗಿದ್ದಾರೆಎಂದುಪರಿಶೀಲಿಸಿದಾಗಮಣ್ಣು ಬಹಳ ತೇವಾಂಶಯುತವಾಗಿರುವುದರಿಂದ



ಕುಸಿತ ಉಂಟಾಗುತ್ತಿದೆ, ಹೆದ್ದಾರಿಯ ಬಲಭಾಗದಲ್ಲಿರಸ್ತೆ ಸಂಚಾರಕ್ಕೆದಾರಿ ಮಾಡಿಕೊಡುತ್ತೇವೆ ಒಟ್ಟಾರೆಯಾಗಿ ಸಾರ್ವಜನಿಕರಿಗೆ ಸಂಚಾರಕ್ಕೆಯಾವುದೇರೀತಿಯ ತೊಂದರೆಉಂಟಾಗದಂತೆ ನೋಡಿಕೊಳ್ಳುತ್ತೇವೆ ಎಂದರು.

ಕೇಂದ್ರ ಸಾರಿಗೆ ಸಚಿವರನ್ನು ಈಗಾಗಲೇ ಭೇಟಿ ಮಾಡಿದ್ದು, 13 ಕೋಟಿಯ ವೈಜ್ಞಾನಿಕಯೋಜನೆಯನ್ನು ಸಿದ್ಧಪಡಿಸಿದ್ದಾರೆ. ಈಗಾಗಲೇ ಟೆಂಡರ್ಕೂಡಾಕರೆಯಲಾಗಿದೆ. ವೆಸ್ಟ್ ಬೆಂಗಾಳ್ ಮಾದರಿಯಲ್ಲಿಟರ್ಫಿಂಗ್ ಕೆಲಸ ಮಾಡಲುಏಜೆನ್ಸಿಕೂಡ ಫಿಕ್ಸ್ಆಗಿದೆಎಂದಅವರು ಕೆಲಸ ಮುಂದಿನ ಮಾನ್ಸೂನ್ ವೇಳೆಗೆ ಪೂರ್ಣಗೊಳ್ಳಲಿದೆ. ಮುಂದೆಯಾವುದೇರೀತಿಯ ಭೂ ಕುಸಿತ ಉಂಟಾಗುವುದಿಲ್ಲ ಎಂದು ತಿಳಿಸಿದರು.

ಯಾವುದೇರೀತಿಯ ಪ್ರಾಣಪಾಯವಾಗದರೀತಿಯಲ್ಲಿ ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಳ್ಳಲು ನಾವೆಲ್ಲರೂ ಸನ್ನದ್ಧರಾಗಿದ್ದೇವೆಎಂದು ಹೇಳಿದರು.

ಕಾಮಗಾರಿ ವಿಷಯದಲ್ಲಿಯಾವುದೇ ರೀತಿಯರಾಜಿಇಲ್ಲ, ಕಳಪೆ ಕಾಮಗಾರಿ ಮಾಡಿದ್ದರೆ ಪರಿಶೀಲಿಸಿ ಅದರ ಸತ್ಯತೆಯನ್ನು ತಿಳಿದು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದ ಅವರು ಮಳೆಯ ಕಾಲ ಮುಗಿಯುವವರೆಗೂಎಲ್ಲಾ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರುವಂತೆ ಈಗಾಗಲೇ ನಿರ್ದೇಶನ ನೀಡಲಾಗಿದೆಎಂದರು.

ಉಪ ವಿಭಾಗಾಧಿಕಾರಿ ಶೃತಿ, ಎನ್ಹೆಚ್.ಎ.ಐ ಅಧಿಕಾರಿಗಳು ಹಾಜರಿದ್ದರು.

# ಜಿಲ್ಲಾಕುರುಬರ ಸಂಘದ ಅಧ್ಯಕ್ಷರಾಗಿ ಕೆ.ಎಸ್. ಶಾಂತೇಗೌಡ ಆಯ್ಕೆ

**ಚಿಕ್ಕಮಗಳೂರು:** ಜಿಲ್ಲಾಕುರುಬರ ಸಂಘದಅಧ್ಯಕ್ಷರಾಗಿಗುತ್ತಿಗೆದಾರರಾದಕೆ.ಎಸ್. ಶಾಂತೇಗೌಡಅವರನ್ನು ಸರ್ವಾನುಮತದಿಂದ ಅವಿರೋಧವಾಗಿಆಯ್ಕೆಮಾಡಲಾಗಿದೆ.

ಇಂದು ನಗರದ ಕನಕ ಭವನದಲ್ಲಿ ನಡೆದಜಿಲ್ಲಾಕುರುಬರ ಸಂಘದ ಸರ್ವ ಸದಸ್ಯರ ಸಭೆಯಲ್ಲಿ ಸಂಘದಲ್ಲಿ ಹಾಲಿ ಪ್ರಧಾನ ಕಾರ್ಯದರ್ಶಿಯಾಗಿದ್ದ ಕೆ.ಎಸ್. ಶಾಂತೇಗೌಡಅವರನ್ನು ಸರ್ವಾನುಮತದಿಂದ ಆಯ್ಕೆಮಾಡಲಾಗಿದೆ.

ನೂತನಅಧ್ಯಕ್ಷರಾಗಿಆಯ್ಕೆಯಾದ ಬಳಿಕ ಮಾತನಾಡಿದ ಶಾಂತೇಗೌಡರು ಸಮಾಜದ ಕೆಲಸ ಮಾಡಿಕೊಂಡು ಬರುತ್ತಿದ್ದು, ಈಗ ನನ್ನನ್ನುಜಿಲ್ಲಾಧ್ಯಕ್ಷರನ್ನಾಗಿಆಯ್ಕೆಮಾಡಿರುವುದರಿಂದಉತ್ತಮವಾಗಿ ಸಮುದಾಯದ ಕೆಲಸ ಮಾಡಲುಗುರಿ ಹೊಂದಿದ್ದೇನೆಎಂದರು.

ಕನಕ ಭವನಕ್ಕೆಕಾಂಪೌಂಡ್ ನಿರ್ಮಾಣ, ಅಡುಗೆ ಮನೆ ಮುಂತಾದವುಗಳ ನಿರ್ಮಾಣದಜೊತೆಗೆಕುರುಬ ಸಮಾಜದ ಸರ್ವಾಂಗೀಣಅಭಿವೃದ್ಧಿಗೆ ಶ್ರಮಿಸುವುದಾಗಿ



ಭರವಸೆ ನೀಡಿದರು.

ಕಳೆದ ಹತ್ತಾರು ವರ್ಷಗಳಿಂದ ಕುರುಬರ ಸಂಘದಅಧ್ಯಕ್ಷರಾಗಿದ್ದ ಕೆ.ಎಂ.ಮಂಜುನಾಥ್ ಮಾತನಾಡಿ, ತಮ್ಮಅಧಿಕಾರವಧಿಯಲ್ಲಿ ಸಹಕರಿಸಿದ ಎಲ್ಲಾ ಸರ್ವ ಸದಸ್ಯರಿಗೂಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಸಂಘದ ಹಿರಿಯ ಸದಸ್ಯರುಗಳಾದ ಕೆ.ಎ. ಗೋಪಾಲಕೃಷ್ಣ, ಕೆ.ವಿ. ಮಂಜುನಾಥ, ಎನ್.ಹೆಚ್. ಮೋಹನ್, ರೇಖಾಹುಲಿಯಪ್ಪಗೌಡ, ಡಿ.ಸಿ.ಪುಟ್ಟೇಗೌಡ, ಹೆಚ್.ಪಿ ಮಂಜೇಗೌಡ, ಲಾಯರ್ ಮಂಜುನಾಥ, ರಾಮಣ್ಣ, ಹೆಚ್.ಎಸ್. ಪುಟ್ಟೇಗೌಡ, ದೇವರಹಳ್ಳಿ ಡಿ.ಎಂಜನಾರ್ಧನ, ಸಿದ್ದೇಗೌಡ, ಬೀರೇಗೌಡದೇವೇಗೌಡ, ರೇವಣ್ಣ, ಡಿ.ಎಸ್. ಚಂದ್ರೇಗೌಡ, ಭದ್ರೇಗೌಡ, ಧರ್ಮೇಶ್, ತ್ರಿಭುವನ್, ಪುಷ್ಪರಾಜ್, ರಾಮಣ್ಣ, ಲಕ್ಷ್ಮೀಕಾಂತ್, ಜಗದೀಶ್, ಶ್ರೀನಿವಾಸ್ ಮತ್ತಿತರರು ಉಪಸ್ಥಿತರಿದ್ದರು.

# ಸಾರ್ವಜನಿಕರು ಮನೆ ಸುತ್ತಮುತ್ತ ಸ್ವಚ್ಛತೆ ಕಾಪಾಡಬೇಕು: ಡಾ.ಎಸ್.ಸೀಮಾ

**ಚಿಕ್ಕಮಗಳೂರು:** ಜಿಲ್ಲಾದ್ಯಂತ ಡೆಂಗ್ಯೂ ಪ್ರಕರಣಗಳು ಕಂಡು ಬರುತ್ತಿರುವ ಹಿನ್ನಲೆಯಲ್ಲಿ ಸಾರ್ವಜನಿಕರು ಮನೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎಸ್.ಸೀಮಾ ಅವರು ತಿಳಿಸಿದರು.

ಮೇ 23 ರಂದು ನಗರದ ಕೋಟೆಯಲ್ಲಿ ನಡೆದ ಲಾರ್ವಾ ಸಮೀಕ್ಷೆ ವೇಳೆ ಭೇಟಿ ನೀಡಿದ ಅವರು ಮಾತನಾಡಿ, ಮನೆಯ ಸುತ್ತಮುತ್ತ ಸೊಳ್ಳೆ ಉತ್ಪತ್ತಿ ಆಗುವಂತೆ ನೀರು ನಿಲ್ಲಲು ಬಿಡಬಾರದು. ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಪಡಿಸಬೇಕು ಮತ್ತು ಜ್ವರ ಬಂದ ಸಂದರ್ಭದಲ್ಲಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆದು ವಿಶ್ರಾಂತಿ ಪಡೆದುಕೊಳ್ಳುವಂತೆ ಮತ್ತು ಡೆಂಗ್ಯೂ ನಿಯಂತ್ರಣ ಕ್ರಮಗಳನ್ನು ಅನುಸರಿಸುವಂತೆ ಸಲಹೆ ನೀಡಿದರು.

ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ಒಳಗೊಂಡಂತೆ ತಂಡಗಳನ್ನಾಗಿ ಮಾಡಿ ಲಾರ್ವಾ ಸಮೀಕ್ಷೆ ನಡೆಸಲಾಗುತ್ತಿದ್ದು, ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಬಗ್ಗೆ ಮತ್ತು ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವ ಬಗ್ಗೆ ಅರಿವನ್ನು ಮೂಡಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜೆ.ಎನ್.ಬೇಬಿ,



ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಜಯಣ್ಣ, ಕಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನವೀನ್ ಮತ್ತು ಶ್ರೀನಿಧಿ, ಪ್ರಾಥಮಿಕ ಆರೋಗ್ಯ ಸುರಕ್ಷಾತಾಧಿಕಾರಿಗಳಾದ ಚಂದನ ಮತ್ತು ವೀಣಾ ಭಾಗವಹಿಸಿದ್ದರು.

# ಅರ್ಜಿ ಆಹ್ವಾನ

**ಶಿವಮೊಗ್ಗ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಶೇಕಡಾ 90ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಪ್ರತಿಭಾನ್ವಿತ ಸರ್ಕಾರಿ ನೌಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡುವ ಸಲುವಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಹ ಸರ್ಕಾರಿ ನೌಕರರ ಮಕ್ಕಳು ದಿನಾಂಕ: 31-05-2025 ರೊಳಗಾಗಿ ಆನ್ ಲೈನ್ https://ksgeanews.blogspot.com/2025/05/sslc-puc-2025.html ಮೂಲಕ ಅರ್ಜಿ ಸಲ್ಲಿಸುವಂತೆ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಆರ್. ಮೋಹನ್ ಕುಮಾರ್ ರವರು ಕೋರಿರುತ್ತಾರೆ.

ಅರ್ಜಿ ಸಲ್ಲಿಸಲು ಬೇಕಾದ ಅರ್ಹತೆಗಳು : ವಿದ್ಯಾರ್ಥಿಯು 2025ರ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ತೇರ್ಗಡೆಯಾಗಿರಬೇಕು. ವಿದ್ಯಾರ್ಥಿಯ ತಂದೆ/ ತಾಯಿ ರಾಜ್ಯ ಸರ್ಕಾರದ ಯಾವುದಾದರೊಂದು ಇಲಾಖೆಯಲ್ಲಿ ಖಾಯಂ ಸರ್ಕಾರಿ ನೌಕರರಾಗಿರಬೇಕು. ನಿಗಮ/ ಮಂಡಳಿ, ಪ್ರಾಧಿಕಾರ, ವಿಶ್ವವಿದ್ಯಾಲಯ, ಖಾಸಗಿ ಹಾಗೂ ಅನುದಾನಿತ ವಿದ್ಯಾ ಸಂಸ್ಥೆಗಳಲ್ಲಿ ನೇಮಕವಾಗಿರುವ ನೌಕರರು ಅರ್ಜಿ ಸಲ್ಲಿಸುವಂತಿಲ್ಲ.

ಆನ್‌ಲೈನ್ ಅರ್ಜಿ ಸಲ್ಲಿಸುವಾಗ ಗಮನಿಸಬೇಕಾದ ಅಂಶಗಳು: ವಿದ್ಯಾರ್ಥಿಯ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ,ದೃಢೀಕೃತ ಅಂಕಪಟ್ಟಿ, ಇಲಾಖೆಯ ಸೇವಾ ದೃಢೀಕರಣ ಪತ್ರ ಹಾಗೂ ಸಂಘದ ಜಿಲ್ಲಾ/ ತಾಲ್ಲೂಕು/ ಯೋಜನಾ ಶಾಖೆ ಅಧ್ಯಕ್ಷರು / ಬೆಂಗಳೂರು ನಗರ ರಾಜ್ಯ ಪರಿಷತ್ ಸದಸ್ಯರಿಂದ ಪಡೆದ ದೃಢೀಕರಣ ಪತ್ರ. Ksgea news Blogspot ನಲ್ಲಿ ಕಆಈ ಈಟಜ ಈ ಎಲ್ಲಾ ಲಗತ್ತುಗಳನ್ನು ನಿಗದಿತ ಎಕಉ ಜಿಂಡಿಟಚಿಣ ನಲ್ಲಿ ( 1 ಟಥ ಮೀರದಂತೆ) ಅಪ್‌ಲೋಡ್ ಮಾಡುವುದು. ಅರ್ಜಿ ಸಲ್ಲಿಕೆ ಯಶಸ್ವಿಗೊಂಡ ನಂತರ ನೊಂದಾಯಿತ ಇ-ಮೇಲ್‌ಗೆ ಸ್ವೀಕೃತಿ ರವಾನೆಯಾಗಲಿದೆ. ಶೇಕಡವಾರು ಅಂಕಗಳನ್ನು ನಿರ್ಧರಿಸಿ ಅರ್ಜಿಯನ್ನು ಪರಿಗಣಿಸುವ ನಿರ್ಧಾರ ಸಂಘದ್ದಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ 080 22354784/83. 9448617400 ಗಳನ್ನು ಸಂಪರ್ಕಿಸುವುದು.

# ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ-ಅವಧಿ ವಿಸ್ತರಣೆ

**ಚಿಕ್ಕಮಗಳೂರು:** ಸರ್ಕಾರದ ಆದೇಶ ಕಳೆದ ವರ್ಷದ ನವೆಂಬರ್ 12 ರಂದು ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು (ಎಂಪೆರಿಕಲ್ ಡಾಟಾ) ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸಿನೊಂದಿಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ.ಹೆಚ್.ಎನ್.ನಾಗಮೋಹನ್‌ದಾಸ್ ಇವರ ಅಧ್ಯಕ್ಷತೆಯಲ್ಲಿ ಈಗಾಗಲೇ ಏಕ ಸದಸ್ಯ ಆಯೋಗವನ್ನು ರಚಿಸಲಾಗಿದೆ.ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (ಎಂಪೆರಿಕಲ್ ಡಾಟಾ) ಸಂಗ್ರಹಿಸಲು ಹೊಸದಾದ ಸಮೀಕ್ಷೆಯನ್ನು ನಡೆಸಲು ಕಳೆದ ಮಾರ್ಚ್ 27ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಮೇ 5ರಿಂದ ಗಣತಿದಾರರು ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಸಮೀಕ್ಷೆ ನಡೆಯುತ್ತಿದೆ.ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಯಾಗಬೇಕಾಗಿರುವುದರಿಂದ, ಮಳೆ, ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಮತ್ತು ಬೆಂಗಳೂರು ಮಹಾನಗರ ಪಾಲಿಕೆಯ ಕೋರಿಕೆ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ.ಮನೆ-ಮನೆ ಭೇಟಿ ನೀಡುವ ಸಮೀಕ್ಷೆಯನ್ನು ಮೇ 26 ರಿಂದ 29 ರವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ಮೂರು ದಿನಗಳ ಕಾಲ ಅಂದರೆ ಮೇ 30, 31 ಹಾಗೂ ಜೂನ್ 1 ರವರೆಗೆ ಮರು ನಿಗದಿಪಡಿಸಲಾಗಿದೆ ಮತ್ತು ಆನ್‌ಲೈನ್ ಮೂಲಕ ಸ್ವಯಂಘೋಷಣೆ- ಜೂನ್ 1 ರವರೆಗೆ ಮುಂದುವರೆಯಲಿದೆ ಎಂದು ಏಕ ಸದಸ್ಯ ಆಯೋಗದ ಕಾರ್ಯದರ್ಶಿಗಳು ತಿಳಿಸಿರುವುದಾಗಿ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿಯಲ್ಲಿ ವಿದ್ಯಾಭಾರತಿ ಶಾಲೆಗೆ ಶೇ.100 ಫಲಿತಾಂಶ

**ಚಿಕ್ಕಮಗಳೂರು:** ನಗರದಗೌರಿಕಾಲುವೆಯಲ್ಲಿರುವ ವಿದ್ಯಾಭಾರತಿಇಂಗ್ಲಿಷ್ ಪ್ರೈಮರಿ ಮತ್ತು ಹೈಸ್ಕೂಲ್‌ಗೆ 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ಬಂದಿದೆಎಂದು ಮುಖ್ಯೋಪಾಧ್ಯಾಯರಾದ ಸಾಯರಾ ಫಾತಿಮಾ ತಿಳಿಸಿದ್ದಾರೆ.ಮಹಮದ್‌ಅನಾಸ್ ಶೇ.94.04, ಜೈನ್ ಸಾಲಿಕ್ ಶೇ.92.14, ಮಹಮದ್ ಶಮಾಸ್ ಶೇ.89.12, ಅಮೃತ ಹೆಚ್.ಸಿ ಶೇ.89, ವೈಷ್ಣವಿ.ಎ.ಕೆ ಶೇ.88, ಧನಷ್ ಶೇ.87, ಅಫೀಫಾ ಶೇ.84.32, ಮಹಮದ್‌ಅಜಾನ್ ಶೇ.84 ರಷ್ಟು ಅಂಕ ಗಳಿಸಿ ಶಾಲೆಗೆ ಕೀರ್ತಿತಂದಿದ್ದಾರೆಂದು ಶ್ಲಾಘಿಸಿದರು.ಉಳಿದಂತೆ ಎಲ್ಲಾ ವಿದ್ಯಾರ್ಥಿಗಳು ಪ್ರಥಮದರ್ಜೆಯಲ್ಲಿತೇರ್ಗಡೆ ಹೊಂದಿದ್ದಾರೆಂದು ತಿಳಿಸಿರುವ ಅವರು, ಇದಕ್ಕೆ ಶ್ರಮಿಸಿದ ಶಿಕ್ಷಕರು ಹಾಗೂ ಆಡಳಿತ ಮಂಡಳಿಗೆ ಕೃತಜ್ಞತೆ ಸಲ್ಲಿಸಿದರು.

ಪ್ರಿಯಕರನ ಜೊತೆ ಮಗಳು ಪರಾರಿ

# ಮನನೊಂದು ಕೆರೆಗೆ ಹಾರಿ ಒಂದೇ ಕುಟುಂಬದ ಮೂವರು ಆತ್ಮಹತ್ಯೆ

**ಮೈಸೂರು:** ತಮ್ಮ ಹಿರಿಯ ಮಗಳು ಮನೆ ಬಿಟ್ಟು ಹೋಗಿದ್ದರಿಂದ ಮನನೊಂದು ಒಂದೇ ಕುಟುಂಬದ ಮೂವರು ಆತ್ಮಹತ್ಯೆಗೆ ಶರಣಾಗಿರುವ ದಾರುಣ ಘಟನೆ ಮೈಸೂರಿನಲ್ಲಿ ನಡೆದಿದೆ. ಹೆಚ್ ಡಿ ಕೋಟೆ ತಾಲೂಕಿನ ಬೂದನೂರು ಕೆರೆಯಲ್ಲಿ ಮುಳುಗಿ ಮಹದೇವಸ್ವಾಮಿ, ಪತ್ನಿ ಮಂಜುಳಾ, ಕಿರಿಯ ಮಗಳು ಸೇರಿ ಕೆರೆಗೆ ಹಾರಿ ಒಂದೇ ಕುಟುಂಬದ ಮೂವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಹದೇವಸ್ವಾಮಿ ಅವರ ಹಿರಿಯ ಮಗಳು ಅರ್ಪಿತಾ ಮನೆ ಬಿಟ್ಟು ಹೋಗಿದ್ದರಿಂದ ಮನನೊಂದು ಈ ಈ ನಿರ್ಧಾರ ತೆಗೆದುಕೊಂಡಿ–ದ್ದಾರೆ ಎನ್ನಲಾಗಿದೆ. ಬೂದನೂರು ಕೆರೆಯ ಏರಿಯ ಮೇಲೆ ಬೈಕ್ ಹಾಗೂ ಮೂವರ ಚಪ್ಪಲಿ ಪತ್ತೆಯಾಗಿದೆ. ನಾಪತ್ತೆಯಾಗಿರುವ ಮೂವರಿಗಾಗಿ ಇದೀಗ ತೀವ್ರ ಹುಡುಕಾಟ ನಡೆಸಲಾಗುತ್ತಿದೆ. ಹೆಚ್ ಡಿ ಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮೀನುಗಾರಿಕೆ ಇಲಾಖೆ: ಮನೆ ನಿರ್ಮಾಣಕ್ಕೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

**ಬಳ್ಳಾರಿ :** ಮೀನುಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನ ವಸತಿರಹಿತ ಮೀನುಗಾರರಿಗೆ ಸರ್ಕಾರದ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಸಿರುಗುಪ್ಪ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ ಮತ್ತು ಸಂಡೂರು ವಿಧಾನಸಭಾ ಕ್ಷೇತ್ರಕ್ಕೆ 25 ಮನೆಗಳು ಸೇರಿ ಒಟ್ಟು ಜಿಲ್ಲೆಗೆ 125 ಮನೆಗಳನ್ನು ಹಂಚಿಕೆ ಮಾಡಲಾಗಿದೆ. ಅರ್ಜಿಗಳನ್ನು ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ (ಬಳ್ಳಾರಿ, ಸಿರುಗುಪ್ಪ, ಕಂಪ್ಲಿ ವಿಧಾನಸಭಾ ಕ್ಷೇತ್ರ) ಮತ್ತು ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಲ್ಲಿ ಪಡೆದುಕೊಳ್ಳಬಹುದು. ಭರ್ತಿ ಮಾಡಿ ಅರ್ಜಿಗಳಲ್ಲಿ ಇದೇ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ ಎಂದು ಮೀನುಗಾರಿಕೆ ಉಪ ನಿರ್ದೇಶಕ ಶಿವಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಳ : ಕೋವಿಡ್ ಪರೀಕ್ಷೆ ಆರಂಭ



**ಬೆಂಗಳೂರು :** ರಾಜ್ಯದಲ್ಲಿ ಕೊರೊನಾ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗ–ಡೆ ಮಾಡಿದ್ದು, ನಾಳೆಯಿಂದ ಕೋವಿಡ್ ಪರೀಕ್ಷೆಯನ್ನು ಆರಂಭಿಸಲು ಮುಂದಾಗಿದೆ.

ಕಳೆದ ಕೆಲ ದಿನಗಳಿಂದ ರಾಜ್ಯದಲ್ಲಿ ಕೋವಿಡ್ ಸೋಂಕು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ನಿನ್ನೆ ಸಭೆ ನಡೆಸಿದ್ದ ಕೋವಿಡ್ ತಾಂತ್ರಿಕ ಸಮಿತಿ ಕೋವಿಡ್ ಪರೀಕ್ಷೆಗಳನ್ನು ಪುನಾರಂಭಿಸಲು ಶಿಫಾರಸ್ಸು ಮಾಡಿದ್ದು, ಅದರಂತೆ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಟೆಸ್ಟ್‌ಗಳನ್ನು ಆರಂಭಿಸಲು ಮುಂದಾಗಿದ್ದು, ಪರೀಕ್ಷೆ ಲ್ಯಾಬ್‌ಗಳನ್ನು ಪುನಾರಂಭಿಸಲು ನಿರ್ಧರಿಸಿದೆ.

ರಾಜ್ಯದ ವಿವಿಧೆಡೆ 8 ಆರ್‌ಟಿಪಿಸಿಆರ್ ಪರೀಕ್ಷೆ ಲ್ಯಾಬ್‌ಗಳನ್ನು ಆರಂಭಿಸುವ ನಿರ್ಧಾರ ಮಾಡಲಾಗಿದೆ. ರಾಜ್ಯದ ಆಯ್ದ ಸರ್ಕಾರಿ ಆಸ್ಪತ್ರೆ, ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಜಿಲ್ಲಾಸ್ಪತ್ರೆಗಳಲ್ಲಿ ಕೋವಿಡ್ ಪರೀಕ್ಷೆಗಳ ಆರಂಭಕ್ಕೆ ಸಿದ್ಧತೆ ನಡೆದಿದ್ದು, ನಾಳೆಯಿಂದಲೇ ಕೋವಿಡ್ ಪರೀಕ್ಷೆಗಳು ಆರಂಭವಾಗಲಿದೆ.

ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ಆರಂಭಿಕವಾಗಿ ಉಸಿರಾಟದ ತೊಂದರೆ, ಇತರೆ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಕೋವಿಡ್ ಪರೀಕ್ಷೆಯನ್ನು ಕಡ್ಡಾಯ ಮಾಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದ್ದು, ಈ ಬಗ್ಗೆ ಇಂದು ಸಂಜೆಯೊಳಗೆ ಸುತ್ತೋಲೆಯನ್ನು ಹೊರಡಿಸಲಾಗುವುದು, ಆರೋಗ್ಯ ಇಲಾಖೆಯ ಮೂಲಗಳು ತಿಳಿಸಿವೆ.

ರಾಜ್ಯದಲ್ಲಿ ಇದುವರೆಗೂ 35 ಕೋವಿಡ್ ಸಕ್ರಿಯ ಪ್ರಕರಣಗಳಿದ್ದು, ಅದರಲ್ಲಿ ಬೆಂಗಳೂರಿನಲ್ಲೇ 32 ಕೋವಿಡ್ ಪ್ರಕರಣಗಳು ದೃಢಪಟ್ಟಿದ್ದು, ಇಂದೂ ಸಹ ಬೆಂಗಳೂರಿನಲ್ಲಿ ಮೂವರಿಗೆ ಕೋವಿಡ್ ಪ್ರಕರಣಗಳು ದೃಢಪಟ್ಟಿವೆ ಎಂದು ಹೇಳಲಾಗಿದೆ.

ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಾದ ಹಿನ್ನೆಲೆಯಲ್ಲಿ ಕೊರೊನಾ ನಿಯಂತ್ರಣ ಸಂಬಂಧ ಕೈಗೊಳ್ಳಲು ರಚಿಸಲಾಗಿರುವ ತಾಂತ್ರಿಕ ಸಮಿತಿ ನಿನ್ನೆ ಸಭೆ ನಡೆಸಿ ಕೊರೊನಾ ಸೋಂಕು ಹೆಚ್ಚಳದ ಬಗ್ಗೆ ಸುದೀರ್ಘವಾಗಿ ಚರ್ಚೆ ನಡೆಸಿದೆ. ಇಂದು ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ಸಹ ಆರೋಗ್ಯ ಇಲಾಖೆಯ ಅಧಿಕಾರಿಗಳ ಜತೆ ಸಭೆ ನಡೆಸಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಚರ್ಚೆ ನಡೆಸಿದರು.

**ಮಾರ್ಗಸೂಚಿ ಬಿಡುಗಡೆ, ಮಾಸ್ಕ್ ಧರಿಸಲು ಸಲಹೆ :** ದೇಶದಲ್ಲಿ ಕೊರೊನಾ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗ–ಡೆ ಮಾಡಿದ್ದು, ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಮಾಸ್ಕ್ ಧರಿಸಿ ಓಡಾಡುವಂತೆ ಹಾಗೂ ನೈರ್ಮಲ್ಯ ಕಾಪಾಡಲು ಸ್ಯಾನಿಟೈಸರ್‌ಗಳನ್ನು ಬಳಸುವಂತೆ ಸಾರ್ವಜನಿಕರಿಗೆ ಸಲಹೆ ಮಾಡಿದೆ.

ದೇಶದಲ್ಲಿ ಕೋವಿಡ್ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿದ್ದು ಮಹಾರಾಷ್ಟ್ರದಲ್ಲಿ ಮೂರು ಮಂದಿ ಕೋವಿಡ್‌ಗೆ ಬಲಿಯಾಗಿದ್ದಾ–ರೆ ಎಂದು ಹೇಳಲಾಗಿದ್ದು ಮಹಾರಾಷ್ಟ್ರ, ದೆಹಲಿ, ಆಂಧ್ರಪ್ರದೇಶ, ಕೇರಳ ಸೇರಿದಂತೆ ಹಲವು ರಾಜ್ಯಗಳಲ್ಲಿ ಈಗಾಗಲೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದು, ಆಂಧ್ರದಲ್ಲಿ ಮಾಸ್ಕ್ ಧರಿಸುವುದನ್ನು ಕಡ್ಡಾಯ ಮಾಡಲಾಗಿದೆ.

ದೆಹಲಿ, ಮಹಾರಾಷ್ಟ್ರದಲ್ಲೂ ಕೋವಿಡ್ ಮಾರ್ಗಸೂಚಿಗಳನ್ನು ಪ್ರಕಟಿಸಲಾಗಿದ್ದು, ಕರ್ನಾಟಕ ಸರ್ಕಾರ ಸಹ ಕೋವಿಡ್ ಮಾರ್ಗಸೂಚಿಗಳನ್ನು ಪ್ರಕಟಿಸಿದೆ.

ರಾಜ್ಯದಲ್ಲಿ ಒಟ್ಟು 35 ಕೋವಿಡ್ ಸಕ್ರಿಯ ಪ್ರಕರಣಗಳು ದಾಖಲಾಗಿದ್ದು, ಅವುಗಳ ಪೈಕಿ 32 ಪ್ರಕರಣಗಳು ಬೆಂಗಳೂರಿನಲ್ಲಿ ದೃಢಪಟ್ಟಿವೆ.ಕೋವಿಡ್ ಪರಿಸ್ಥಿತಿ ಆತಂಕಗೊಳ್ಳುವರಷ್ಟರ ಮಟ್ಟಿಗೆ ಇಲ್ಲವಾದರೂ ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಪಾಲಿಸಬೇಕು. ಕಳೆದ 20 ದಿನಗಳಲ್ಲಿ ಏಕಾಏಕಿ ಕೋವಿಡ್ ಪ್ರಕರಣಗಳು ಹೆಚ್ಚಳ ಕಂಡು ಬಂದಿದೆ. ಹಾಗಾಗಿ, ಮಕ್ಕಳು, ವೃದ್ಧರು ಹಾಗೂ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವವರು ಮುನ್ನೆಚ್ಚರಿಕೆ ವಹಿಸಬೇಕು ಎಂದು ರಾಜ್ಯ ಆರೋಗ್ಯ ಇಲಾಖೆ ಸಲಹೆ ಮಾಡಿದೆ.

ರಾಜ್ಯದಲ್ಲಿ 2025ರಲ್ಲಿ ಕೋವಿಡ್ ಸಂಬಂಧಿತ ಸಾವುಗಳು ವರದಿಯಾಗಿಲ್ಲ. ಆದರೂ ಸೋಂಕು ಹರಡುವುದನ್ನು ತಡೆಯಲು ಎಚ್ಚರಿಕೆ ಅವಶ್ಯ. ಹಾಗಾಗಿ ಗರ್ಭಿಣಿಯರು, ಮಕ್ಕಳು, ಇತರೆ ಕಾಯಿಲೆಗಳಿಂದ ಬಳಲುತ್ತಿರುವವರು, ಮತ್ತು ರೋಗ ನಿರೋಧಕ ಶಕ್ತಿ ಕಡಿಮೆ ಇರುವವರು. ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಮುಖಕ್ಕೆ ಮಾಸ್ಕ್ ಧರಿಸಿ ಓಡಾಡಲು ಆರೋಗ್ಯ ಇಲಾಖೆ ಸಲಹಾರೂಪದ ಸೂಚನೆ ನೀಡಿದೆ. ಸಾರ್ವಜನಿಕರು ಕೈಗಳ ನೈರ್ಮಲ್ಯವನ್ನು ಕಾಪಾಡಿಕೊಳ್ಳಲು ಹ್ಯಾಂಡ್ ಸ್ಯಾನಿಟೈಸರ್‌ಗಳನ್ನು ಬಳಸಲು ಸಲಹೆ ನೀಡಲಾಗಿದೆ. ತೀವ್ರ ಉಸಿರಾಟದ ಕಾಯಿಲೆಗಳ ಲಕ್ಷಣಗಳನ್ನು ಹೊಂದಿರುವವರು ಸಕಾಲಿಕವಾಗಿ ಚಿಕಿತ್ಸೆಯನ್ನು ಪಡೆಯಬೇಕು. ಸಂಭಾವ್ಯ ಅಪಾಯ ತಡೆಗಟ್ಟಲು ಕೋವಿಡ್ –19 ಪರೀಕ್ಷೆಯನ್ನು ತಕ್ಷಣವೇ ಮಾಡಿಕೊಳ್ಳಲು ಸಲಹೆ ನೀಡಲಾಗಿದೆ.

**ಆತಂಕ,ಗಾಬರಿಬೇಡದಿನೇಶ್‌ಗುಂಡೂರಾವ್ :** ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ಗಂಭೀರ ಪರಿಸ್ಥಿತಿ ಇಲ್ಲ ಯಾರೂ ಆತಂಕ–ಕ್ಕೆ ಒಳಗಾಗುವ ಅಗತ್ಯವೂ ಇಲ್ಲ, ಸರ್ಕಾರ ಮುನ್ನೆಚ್ಚರಿಕೆಯಾಗಿ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ. ಹಾಗೆಯೇ ಸಾರಿ ಪ್ರಕರಣಗಳಲ್ಲಿ ಕೋವಿಡ್ ಪರೀಕ್ಷೆಗಳನ್ನು ಕಡ್ಡಾಯ ಮಾಡುವಂತೆ ಸೂಚನೆ ನೀಡಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ದೇಶದಲ್ಲೇ ಕೋವಿಡ್‌ನ 257 ಸಕ್ರಿಯ ಪ್ರಕರಣಗಳಿವೆ ಗಂಭೀರ ಪ್ರಕರಣಗಳು ವರದಿಯಾಗಿಲ್ಲ. ಹಾಗಾಗಿ ಯಾರೂ ಭಯಪಡುವ ಅಗತ್ಯವಿಲ್ಲ. ಎಂದಿನಂತೆ ಪ್ರವಾಸ ಎಲ್ಲವನ್ನೂ ಮಾಡಬಹುದು. ರಾಜ್ಯದಲ್ಲಿ ಕಾಣಿಸಿಕೊಂಡಿರುವ ಸಕ್ರಿಯ ಪ್ರಕರಣಗಳ ತೀವ್ರತೆಯೂ ಕಡಿಮೆ ಇದೆ. ಗಾಬರಿ ಬೀಳುವ ಅಗತ್ಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

**ಬೆಳಗಾವಿಯಲ್ಲಿ ಮೊದಲ ಕೊರೊನಾ ಪತ್ತೆ**

ಗಡಿ ಜಿಲ್ಲೆ ಬೆಳಗಾವಿಯಲ್ಲಿ 25 ವರ್ಷದ ಗರ್ಭಿಣಿಯಲ್ಲಿ ಕೋವಿಡ್ ಸೋಂಕು ಕಾಣಿಸಿಕೊಂಡಿದೆ. ಸೋಂಕಿತ ಮಹಿಳೆಗೆ ಬೆಳಗಾವಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

# ಬೆಂಗಳೂರು ಸಂಪೂರ್ಣ ಸಿಟಿ ಸೌಂದರ್ಯ ತೋರಿಸುವ ಸ್ಕೈ ಡೆಕ್ ಯೋಜನೆಗೆ ಕೆಂಗೇರಿ ಸ್ಥಳ ಆಯ್ಕೆ: ಡಿಕೆ ಶಿವಕುಮಾರ್



**ಬೆಂಗಳೂರು:** ಬಹು ಚರ್ಚಿತ ಸ್ಕೈ ಡೆಕ್ ಯೋಜನೆಯನ್ನು ಕೆಂಗೇರಿ ಬಳಿಯ ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ನಿರ್ಮಿಸಲು ಕರ್ನಾಟಕ ಸರ್ಕಾರ ನಿರ್ಧರಿಸಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಸ್ಕೈಡೆಕ್ ಯೋಜನೆಯು 250 ಮೀಟರ್ ಎತ್ತರವಿರಲಿದ್ದು, ನಗರದ ವಿಹಂಗಮ ನೋಟವನ್ನು ನೀಡುತ್ತದೆ. ಪ್ರವಾಸಿಗರನ್ನು ಆಕರ್ಷಿಸುವ ಗುರಿಯನ್ನು ಹೊಂದಿದೆ, ಬ್ರ್ಯಾಂಡ್ ಬೆಂಗಳೂರು ಅಭಿವೃದ್ಧಿಯ ಭಾಗವಾಗಿ ಇದನ್ನು ಜಾರಿ ಮಾಡಲಾಗ್ತಿದೆ. ಮೊದಲಿಗೆ ಈ ಯೋಜನೆಯನ್ನು ಹೆಮ್ಮಿಗೆಪುರದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿತ್ತು. ಆದ–ರೆ ವಿಮಾನ ನಿಲ್ದಾಣದ 20 ಕಿಲೋಮೀಟರ್ ವ್ಯಾಪ್ತಿಯಲ್ಲಿ ಎತ್ತರದ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ. ಹಾಗೆಯೇ ನಂದಿ ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್ (NICE)ಗೆ ಸೇರಿದ ಜಮೀನನ್ನು ಸ್ವಾಧೀನಪಡಿಸಿಕೊಳ್ಳುವುದು ಕಷ್ಟಕರವಾಗಿತ್ತು. ಆದ್ದರಿಂದ ಸ್ಥಳವನ್ನು ಬದಲಾಯಿಸಲಾಗಿದೆ ಎಂದು ಶಿವಕುಮಾರ್ ತಿಳಿಸಿದರು.

"ಕೆಂಪೇಗೌಡ ಬಡಾವಣೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ (BDA) ಸೇರಿದ ಜಾಗದಲ್ಲಿ ಸ್ಕೈ ಡೆಕ್ ನಿರ್ಮಾಣವಾಗಲಿದೆ. ಈ ಪ್ರದೇಶಕ್ಕೆ ಭವಿಷ್ಯದಲ್ಲಿ ಮೆಟ್ರೋ ಸಂಪರ್ಕ ದೊರೆಯುವ ನಿರೀಕ್ಷೆಯಿದೆ. ಆದ್ದರಿಂದ ಅಧಿಕಾರಿಗಳಿಗೆ ಮುಂದಕ್ಕೆ ಹೋಗಲು ಸೂಚಿಸಿದ್ದೇನೆ" ಎಂದು ಅವರು ಹೇಳಿದರು. ಬಿಡಿಎ ಅಧಿಕಾರಿಗಳು ತಿಳಿಸಿರುವಂತೆ, ಬಡಾವಣೆಯೊಳಗೆ 25 ಎಕರೆ ಜಾಗವನ್ನು ಗುರುತಿಸಲಾಗಿದೆ. ಈ ಸ್ಕೈ ಡೆಕ್ 250 ಮೀಟರ್ ಎತ್ತರವಿರಲಿದ್ದು, ನಗರದ ಸುಂದರ ನೋಟವನ್ನು ಕಣ್ತುಂಬಿಕೊಳ್ಳಲು ಸಹಾಯ ಮಾಡುತ್ತದೆ. ಇದು ಪ್ರವಾಸಿಗರನ್ನು ಆಕರ್ಷಿಸುವ ನಿರೀಕ್ಷೆಯಿದೆ

ನಗರದ ಪಾದಚಾರಿ ಮಾರ್ಗಗಳಲ್ಲಿರುವ ಅಂಗಡಿಗಳನ್ನು ತೆರವುಗೊಳಿಸಲಾಗುವುದು ಎಂದು ಶಿವಕುಮಾರ್ ತಿಳಿಸಿದ್ದಾರೆ. ಬೀದಿಬದಿ ವ್ಯಾಪಾರವನ್ನು ಹಂತ ಹಂತವಾಗಿ ಸುವ್ಯವಸ್ಥಿತಗೊಳಿಸಲಾಗುವುದು. ಬಿಬಿಎಂಪಿ ಈಗಾಗಲೇ ಬೀದಿಬದಿ ವ್ಯಾಪಾರಿಗಳ ಸಮೀಕ್ಷೆಯನ್ನು ಪೂರ್ಣಗೊಳಿಸಿದೆ. ಶೀಘ್ರದಲ್ಲೇ ವ್ಯಾಪಾರ ವಲಯಗಳನ್ನು ಗುರುತಿಸಲಾಗುವುದು ಎಂದು ಅವರು ಹೇಳಿದರು.

"ಕಾನೂನಿನಲ್ಲಿ ಪಾದಚಾರಿ ಮಾರ್ಗಗಳಲ್ಲಿ ಅಂಗಡಿಗಳನ್ನು ನಡೆಸಲು ಅವಕಾಶವಿಲ್ಲ. ಬಿಬಿಎಂಪಿ ಸಮೀಕ್ಷೆಯಲ್ಲಿ 27,665 ವ್ಯಾಪಾರಿಗಳನ್ನು ಗುರುತಿಸಲಾಗಿದೆ. ನೋಂದಾಯಿತ ವ್ಯಾಪಾರಿಗಳಿಗೆ ಪುಶ್‌ಕಾರ್ಟ್‌ಗಳನ್ನು ನೀಡಲು ನಾವು ಸಿದ್ಧರಿದ್ದೇವೆ. ವ್ಯಾಪಾರ ವಲಯಗಳನ್ನು ಗುರುತಿಸಲಾಗುವುದು. ವ್ಯಾಪಾರಿಗಳು ಆ ವಲಯಗಳಲ್ಲಿ ಪುಶ್‌ಕಾರ್ಟ್‌ಗಳಲ್ಲಿ ತಮ್ಮ ಸರಕುಗಳನ್ನು ಮಾರಾಟ ಮಾಡಬಹುದು. ಸಂಜೆ ವ್ಯಾಪಾರದ ಸಮಯ ಮುಗಿದ ನಂತರ ಆ ಜಾಗವನ್ನು ಖಾಲಿ ಮಾಡಬೇಕು" ಎಂದು ಡಿಸಿಎಂ ಹೇಳಿದರು.

ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು, ಮೆಟ್ರೋ ಕಾಮಗಾರಿ ನಡೆಯುತ್ತಿರುವ ಕಡೆಗಳಲ್ಲಿ ಸರ್ವಿಸ್ ರಸ್ತೆಗಳನ್ನು ಮುಖ್ಯ ರಸ್ತೆಗಳೊಂದಿಗೆ ವಿಲೀನಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸಬೇಕು ಎಂದು ಶಿವಕುಮಾರ್ ಸಲಹೆ ನೀಡಿ–ದ್ದಾರೆ. "ಸಂಚಾರ ದಟ್ಟಣೆಯನ್ನು ತಡೆಯಲು, ಸರ್ವಿಸ್ ರಸ್ತೆಗಳನ್ನು ವಿಲೀನಗೊಳಿಸಲು ನಾನು ಸೂಚಿಸಿದ್ದೇನೆ. ಈ ಬಗ್ಗೆ ಬೆಂಗಳೂರು ಸಂಚಾರ ಪೊಲೀಸರೊಂದಿಗೆ (BTP) ಚರ್ಚಿಸಿದ್ದೇನೆ. ಅವರು ಶೀಘ್ರದಲ್ಲೇ ಕ್ರಿಯಾ ಯೋಜನೆಯೊಂದಿಗೆ ಬರುತ್ತಾರೆ" ಎಂದು ಅವರು ಹೇಳಿದರು.

ನಗರದ ರಸ್ತೆಗಳಲ್ಲಿರುವ ಎಲ್ಲಾ ಕೈಬಿಟ್ಟ ವಾಹನಗಳನ್ನು ತೆರವುಗೊಳಿಸಲು ಸಂಚಾರ ಪೊಲೀಸ್ ಸಿಬ್ಬಂದಿಗೆ ನಿರ್ದೇಶನ ನೀಡಲಾಗಿದೆ. ಸರ್ಕಾರವು ದೊಡ್ಡ ಪ್ರದೇಶವನ್ನು ಗುರುತಿಸಲಿದೆ.

# ಯುವನಿಧಿ: ಯುವ ಸಮೂಹಕ್ಕೆ ಆರ್ಥಿಕ ಬಲ

**ಚಿತ್ರದುರ್ಗ :** ಸದೃಢ ರಾಷ್ಟ್ರ ಹಾಗೂ ಸಭ್ಯ ಸಮಾಜ ನಿರ್ಮಿಸುವಲ್ಲಿ ಯುವ ಪೀಳಿಗೆಯ ಪಾತ್ರ ಬಹುಮುಖ್ಯವಾಗಿದ್ದು, ಯುವಕರು ನಿರುದ್ಯೋಗದ ಸುಳಿಗೆ ಸಿಲುಕದೆ ಸಾಧನೆಯ ಶಿಖರವೇರಲು ರಾಜ್ಯ ಸರ್ಕಾರದ ಯುವನಿಧಿ ಯೋಜನೆಯಡಿ ಒದಗಿಸುವ ಹಣವು ಯುವ ಸಮೂಹಕ್ಕೆ ಆರ್ಥಿಕ ಬಲ ತುಂಬಿದೆ.

ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ರಾಜ್ಯ ಸರ್ಕಾರವು ಯುವನಿಧಿ ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸಿದ್ದು, ಶಿಕ್ಷಣ ಪಡೆದು ಉದ್ಯೋಗ ದೊರೆಯದಿರುವಂತಹ ಪದವೀಧರರಿಗೆ ರೂ.3,000 ಹಾಗೂ ಡಿಪ್ಲೋಮೊ ಪದವೀಧರಿಗೆ ಪ್ರತಿ ಮಾಹೆ ರೂ.1,500 ರೂ ನಿರುದ್ಯೋಗ ಭತ್ಯೆ ಒದಗಿಸುವ ಅಭೂತಪೂರ್ವ ಯೋಜನೆ ಇದಾಗಿದೆ.

ಕೆಪಿಎಸ್‌ಸಿ, ಯುಪಿಎಸ್‌ಸಿ, ಎಸ್‌ಎಸ್‌ಸಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ, ಸರ್ಕಾರಿ ಹುದ್ದೆಗಳ ಆಯ್ಕೆಗೆ ಕನಸು ಕಂಡ ಪದವಿ ವಿದ್ಯಾರ್ಥಿಗಳಿಗೆ ಯುವನಿಧಿ ಯೋಜನೆ ಒತ್ತಾಸೆಯಾಗಿ ನಿಂತಿದ್ದು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸ್ಪರ್ಧಾರ್ಥಿಗಳಿಗೆ, ಸ್ಪರ್ಧಾತ್ಮಕ ಪರೀಕ್ಷೆಯನ್ನು ತೆಗೆದುಕೊಳ್ಳಲು ಮತ್ತು ಅರ್ಜಿ ಸಲ್ಲಿಸಲು ಹಣಕಾಸಿನ ಅವಶ್ಯಕತೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಸಿದ್ಧತೆಗಾಗಿ ಪುಸ್ತಕಗಳನ್ನು ಖರೀದಿಸಲು ಹಣಕಾಸಿನ ಅವಶ್ಯಕತೆ ಇದ್ದು, ರಾಜ್ಯ ಸರ್ಕಾರ ಯುವನಿಧಿ ಯೋಜನೆಯ ಮೂಲಕ ಒದಗಿಸುವ ಹಣ, ಅಂತಹವರಿಗೆ ಸದುಪಯೋಗವಾಗುತ್ತಿದ್ದು, ಸರ್ಕಾರಿ ಹುದ್ದೆಗಳ ಕನಸು ಕಾಣುವ ವಿದ್ಯಾರ್ಥಿಗಳಿಗೆ ಯುವನಿಧಿ ಯೋಜನೆಯು ಒತ್ತಾಸೆಯಾಗಿ ನಿಂತಿರುವುದಂತೂ ಸ್ಪಷ್ಟ.

ಪದವಿ ಪಡೆದ ತಕ್ಷಣವೇ ಖಾಸಗಿ ಉದ್ಯೋಗ ಅರಸಿ, ದೂರದ ಊರುಗಳಿಗೆ ತೆರಳಿ ಕೆಲಸ ಮಾಡುವ ಅನಿವಾರ್ಯತೆ ಹೊಂದಿದ್ದ ಬಡ ಕುಟುಂಬದ ವಿದ್ಯಾರ್ಥಿಗಳ ಮೇಲಿನ ಒತ್ತಡ ಕಡಿಮೆ ಮಾಡಿರುವ ಯುವನಿಧಿ ಯೋಜನೆ, ಪೋಷಕರ ಆರ್ಥಿಕ ಹೊರೆಯೂ ಕಡಿಮೆ ಮಾಡಿದೆ.

ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ರಾಜ್ಯ ಸರ್ಕಾರವು ಯುವನಿಧಿ ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸಿದ್ದು, ನಿರುದ್ಯೋಗಿ ಯುವಕರಿಗೆ ಎರಡು ವರ್ಷಗಳವರೆಗೆ ಅಥವಾ ಫಲಾನುಭವಿಗೆ ಉದ್ಯೋಗ ಸಿಗುವವರೆಗೆ (ಯಾವುದು ಮೊದಲೋ) ನಿರುದ್ಯೋಗ ಭತ್ಯೆ ಒದಗಿಸುವ ಗುರಿ ಹೊಂದಿದೆ. ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವ ನಿಧಿ ಯೋಜನೆಗೆ ಕಳೆದ 2024ರ ಜನವರಿ 12ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್, ಕೆ.ಜೆ.ಜಾರ್ಜ್, ಮಧು ಬಂಗಾರಪ್ಪ ಸೇರಿದಂತೆ ಇನ್ನಿತರೆ ಸಚಿವರು ಶಿವಮೊಗ್ಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಚಾಲನೆ ನೀಡಿ–ದ್ದರು.

ಯುವನಿಧಿ ಗ್ಯಾರಂಟಿ ಯೋಜನೆ ಮೂಲಕ ಪದವೀಧರ ನಿರುದ್ಯೋಗಿಗಳಿಗೆ ಮಾಸಿಕ ರೂ.3,000 ಹಾಗೂ ಡಿಪ್ಲೊಮಾ ವ್ಯಾಸಂಗ ಪೂರ್ಣಗೊಳಿಸಿದ ನಿರುದ್ಯೋಗಿಗಳಿಗೆ ಮಾಸಿಕ ರೂ.1,500 ನಿರುದ್ಯೋಗ ಭತ್ಯೆ ಸಿಗಲಿದೆ. ಪದವಿ ಹಾಗೂ ಡಿಪ್ಲೊಮಾ ವ್ಯಾಸಂಗ ಪೂರ್ಣಗೊಳಿಸಿ 180 ದಿನಗಳು ಆದನಂತರ ಈ ಯೋಜನೆಗೆ ಅರ್ಜಿ ಸಲ್ಲಿಸಲು ಅರ್ಹರು. ಉನ್ನತ ಶಿಕ್ಷಣ ಹಾಗೂ ಉದ್ಯೋಗ–ಕ್ಕೆ ಹೋದರೆ ಈ ಯೋಜನೆಗೆ ಅರ್ಹರಿರುವುದಿಲ್ಲ. ಯುವನಿಧಿಗೆ ನೋಂದಾಯಿಸಿಕೊಂಡಿರುವ ಫಲಾನುಭವಿಗಳು ತಾವು ವ್ಯಾಸಂಗ ಮಾಡುತ್ತಿಲ್ಲ, ಸ್ವಯಂ ಉದ್ಯೋಗಿಯಲ್ಲ, ನಿರುದ್ಯೋಗಿ ಎಂದು ಪ್ರತಿ ತಿಂಗಳು ಸ್ವಯಂ ಘೋಷಣೆ ಸಲ್ಲಿಸಬೇಕು.

ಸಾಧಿಸುವ ಛಲ ಹೊಂದಿದ ಯುವಕರಿಗೆ ಮೂಲಭೂತ ವಸ್ತುಗಳನ್ನು ಖರೀದಿಸಲು ಹಣದ ಅವಶ್ಯಕತೆ ಇರುತ್ತದೆ. ಅಂತಹ ಯುವಸಮೂಹವು ರಾಜ್ಯ ಸರ್ಕಾರದಿಂದ ಸಿಗುವ ಹಣವನ್ನು ಯುವಕರು ನಿಗದಿತ ಕೆಲಸಗಳಿಗೆ ವ್ಯಯಿಸಿಕೊಂಡು ಸುಸ್ಥಿರ ಬದುಕು ಕಟ್ಟಿಕೊಳ್ಳುತ್ತಿದ್ದಾರೆ.

10.05 ಕೋಟಿ ಪಾವತಿ: ಚಿತ್ರದುರ್ಗ ಜಿಲ್ಲೆಯಲ್ಲಿ 5,312 ಪದವೀಧರರು ಹಾಗೂ 103 ಡಿಪ್ಲೋಮೊ ಪದವೀಧರರು ಸೇರಿದಂತೆ ಒಟ್ಟು 5,415 ನಿರುದ್ಯೋಗಿಗಳು ಯುವನಿಧಿಯ ಸೌಲಭ್ಯ ಪಡೆದಿದ್ದಾರೆ.

2024ರ ಜನವರಿ ಮಾಹೆಯಿಂದ ಈವರೆಗೆ ರೂ.10.05 ಕೋಟಿಗಳನ್ನು ಯುವನಿಧಿ ಯೋಜನೆಯ ಫಲಾನುಭವಿಗಳ ಖಾತೆಗೆ ಡಿಬಿಟಿ ಮೂಲಕ ಪಾವತಿ ಮಾಡಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ತಂಬಾಕು ಮಾರಾಟ ಅಂಗಡಿಗಳಿಗೆ ದಾಳಿ

# 35 ಪ್ರಕರಣ ದಾಖಲು, ರೂ.4 ಸಾವಿರ ದಂಡ ವಸೂಲಿ



**ಚಿತ್ರದುರ್ಗ:** ಕೋಟ್ಪಾ–2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಚಿತ್ರದುರ್ಗ ನಗರದ ಸಂತೆ ಮೈದಾನದ ಹತ್ತಿರ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಬುಧವಾರ ದಾಳಿ ಮಾಡಿ ದಂಡ ವಿಧಿಸಿದೆ.

ಯುವಜನತೆಯು ಅತೀ ಹೆಚ್ಚಾಗಿ ತಂಬಾಕಿನ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಇದರಿಂದಾಗಿ ಸಮಾಜದಲ್ಲಿ ಸಾವಿನ ಸಂಖ್ಯೆಯಲ್ಲಿ ಹೆಚ್ಚಾಗಿ ಯುವಕರೇ ಬಲಿಯಾಗುತ್ತಿದ್ದಾರೆ ಎಂದು ಯುವಕರಿಗೆ ಮತ್ತು ಅಂಗಡಿ ಮಾಲೀಕರಿಗೆ ತಿಳಿಸುತ್ತಾ ತಂಬಾಕು ಕಾರ್ಯಾಚರಣೆ ನಡೆಸಿದರು.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಲಾಯಿತು. ಸಂಬಂಧಪಟ್ಟ ಸೆಕ್ಷನ್–4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು. ಸೆಕ್ಷನ್–4 ಅಡಿಯಲ್ಲಿ 29 ಕೇಸುಗಳನ್ನು ದಾಖಲಿಸಿ ರೂ. 3250 ದಂಡವನ್ನು ಮತ್ತು ಸೆಕ್ಷನ್–6ಎ ಅಡಿಯಲ್ಲಿ 06 ಕೇಸುಗಳನ್ನು ದಾಖಲಿಸಿ ರೂ. 750 ದಂಡವನ್ನು ವಸೂಲಿ ಮಾಡಲಾಯಿತು.

ತಂಬಾಕು ದಾಳಿಯಲ್ಲಿ ಜಿಲ್ಲಾ ಮಟ್ಟದ ತನಿಖಾ ತಂಡದ ಅಧಿಕಾರಿಗಳಾದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ, ಸಮಾಜ ಕಾರ್ಯಕರ್ತ ಕೆ.ಎಂ.ತಿಪ್ಪೇಸ್ವಾಮಿ, ಜಿಲ್ಲಾ ಸರ್ವೇಕ್ಷಣಾ ಘಟಕದ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ವೆಂಕಟೇಶ್, ಎಂ.ಹೆಚ್.ಮಂಜುನಾಥ, ತಾಲ್ಲೂಕು ಆರೋಗ್ಯಾಧಿಕಾಧಿಕಾರಿಗಳ ಕಚೇರಿ ಆರೋಗ್ಯ ನಿರೀಕ್ಷಣಾಧಿಕಾರಿ ಜಿ.ಕೆ.ಪ್ರವೀಣ್ ಇದ್ದರು.

# ಜನರು ಮನಸ್ಸು ಮಾಡಿದರೆ ಸ್ವಚ್ಛತೆ ಎಂಬುದು ಎಷ್ಟರ ಮಟ್ಟಿನ ಕೆಲಸ : ಡಾ ಎಚ್.ಕೆ.ಎಸ್. ಸ್ವಾಮಿ




**ಚಿತ್ರದುರ್ಗ :** ಜನರು ಗಲ್ಲಿ ಗಲ್ಲಿಗಳಲ್ಲಿ, ರಸ್ತೆ ರಸ್ತೆಗಳಲ್ಲಿ, ಮನಸ್ಸು ಮಾಡಿದರೆ, ರಸ್ತೆಯ ಅಕ್ಕ ಪಕ್ಕ ಸ್ವಚ್ಛಗೊಳಿಸಿ, ಅಲ್ಲೊಂದಿಷ್ಟು ಗಿಡ ನೆಟ್ಟು, ಕಟ್ಟೆ ಕಟ್ಟಿ, ಹುಲ್ಲು ಬೆಳೆಸಿ, ಅಲ್ಲೊಂದಿಷ್ಟು ಅದ್ಭುತವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ, ಧರ್ಮಪ್ರಚಾರವನ್ನು ಸಹ ಸಾಕಾರಗೊಳಿಸುತ್ತಾ, ಜನರ ಮನಸ್ಸಿನಲ್ಲಿ ಒಳ್ಳೆಯ ಸಿದ್ಧಾಂತಗಳನ್ನ ನೆಲೆಯೂರಿಸಲು ಪ್ರಯತ್ನಿಸಬಹುದು ಹಾಗೂ ರಸ್ತೆಯ ಅಕ್ಕಪಕ್ಕವು ಸಹ ಸುಂದರವಾದ ಪರಿಸರವನ್ನೂ ಸಹ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಕರೆ ನೀಡಿದ್ದಾರೆ.

ಅವರು ರಾಜೇಂದ್ರ ನಗರದ ಅಕ್ಕಪಕ್ಕದ ನಿವಾಸಿಗಳು ಒಗ್ಗಟ್ಟಿನಿಂದ ಕೆಲಸ ಮಾಡಿ, ರಸ್ತೆ ಬದಿಯಲ್ಲಿರುವ ಕಾಲಿ ಜಾಗಗಳನ್ನ ಸ್ವಚ್ಛಗೊಳಿಸಿ, ಅಲ್ಲಿ ಸಸಿ ನೆಟ್ಟು, ಬುದ್ಧನ ವಿಗ್ರಹ ಸ್ಥಾಪಿಸಿ, ಧಮ್ಮ ಚಕ್ರವನ್ನ ಸ್ಥಾಪಿಸಿ ಬುದ್ಧನ ಬಗ್ಗೆ, ಬುದ್ಧನ ಸಿದ್ಧಾಂತಗಳ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡುತ್ತಿದ್ದು, ನೋಡುಗರನ್ನು ಆಕರ್ಷಿಸುವಂತಹ ವ್ಯವಸ್ಥೆ ಕಲ್ಪಿಸಿದ್ದ ಆಯೋಜಕರನ್ನ ಶ್ಲಾಘಿಸಿ ಮಾತನಾಡುತ್ತಿದ್ದರು.

ರಸ್ತೆ ಬದಿಯಲ್ಲಿ ಹಾಳು ಬಿದ್ದ ಜಾಗವನ್ನು ಪರಿವರ್ತಿಸಿ, ಸ್ವಚ್ಛಗೊಳಿಸಿ, ಕಟ್ಟೆ ನಿರ್ಮಿಸಿ, ಬೋಧಿ ವೃಕ್ಷವನ್ನು ನೆಟ್ಟು, ಅದರ ಕೆಳಗಡೆ ದಮ್ಮ ಚಕ್ರವನ್ನ ಸ್ಥಾಪಿಸಿ, ಜನರಲ್ಲಿ ಬುದ್ಧನ ಸಂದೇಶಗಳನ್ನು ಸಾರುವ ನಿಟ್ಟಿನಲ್ಲಿ ಜನರು ಪ್ರಯತ್ನಿಸುತ್ತಿರುವುದು ಸಂತೋಷದಾಯಕ ಎಂದರು.ಅಂಬೇಡ್ಕರ್ ರಸ್ತೆ, ಟೀಚರ್ಸ್ ಕಾಲೋನಿ ರಸ್ತೆ, ರಾಜೇಂದ್ರನಗರದ ಅಕ್ಕಪಕ್ಕದ ನಿವಾಸಿಗಳಾದ ರಾಜೇಶ್ ಮದರಿ, ಕುಮಾರ್, ಶಿವು, ರಾಜೇಶ್ ಸಂಗಡಿತರಾಗಿ ಇಂತಹ ಕಾರ್ಯ ಮಾಡಿರೋದು ಹಾಗೂ ಜನರಿಂದ ಹತ್ತು ಸಾವಿರದಷ್ಟು ಹಣ ಸಂಗ್ರಹಿಸಿ ಖರ್ಚು ಮಾಡಿರುವ ಇವರ ಕೆಲಸ, ಇನ್ನಿತರ ಪರಿಸರ ಪ್ರೇಮಿಗಳಿಗೂ ಸಹ ಮಾದರಿ ಎಂದು ಪ್ರಶಂಶಿಸಿದರು.

ಬಹಳಷ್ಟು ಜನರಿಗೆ ಅರಳಿ ಮರ ಕೇವಲ ಒಂದು ಪರಿಸರದ ಸಂಕೇತವಾಗಿ, ಮರವಾಗಿ ಕಂಡರೆ, ಬುದ್ಧನ ಅನುಯಾಯಿಗಳಿಗೆ ಇದು ಬೋಧಿವೃಕ್ಷವಾಗಿ, ಬುದ್ಧನ ಜ್ಞಾನಾರ್ಜನೆಗೆ ಸಹಾಯ ಮಾಡಿದಂತಹ ಅದ್ಭುತವಾದ ಮರವಾಗಿದೆ. ಇದರ ಬಗ್ಗೆ ಅಭಿಮಾನ ಹೊಂದಿದ್ದು, ಇದನ್ನು ಸ್ಥಾಪನೆ ಮಾಡಿ, ಅದರ ಕೆಳಗಡೆ ಬುದ್ಧನ ವಿಗ್ರಹಗಳನ್ನು ಇಟ್ಟು ಅಥವಾ ಧಮ್ಮ ಚಕ್ರವನ್ನಿಟ್ಟು ಬುದ್ಧನ ಮಹಿಮೆಯನ್ನು ಆರಾಧಿಸುತ್ತೇವೆ ಎಂದು ಗೌತಮ ಸೇನೆಯ ರಾಜೇಶ್ ರವರು ಅಭಿಪ್ರಾಯ ವ್ಯಕ್ತಪಡಿಸಿದರು.

ಬುದ್ಧನ ಜೀವನ ಮತ್ತು ಚರಿತ್ರೆ, ಅವನ ಬೋಧನೆಗಳನ್ನು ಇಂದಿನ ಯುಜನಾಂಗಕ್ಕೆ ತಿಳಿಸಿ ಕೊಡಬೇಕಾದ್ದು ನಮ್ಮೆಲ್ಲರ ಕರ್ತವ್ಯವಾಗಿದೆ, ಆಸೆಯೇ ದುಃಖಕ್ಕೆ ಕಾರಣ ಎಂಬ ಮಾತನ್ನು ಪ್ರತಿನಿತ್ಯ ನೆನೆಸಿಕೊಂಡು, ನಾವು ದುರಾಸೆಯಿಂದ ಹೊರಗೆ ಬಂದು, ಜೀವನ ನಿರ್ವಹಿಸಲು ಎಷ್ಟು ಬೇಕೋ ಅಷ್ಟನ್ನೇ ಪರಿಸರದ ಸಂಪನ್ಮೂಲಗಳನ್ನ ಬಳಸಿಕೊಳ್ಳಬೇಕು ಎಂದರು.

ಏಷ್ಯಾದ ಜ್ಯೋತಿಯಾದ ಬುದ್ಧನು ಸರ್ವಕಾಲಿಕ ಶ್ರೇಷ್ಠ ಪುರುಷರಲ್ಲಿ ಒಬ್ಬನಾಗಿದ್ದರು. ಅವರ ಬೋಧನೆಗಳು ಶ್ರೇಷ್ಠವಾಗಿದ್ದವು, ಅದು ಮಾನವಕುಲದ ಅತ್ಯಂತ ಪ್ರಬಲ ಧರ್ಮವಾಯಿತು. ಗೌತಮ ಬುದ್ಧನ ಹೆಸರು ಭಾರತದ ಇತಿಹಾಸವನ್ನು ಬೇರೆ ಯಾವುದೇ ಹೆಸರಿಗಿಂತ ಹೆಚ್ಚು ಶ್ರೀಮಂತಗೊಳಿಸಿದೆ. ಭೂಮಿಯ ಮೇಲಿನ ಅತಿದೊಡ್ಡ ಧರ್ಮದ ಸ್ಥಾಪಕರಾದ ಅವರು, ಮಾನವಕುಲದ ಬಹುಪಾಲು ಭಾಗದಿಂದ ದೇವರೆಂದು ಪರಿಗಣಿಸಲ್ಪಟ್ಟ ಇತಿಹಾಸದಲ್ಲಿ ಏಕೈಕ ವ್ಯಕ್ತಿ. ಅವರು ಕುಳಿತು ಧ್ಯಾನಿಸಿದ ಮರ ಬೋಧಿ ವೃಕ್ಷ ಎಂದು ಪ್ರಸಿದ್ಧವಾಯಿತು ಮತ್ತು ಆ ಸ್ಥಳವು ಬೋಧಗಯಾ ಎಂದು ಪ್ರಸಿದ್ಧವಾಯಿತು ಎಂದರು.

ಬುದ್ಧನು ಕಂಡುಕೊಂಡ ಸತ್ಯವೆಂದರೆ "ಇಡೀ ಜೀವನದ ಆಧಾರವಾಗಿರುವ ಸತ್ಯ, ಅಂದರೆ, ಜೀವನವು ದುಃಖದಿಂದ ತುಂಬಿದೆ, ಬಯಕೆಯೇ ದುಃಖಕ್ಕೆ ಕಾರಣ, ಬಯಕೆಯ ನಾಶದಲ್ಲಿ ದುಃಖವು ಕೊನೆಗೊಳ್ಳುತ್ತದೆ ಮತ್ತು ಸರಿಯಾದ ಜೀವನದಿಂದ ಬಯಕೆ ನಾಶವಾಗುತ್ತದೆ. ಸರಳ ಜೀವನ ಆಧ್ಯಾತ್ಮಿಕ ಚಿಂತನೆ ಬಗ್ಗೆ ಹೆಚ್ಚು ಆಸಕ್ತಿ ವಹಿಸುವಂತೆ ಅವನ ಸಿದ್ಧಾಂತಗಳನ್ನ ನಾವು ಅಳವಡಿಸಿಕೊಂಡು, ಇಂದು ನಡೆಯುತ್ತಿರುವ ಪರಿಸರ ಮಾಲಿನ್ಯ, ಬಡತನ, ಶೋಷಣೆ, ಭ್ರಷ್ಟಾಚಾರವನ್ನು ನಿಗ್ರಹಿಸಲು ಬಳಕೆ ಮಾಡಬೇಕು ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ಆರೋಗ್ಯ ಮೇಳಕ್ಕೆ ಭರ್ಜರಿ ಸ್ಪಂದನೆ



**ಹಾಸನ:** ಪರಿಸರ ಪ್ರೇಮಿ ಹಾಗೂ ಸಮಾಜ ಸೇವಕ ಹನುಮೇಗೌಡ ಹಾಗೂ ರೋಟರಿ ಕ್ಲಬ್ ಆಫ್ ಸೆಂಟ್ರಲ್ ಹಾಸನ. ಶ್ರೀ ಲಕ್ಷ್ಮೀ ರಂಗನಾಥ ಎಜುಕೇಶನ್ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ತಾಲೂಕಿನ ಕೌಶಿಕ ಗ್ರಾಪಂ ವ್ಯಾಪ್ತಿಯ ಶೆಟ್ಟಿಹಳ್ಳಿಯಲ್ಲಿ ನಡೆದ ಬೃಹತ್ ಆರೋಗ್ಯ ತಪಾಸಣಾ ಶಿಬಿರ ಹಾಗೂ ಗಿಡ ನೆಡುವ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಗಿಡ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಎಚ್.ಎಲ್ ಮಲ್ಲೇಶಗೌಡ, ಆರೋಗ್ಯದ ಮುಂದೆ ಬೇರೇನೂ ಮುಖ್ಯವಲ್ಲ ಈ ನಿಟ್ಟಿನಲ್ಲಿ ಎಲ್ಲರೂ ಆರೋಗ್ಯ ಕಾಪಾಡಿಕೊಳ್ಳುವತ್ತ ಚಿತ್ತ ಹರಿಸಬೇಕಿದೆ ಎಂದರು.

ಆರೋಗ್ಯ ತಪಾಸಣಾ ಶಿಬಿರಗಳು ಗ್ರಾಮೀಣ ಭಾಗದ ಜನರಿಗೆ ಹೆಚ್ಚೆಚ್ಚು ಉಪಯುಕ್ತವಾಗುತ್ತವೆ. ದೂರದ ಊರುಗಳಿಂದ ನಗರ ಭಾಗಕ್ಕೆ ಬಂದು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಲು ಎಲ್ಲರಿಂದಲೂ ಸಾಧ್ಯವಿಲ್ಲ. ಹಾಗಾಗೀ ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ತಪಾಸಣಾ ಶಿಬಿರಗಳು ಹೆಚ್ಚು ನಡೆಯಬೇಕಿದೆ ಎಂದರು.

ಬಹುತೇಕರು ಗಳಿಸಿದ್ದೆಲ್ಲವನ್ನು ಕೂಡಿಡುವ ಕೆಲಸಕ್ಕೆ ಮುಂದಾಗುತ್ತಾರೆ ಕೆಲವರು ಮಾತ್ರ ಸಮಾಜಮುಖಿಯಾಗಿ ಸೇವಾ ಮನೋಭಾವನೆ ಬೆಳೆಸಿಕೊಳ್ಳುತ್ತಾರೆ. ಅಂತವರು ಮಾತ್ರ ಜನರ ಮನಸ್ಸಿನಲ್ಲಿ ನೆಲೆ ನಿಲ್ಲುತ್ತಾರೆ ಎಂಬುದನ್ನು ಯಾರು ಮರೆಯಬಾರದು ಎಂದು ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿರುವ ಹನುಮೇಗೌಡ ಹಾಗೂ ವಿವಿಧ ಸಂಘ ಸಂಸ್ಥೆಗಳ ಕಾರ್ಯವನ್ನು ಶ್ಲಾಘಿಸಿದರು.

ರೋಟರಿ ಕ್ಲಬ್ ಆಫ್ ಸೆಂಟ್ರಲ್ ಅಧ್ಯಕ್ಷ ರೊ.ನಾಗೇಶ್ ಎಂ.ಡಿ ಮಾತನಾಡಿ, ರೋಟರಿ ಸದಾ ಸಮಾಜದ ಒಳಿತಿಗಾಗಿ ಯೋಜನೆಗಳನ್ನು ರೂಪಿಸಿಕೊಂಡು ಮುನ್ನಡೆಯುತ್ತಿರುತ್ತದೆ. ರೋಟರಿ ಸಮಾಜದ ಒಳಿತಿಗಾಗಿ ಸಾಕಷ್ಟು ಕಾರ್ಯಗಳನ್ನು ಈವರೆಗೂ ಮಾಡಿದ್ದು, ರೋಟರಿಯ ಸೇವೆ ಅಂತಾರಾಷ್ಟ್ರೀಯ ಮಟ್ಟದಿಂದ ಹಿಡಿದು ಹಳ್ಳಿಗಳವರೆಗೂ ವ್ಯಾಪಿಸಿದೆ ಎಂದರು.

ರೋಟರಿ ಎಂದರೆ ಸೇವೆ, ಸೇವೆಗಾಗಿ ರೋಟರಿ ಕುಟುಂಬ ಸದಾ ಸಿದ್ಧವಿರುತ್ತದೆ. ಪೋಲೀಯೋ ನಿರ್ಮೂಲನೆಯಿಂದ ಹಿಡಿದು ವಿವಿಧ ಕಾಲಘಟ್ಟಗಳಲ್ಲಿ ಎದುರಾಗಿರುವ ವಿಪತ್ತುಗಳ ಸಂದರ್ಭದಲ್ಲಿ ರೋಟರಿ ತನ್ನ ಸೇವೆಯನ್ನು ನೀಡುತ್ತಾ, ವಿವಿಧ ಸಂಘ–ಸಂಸ್ಥೆಗಳಿಗೆ ಮಾದರಿಯಾಗಿ ಮುನ್ನಡೆದುಕೊಂಡು ಬಂದಿದೆ ಎಂದರು. ಪರಿಸರ ಪ್ರೇಮಿ ಹಾಗೂ ಸಮಾಜ ಸೇವಕ ಹನುಮೇಗೌಡ ಮಾತನಾಡಿ, ಬಡ ಕುಟುಂಬದಲ್ಲಿ ಹುಟ್ಟಿ ಬೆಳೆದ ನಾನು ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕೆಂಬ ಆಕಾಂಕ್ಷೆ ಹೊಂದಿದ್ದೇನೆ. ದೂರದ ಆಂಧ್ರ ಪ್ರದೇಶದಲ್ಲಿ ಬೇಕರಿಗಳ ಉದ್ಯಮ ನಡೆಸುತ್ತಿರುವ ನಾನು ಹುಟ್ಟೂರಿಗೆ ನನ್ನ ಕೈಲಾದ ಸೇವೆ ಮಾಡಬೇಕೆಂಬ ಸದುದ್ದೇಶ ಹೊಂದಿ ಸುಮಾರು 500 ಗಿಡಗಳನ್ನು ನೆಟ್ಟು ಸುರಕ್ಷಿತವಾಗಿ ಬೆಳೆಸಲು ಕಬ್ಬಿಣದ ಗಾರ್ಡ್ ವ್ಯವಸ್ಥೆ, ಬೇಸಿಗೆಯಲ್ಲಿ ನೀರುಣಿಸಲು ಟ್ಯಾಂಕರ್ ವ್ಯವಸ್ಥೆ ಮಾಡಿದ್ದೇನೆ.ಜೊತೆಗೆ ಆರೋಗ್ಯ ತಪಾಸಣಾ ಶಿಬಿರದಂತಹ ಸಮಾಜ ಸೇವೆ ನನಗೆ ಧನ್ಯಾತಾಭಾವ ಮೂಡಿಸಿದೆ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಬಿ.ಆರ್ ಬೊಮ್ಮೇಗೌಡ ಪ್ರಾಸ್ತಾವಿಕ ನುಡಿಗಳನ್ನಾಡಿದರು. 25 ಕ್ಕೂ ಹೆಚ್ಚು ನಿವೃತ್ತ ಯೋಧರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಆದಿಚುಂಚನಗಿರಿ ಆಸ್ಪತ್ರೆ, ಜೀವಜ್ಯೋತಿ ಆಸ್ಪತ್ರೆ, ಅಮ್ಮ ಕಣ್ಣಿನ ಆಸ್ಪತ್ರೆ, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞವೈದ್ಯರ ಸಂಘದಿಂದ ತಪಾಸಣಾ ಶಿಬಿರ ನಡೆಸಲಾಯಿತು.

# ಅಪ್ಪ–ಮಕ್ಕಳನ್ನು ಜೈಲಿಗೆ ಹಾಕುವವರೆಗೂ ಹೋರಾಟ

## ಯಡಿಯೂರಪ್ಪ – ವಿಜಯೇಂದ್ರ ವಿರುದ್ಧ ಕಿಡಿಕಾರಿದ ಬಸವನಗೌಡ ಪಾಟೀಲ್ ಯತ್ನಾಳ್

**ಮಲೇಬೆನ್ನೂರು:** ನಾವು ಯಾರ ಕ್ಷಮೆಯನ್ನು ಕೇಳಿಲ್ಲ, ಮುಂದೆ ಕೇಳುವುದೂ ಇಲ್ಲ. ನಮ್ಮನ್ನು ಗೌರವಯುತವಾಗಿ ಪಕ್ಷಕ್ಕೆ ವಾಪಸ್ ಕರೆದು–ಕೊಂಡ್ರೆ ಹೋಗ್ತೀವಿ. ಇಲ್ಲ ಅಂದ್ರೆ ಅಪ್ಪ – ಮಕ್ಕಳನ್ನು ಜೈಲಿಗೆ ಕಳುಹಿಸುವವರೆಗೂ ಹೋರಾಟ ಮಾಡುತ್ತೇವೆ ಎಂದು ಬಿಜೆಪಿಯಿಂದ ಉಚ್ಚಾಟನೆಗೊಂಡಿರುವ ನಾಯಕ ಬಸವನಗೌಡ ಪಾಟೀಲ್ ಯತ್ನಾಳ್ ಕೇಂದ್ರ ಬಿಜೆಪಿ ನಾಯಕರಿಗೆ ಸ್ಪಷ್ಟ ಸಂದೇಶ ನೀಡಿ–ದರು.

ದೇವರಬೆಳಕೆರೆ ಗ್ರಾಮದಲ್ಲಿ ಇಂದು ರಾತ್ರಿ ಹಮ್ಮಿಕೊಂಡಿದ್ದ ವಿಶ್ವಗುರು ಬಸವೇಶ್ವರ ಜಯಂತ್ಯೋತ್ಸವ ಕಾರ್ಯಕ್ರಮವನ್ನು ದೀಪ ಬೆಳಗಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಅಪ್ಪ – ಮಕ್ಕಳಂತೆ ನಮಗೆ ದುಡ್ಡು ಹೊಡೆಯುವ ಚಟವಿಲ್ಲ. ನಮ್ಮ ಹೋರಾಟ ಹಿಂದೂ ಸಮಾಜ, ರಾಜ್ಯ ಮತ್ತು ದೇಶಕ್ಕಾಗಿ ಮಾತ್ರ ಇದ್ದು, ಈಶ್ವರಪ್ಪ ಮತ್ತು ನನ್ನನ್ನು ಹೊರ ಹಾಕಿದ ತಕ್ಷಣ ನೀವು ಗೆದ್ದಿಲ್ಲ. ರಾಜ್ಯದ ಜನ ನಮ್ಮ ಬೆಂಬಲಕ್ಕಾಗಿ ನಿಂತಿದ್ದಾರೆ ಎಂದು ಅವರು ಹೇಳಿದರು.

ಅಂಬೇಡ್ಕರ್, ಬಸವಣ್ಣನವರ ಹಾದಿಯಲ್ಲಿ ನಾವಿದ್ದೇವೆ. ನಮಗೆ ಒಳ್ಳೆಯ ಅವಕಾಶ ಸಿಗಲಿದೆ ಎಂಬ ವಿಶ್ವಾಸವನ್ನು ನಾಡಿನ ಜನ ಮತ್ತು ಮಠಾಧೀಶರು ವ್ಯಕ್ತಪಡಿಸಿದ್ದಾರೆ. ಕೆಪಿಎಸ್ಸಿ ಬಡವರ ಪಾಲಿಗೆ ದೂರವಾಗಿದ್ದು, ರಾಜಕಾರಣಿಗಳ ಮಕ್ಕಳು, ಶ್ರೀಮಂತರ ಮಕ್ಕಳು ಮತ್ತು ಅಧಿಕಾರಿಗಳಿಗೆ ಮಾತ್ರ ಹತ್ತಿರವಾಗಿದೆ ಎಂದು ಬೇಸರ ವ್ಯಕ್ತಪಡಿಸಿದ ಯತ್ನಾಳ್, ವಿಶ್ವಗುರು ಬಸವಣ್ಣನವರನ್ನು ಕೆಲವರು ತಮ್ಮ ಕಪಿಮುಷ್ಠಿಯಲ್ಲಿಟ್ಟುಕೊಂಡು ಕಮ್ಯುನಿಸ್ಟ್ ಲೀಡರ್‌ನ್ನಾಗಿ ಮಾಡ ಹೊರಟಿದ್ದಾರೆ. ಬಸವಣ್ಣನವರು ಸನಾತನ ಧರ್ಮದಲ್ಲಿರುವ ಮೂಢನಂಬಿಕೆ ಮತ್ತು ಅಸ್ಪೃಶ್ಯತೆ ವಿರುದ್ಧ ಹೋರಾಟ ಮಾಡಿದ್ದಾರೆಯೇ ವಿನಃ ಹಿಂದೂ ಧರ್ಮದ ವಿರುದ್ಧ ಅಲ್ಲ ಎಂದು ಸ್ಪಷ್ಟಪಡಿಸಿದರು.

ಈಗ ಅಂಬೇಡ್ಕರ್ ಅವರ ಬಗ್ಗೆ ಯಾರು



ಹೆಚ್ಚು ಮಾತನಾಡುತ್ತಿದ್ದಾರೆಯೋ ಅವರ ಪಕ್ಷದವರಿಂದಲೇ ಅವರು 2 ಸಲ ಸೋತಿದ್ದಾ–ರೆ. ಅಂಬೇಡ್ಕರ್ ಅವರನ್ನು ಬೆಂಬಲಿಸಿದವರು ಯಾರೆಂದು ದೇಶಕ್ಕೇ ಗೊತ್ತಿದೆ ಎಂದು ಯತ್ನಾಳ್ ಹೇಳಿದರು.

ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಮಾತನಾಡಿ, ಕಾಶ್ಮೀರದಲ್ಲಿ 26 ಅಮಾಯಕ ಹಿಂದೂಗಳನ್ನು ಹತ್ಯೆ ಮಾಡಿರುವ ಇಂತಹ ಸಂದರ್ಭದಲ್ಲಿ ಗಾಂಧೀಜಿ ಇದ್ದಿದ್ದರೆ, ಹಿಂದೂಸ್ತಾನ ಮತ್ತು ಪಾಕಿಸ್ತಾನ ವಿಭಜನೆ ಆಗಲು ಸಹಕರಿಸಿದ್ದು ತಪ್ಪಾಯಿತೆಂದು ಪಶ್ಚಾತ್ತಾಪ ಪಡುತ್ತಿದ್ದರು ಎಂದರು.

ದೇಶಕ್ಕಾಗಿ ದೇಶದ ಎಲ್ಲಾ ಜನ ಒಂದಾಗಿರುವುದು ಹೆಮ್ಮೆಯ ವಿಷಯವಾಗಿದ್ದು, ಭಾರತ ಮತ್ತೊಷ್ಟು ಬಲಿಷ್ಠ ದೇಶವಾಗಿ ಹೊರಹೊಮ್ಮಿದೆ. ಅಂಬೇಡ್ಕರ್ –ಬಸವಣ್ಣನವರ ಆಶಯಗಳ ಅನುಷ್ಠಾನಕ್ಕೆ ನಾವೆಲ್ಲರೂ ಶ್ರಮಿಸಿದಾಗ ಮಾತ್ರ ಸಮ ಸಮಾಜ ನಿರ್ಮಾಣವಾಗುತ್ತದೆ ಎಂದು ಈಶ್ವರಪ್ಪ ಹೇಳಿದರು.

ಮಾಜಿ ಶಾಸಕ ಹೆಚ್.ಎಸ್.ಶಿವಶಂಕರ್ ಮಾತನಾಡಿ, ಕೆಲವರ ಸ್ವಾರ್ಥಕ್ಕಾಗಿ ಈಶ್ವರಪ್ಪ ಮತ್ತು ಯತ್ನಾಳ್ ಅವರನ್ನು ಪಕ್ಷದಿಂದ ಹೊರ ಹಾಕಲಾಗಿದೆ. ಆದರೆ, ಮುಂದೊಂದು ದಿನ ಆ ಪಕ್ಷದ ನಾಯಕರೇ ನಿಮ್ಮ ಕಾಲು ಹಿಡಿದು ಪಕ್ಷಕ್ಕೆ ಕರೆದುಕೊಳ್ಳುತ್ತಾರೆ. ನಿಮ್ಮ ಶಕ್ತಿ ಬಗ್ಗೆ ಬಿಜೆಪಿಗೆ ಗೊತ್ತಿದೆ ಎಂದರು.

ಅಷ್ಟೇ ಅಲ್ಲ, ರಾಜ್ಯದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರುವುದು ನಿಶ್ಚಿತವಾಗಿದ್ದು, ಈಶ್ವರಪ್ಪ ಮತ್ತು ಯತ್ನಾಳ್ ಇಬ್ಬರಿಗೂ ಸಿಎಂ ಆಗುವ ಅವಕಾಶ ಇದೆ. ಅಲ್ಲಿಯವರೆಗೆ ತಾಳ್ಮೆ ಇರಲಿ ಎಂದು ಶಿವಶಂಕರ್ ಹೇಳಿದರು.

ಇನ್‌ಸೈಟ್ ಸಂಸ್ಥಾಪಕ ಜಿ.ವಿ.ವಿನಯ್‌ಕುಮಾರ್ ಮಾತನಾಡಿ, ಕುಟುಂಬ ರಾಜಕಾರಣದಿಂದ ದೇಶಕ್ಕೆ ಮತ್ತು ಅಭಿವೃದ್ಧಿಗೆ ಹಿನ್ನಡೆಯಾಗುತ್ತಿದ್ದು, ಇದರ ವಿರುದ್ಧ ಹೋರಾಟ ಮಾಡುತ್ತಿರುವ ಈಶ್ವರಪ್ಪ ಮತ್ತು ಯತ್ನಾಳ್ ಅವರನ್ನು ನಾವು ಬೆಂಬಲಿಸೋಣ ಎಂದರು.

ರಾಜಕಾರಣದಲ್ಲಿ, ಧರ್ಮದಲ್ಲಿ, ಅಭಿವೃದ್ಧಿಯಲ್ಲಿ ಎಲ್ಲರಿಗೂ ಸಮಾನತೆ ಸಿಕ್ಕಾಗ ಮಾತ್ರ ಬಸವಣ್ಣನವರ, ಅಂಬೇಡ್ಕರ್ ಅವರ ಆಶಯದಂತೆ ಸಮ ಸಮಾಜ ನಿರ್ಮಾಣವಾಗಲಿದೆ ಎಂದರು.

ಕೂಡಲ ಸಂಗಮದ ಶ್ರೀ ಜಯಮೃತ್ಯುಂಜಯ ಸ್ವಾಮೀಜಿ, ಹೆಬ್ಬಾಳು ವಿರಕ್ತ ಮಠದ ಶ್ರೀ ಮಹಾಂತ ರುದ್ರೇಶ್ವರ ಸ್ವಾಮೀಜಿ, ಶ್ರೀ ಬಾಲಯೋಗಿ ಜಗದೀಶ್ವರ ಶಿವಾಚಾರ್ಯ ಸ್ವಾಮೀಜಿ, ಧಾರವಾಡದ ಶ್ರೀ ವಿನಯ್‌ಕುಮಾರ್ ಗುರೂಜಿ, ಬ್ಯಾಡಗಿ ರುದ್ರನೂರು ಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಅಥಣಿ ಇಂಚಗೇರಿಮಠದ ಶ್ರೀ ಶಶಿಕಾಂತ ಗುರೂಜಿ ಸಾನ್ನಿಧ್ಯ ವಹಿಸಿದ್ದರು.

ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಆರ್.ವಿ.ಅಶೋಕ್ ಗೋಪನಾಳ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಮದ ಎಂ.ಕರಿಬಸಪ್ಪ ಸ್ವಾಗತಿಸಿದರು. ಎನ್.ವೀರೇಶ್ ವಂದಿಸಿದರು.

## ಮಳೆ ವರದಿ: ಚಿತ್ರದುರ್ಗ ಜಿಲ್ಲೆಯಲ್ಲಿ 22.7 ಮಿ.ಮೀ ಮಳೆ

**ಚಿತ್ರದುರ್ಗ:** ಶನಿವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 22.7 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 29.9 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 20.9 ಹಿರಿಯೂರು ತಾಲ್ಲೂಕು 5.6 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 23.3 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 35.1 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 20.3 ಮಿ.ಮೀ ಮಳೆಯಾಗಿದೆ.

ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 19.8 ಮಿ.ಮೀ, ನಾಯಕನಹಟ್ಟಿ 36.7 ಮಿ.ಮೀ, ಪರಶುರಾಂಪುರ 17.2 ಮಿ.ಮೀ, ತಳಕು 32.3 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 19.6 ಮಿ.ಮೀ, ಭರಮಸಾಗರ 19.9 ಮಿ.ಮೀ, ಹಿರೇಗುಂಟನೂರು 25.6 ಮಿ.ಮೀ, ತುರುವನೂರು 28.4 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 7.1 ಮಿ.ಮೀ, ಐಮಂಗಲ 8.1 ಮಿ.ಮೀ, ಧರ್ಮಪುರ 5.3 ಮಿ.ಮೀ, ಜವನಗೊಂಡನಹಳ್ಳಿ 16.8 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 26.5 ಮಿ.ಮೀ, ಬಿ.ದುರ್ಗ 19.8 ಮಿ.ಮೀ, ರಾಮಗಿರಿ 20.1 ಮಿ.ಮೀ, ತಾಳ್ಯ 22.9 ಮಿ.ಮೀ ಮಳೆಯಾಗಿದೆ.

## ವಿಭಿನ್ನ ತಂತ್ರಜ್ಞಾನ ಅಳವಡಿಸಿಕೊಳ್ಳುವ ಮೂಲಕ ಯುವಜನತೆ ತಲುಪಬೇಕು : ಡಾ. ರಂಗನಾಥರಾವ್

**ಚಿತ್ರದುರ್ಗ ಮೇ. 18 :** ಇಂದಿನ ಪ್ರಸ್ತುತ ಸನ್ನಿವೇಷದಲ್ಲಿ ವಸ್ತು ಸಂಗ್ರಹಾಲಯಕ್ಕಷ್ಟೇ ಸೀಮಿತವಾಗದೇ ಸಂಶೋಧನೆಗೆ ವೇದಿಕೆಗಳಾಗಿದ್ದು ಇಂದಿನ ಕೃತಕ ಬುದ್ದಿ ಮತ್ತೆ ಪೂರಕವಾಗಿ ವಿಭಿನ್ನ ತಂತ್ರಜ್ಞಾನ ಅಳವಡಿಸಿಕೊಳ್ಳುವ ಮೂಲಕ ಯುವಜನತೆಯನ್ನು ತಲುಪಬೇಕಾಗಿದೆ ಎಂದು ಶಿವಮೊಗ್ಗದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಸಹ ಪ್ರಧ್ಯಾಪಕರಾದ ಡಾ. ರಂಗನಾಥರಾವ್. ಹೆಚ್. ಕರಾಡ್ ತಿಳಿಸಿದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿ ಸರ್ಕಾರಿ ವಸ್ತುಸಂಗ್ರಹಾಲಯ ಚಿತ್ರದುರ್ಗ ಇದರವತಿಯಿಂದ ಮೇ.18 ರಂದು ರಂಗಯ್ಯನ ಬಾಗಿಲ ಬಳಿ ಹಮ್ಮಿಕೊಳ್ಳಲಾದ ಅಂತರರಾಷ್ಟ್ರೀಯ ವಸ್ತುಸಂಗ್ರಹಾಲಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, 1479ರಲ್ಲಿ ಇಟಲಿಯ ರೋಮ್ ನಗರದಲ್ಲಿ ಸ್ಥಾಪಿತವಾದ ಅತ್ಯಂತ



ಪ್ರಾಚೀನ ವಸ್ತುಸಂಗ್ರಹಾಲಯ ಬೆಳವಣಿಗೆಯಿಂದ ಪ್ರೇರೇಪಿತರಾದ ವಿಶ್ವದ ಅನೇಕ ದೇಶಗಳು ತಮ್ಮ ಸಂಸ್ಕೃತಿ, ಪರಂಪರೆ ಹಾಗೂ ಇತಿಹಾಸದ ಅಭಿವೃದ್ಧಿಗೆ ಪೂರಕವಾಗಿ ವಸ್ತು ಸಂಗ್ರಹಾಲಯಗಳನ್ನು ಸ್ಥಾಪಿಸಿದ್ದು ವಿಶೇಷವಾಗಿ 1814ರಲ್ಲಿ ಭಾರತದ ಇಂಡಿಯನ್ ಮ್ಯೂಜಿಯಂ ಕಲ್ಕತ್ತಾ ಇದರ ಸ್ಥಾಪನೆ ಹೇಗೆ ಭಾರತದಲ್ಲಿ ವಸ್ತು ಸಂಗ್ರಹಾಲಯದ ಬೆಳೆವಣಿಗೆಗೆ ಪೂರಕವಾಯಿತು ಎಂಬ ವಿಷಯದ ಜೊತೆಗೆ ವೇಗವಾಗಿ ಬದಲಾಗುತ್ತಿರುವ ಸಮುದಾಯಗಳಲ್ಲಿ ವಸ್ತು ಸಂಗ್ರಹಾಲಯಗಳ ಭವಿಷ್ಯ, ಈ ವಿಷಯವಾಗಿ ಇಂದಿನ ಪ್ರಸ್ತುತ ಸನ್ನಿವೇಷದಲ್ಲಿ ವಸ್ತು ಸಂಗ್ರಹಾಲಯಕ್ಕಷ್ಟೇ ಸೀಮಿತವಾಗದೇ ಸಂಶೋಧನೆಗೆ ವೇದಿಕೆಗಳಾಗಿದ್ದು ಇಂದಿನ ಕೃತಕ ಬುದ್ದಿ ಮತ್ತೆ ಪೂರಕವಾಗಿ ವಿಭಿನ್ನ ತಂತ್ರಜ್ಞಾನ ಅಳವಡಿಸಿಕೊಳ್ಳುವ ಮೂಲಕ ಯುವಜನತೆಯನ್ನು ತಲುಪಬೇಕಾಗಿದೆ ಎಂದರು.

ಚಿತ್ರದುರ್ಗದ ಸರ್ಕಾರಿ ವಿಜ್ಞಾನ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ರಾಜಪ್ಪ ಮಾತನಾಡಿ ವಸ್ತು ಸಂಗ್ರಹಾಲಯಗಳು ಜ್ಞಾನದ ಭಂಡಾರವಾಗಿವೆ ಇವುಗಳನ್ನು ವೀಕ್ಷಣೆ ಮಾಡಿ ಇತಿಹಾಸ ತಿಳಿಯಲು ನಾಗರೀಕರು ಮತ್ತು ಯುವ ಜನತೆ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದರು.

ಚಿತ್ರದುರ್ಗ ಮದಕರಿನಾಯಕ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷರಾದ ಗೋಪಾಲಸ್ವಾಮಿ ನಾಯಕರು ಮಾತನಾಡಿ ಚಿತ್ರದುರ್ಗ ನಗರದಲ್ಲಿ ಈಗಿರುವ ವಸ್ತುಸಂಗ್ರಹಾಲಯ ಸ್ಥಾಪನೆಗೆ ಹುಲ್ಲೂರು ಶ್ರೀನಿವಾಸ ಜೋಯಿಸರ ಕೊಡುಗೆ ಅಪಾರವಾಗಿದ್ದು ಚಿತ್ರದುರ್ಗ ಇತಿಹಾಸದ ಅಮೂಲ್ಯ ಬೆಳಕು ಚೆಲ್ಲಿದ್ದಾರೆ ನಗರದಲ್ಲಿ ಐತಿಹಾಸಿಕ ಕೋಟೆ ಎದುರುಗಡೆ ಇರುವ ಪಿಲ್ಲರ್‌ಹೌಸ್ ಕಟ್ಟಡವನ್ನು ಪುರಾತತ್ವ ಇಲಾಖೆಯ ಹೆಸರಿಗೆ ಮಾಡಿಸಿಕೊಡಲು ನಗರ ಸಭೆಯ ಮಾಜಿ ಅಧ್ಯಕ್ಷರಾದ ಕಾಂತರಾಜ್‌ರವರು ಅಧ್ಯಕ್ಷರಾಗಿದ್ದಾಗ ಸಂಪೂರ್ಣ ಬೆಂಬಲ ನೀಡಿದರು ಪಿಲ್ಲರ್‌ಹೌಸ್ ಕಟ್ಟಡಕ್ಕೆ ವಸ್ತು ಸಂಗ್ರಹಾಲಯ ಹಸ್ತಾಂತರವಾದರೆ ಪ್ರವಾಸಿಗರಿಗೆ ತುಂಬಾ ಅನುಕೂಲವಾಗುತ್ತದೆ ಎಂದರು.

ಶ್ರೀ ಕ್ಯಾತಲಿಂಗೇಶ್ವರ ದೇವಸ್ಥಾನದ ಸಮಿತಿ ಆದ್ಯಕ್ಷರಾದ ಬೊಮ್ಮಣ್ಣ ಮಾತನಾಡಿ ಚಿತ್ರದುರ್ಗದ ಹತ್ತಿರ ತಮಟಕಲ್‌ನಲ್ಲಿರುವ ಗುಣಮಧುರನ ಶಾಸನ ಸಂರಕ್ಷಣೆಗೆ ಪ್ರಹ್ಲಾದ್. ಜಿ. ಸಹಾಯಕ ನಿರ್ದೇಶಕರು ತುಂಬಾ ಕಾಳಜಿ ವಹಿಸಿದರು ಜಿಲ್ಲೆಯಲ್ಲಿರುವ ಅಮೂಲ್ಯ ಶಾಸನಗಳ ರಕ್ಷಣೆಗೆ ಅವರು ಇನ್ನು ಕ್ರಮವಹಿಸಲಿ ಎಂದರು

ನಗರಸಭೆಯ ಮಾಜಿ ಸದಸ್ಯರಾದ ಮಹಂತೇಶ್ ಮಾತನಾಡಿ ಈಗಿರುವ ರಂಗಯ್ಯನ ಬಾಗಿಲು ಸ್ಮಾರಕ ರಕ್ಷಣೆಗೆ ಸ್ಥಳೀಯ ನಾಗರೀಕರು ಮದಕರಿ ಗಣಪತಿ ಸಮಿತಿಯವರ ಕಾಳಜಿಯಿಂದಾಗಿ ಕೋಟೆ ಬಾಗಿಲು ಉಳಿದು ಬಂದಿದೆ ಎಂದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಸಹಾಯಕ ನಿರ್ದೇಶಕರಾದ ಪ್ರಹ್ಲಾದ್. ಜಿ ಮಾತನಾಡಿ ನಮ್ಮ ಇಲಾಖಾ ವತಿಯಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಪ್ರಾಚ್ಯಾವಶೇಷಗಳ ಗ್ರಾಮವಾರು ಸರ್ವೇ ಕಾರ್ಯವನ್ನು ನಡೆಸಲಾಗಿದೆ ಪ್ರಾಚ್ಯಾವಶೇಷಗಳ ಸಂರಕ್ಷಣೆಗೆ ಪ್ರಾಮುಖ್ಯತೆ ವಹಿಸಲಾಗಿದೆ ಮತ್ತು ಜಿಲ್ಲೆಯಲ್ಲಿರುವ ಸ್ಮಾರಕಗಳ ರಕ್ಷಣೆಗೆ ಅಗತ್ಯ ಕ್ರಮ ವಹಿಸಲಾಗುತ್ತಿದೆ ಎಂದರು.

## ಮದ್ಯದ ದರ, ಸನ್ನದ ಶುಲ್ಕಗಳ ಏರಿಕೆ– ಅಶೋಕ್ ಆಕ್ರೋಶ

**ಬೆಂಗಳೂರು ಮೇ18 :** ಅಪಾಯಕಾರಿ ನೀತಿಗಳ ಮೂಲಕ ಅಬಕಾರಿ ಆದಾಯದ ಮೂಲಕ್ಕೆ ಕೊಡಲಿ ಪೆಟ್ಟು ನೀಡಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕರಾದ ಆರ್. ಅಶೋಕ್ ಆರೋಪಿಸಿದ್ದಾರೆ.

ಅವೈಜ್ಞಾನಿಕ ಆರ್ಥಿಕ ನೀತಿಗಳಿಂದ ದಿವಾಳಿ ಸ್ಥಿತಿ ತಲುಪಿರುವ ರಾಜ್ಯ ಸರ್ಕಾರ ಸಂಪನ್ಮೂಲ ಸಂಗ್ರಹಕ್ಕೆ ಅನುಸರಿಸುತ್ತಿರುವ ಮಾರ್ಗ ಉದ್ಯಮಕ್ಕೆ ಮಾರಕವಾಗಿದೆ ಎಂದು ಟೀಕಿಸಿದ್ದಾರೆ.

ದರ ಮತ್ತು ಸನ್ನದು ಶುಲ್ಕ ಏರಿಕೆಗೂ ಒಂದು ಮಾನದಂಡ ಇರುತ್ತದೆ. ಆದರೆ ಒಂದೇ ವರ್ಷದಲ್ಲಿ ಮದ್ಯ ಮಾರಾಟ ಮತ್ತು ಸನ್ನದು ಶುಲ್ಕವನ್ನು ಅಡ್ಡಾದಿಡ್ಡಿ ಹೆಚ್ಚಿಸುತ್ತಿರುವುದು ಉದ್ಯಮದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

ಬಜೆಟ್‌ನಲ್ಲಿ ಯಾವುದೇ ತೆರಿಗೆ ಹಾಕಿಲ್ಲ ಎಂದು



ಬೆನ್ನು ತಟ್ಟಿಕೊಂಡು ನಂತರದಲ್ಲಿ ಆಲ್ಕೊಹಾಲ್ ದರಗಳನ್ನು ಯದ್ವಾತದ್ವಾ ಹೆಚ್ಚಿಸಿದ್ದಾರೆ. ಅದರಲ್ಲೂ ಬಿಯರ್ ದರವನ್ನು ವರ್ಷದಲ್ಲಿ ಎರಡೂ –ಮೂರು ಸಲ ಹೆಚ್ಚಿಸಲಾಗಿದೆ. ಗ್ರಾಹಕರಿಗೆ ದೊಡ್ಡ ಹೊರೆ ಹೊರಿಸಲಾಗಿದೆ. ಮದ್ಯಪ್ರಿಯರು ಪ್ರತಿಭಟಿಸುವುದಿಲ್ಲ ಎಂಬ ಕಾರಣಕ್ಕೆ ಇಂತಹ ಕ್ರಮ ಅನುಸರಿಸುವುದು ಒಳ್ಳೆಯದಲ್ಲ.

ಸರಿಯಾದ ಆರ್ಥಿಕ ಶಿಸ್ತು ಮತ್ತು ಸಿದ್ಧತೆಗಳಿಲ್ಲದೆ ಗ್ಯಾರೆಂಟಿ ಯೋಜನೆಗಳನ್ನು ಜಾರಿಗೊಳಿಸಲಾಯಿತು. ಇದರಿಂದ ಅಭಿವೃದ್ಧಿ ಕಾರ್ಯಕ್ರಮಗಳು ಸ್ಥಗಿ–ತ ಗೊಂಡಿವೆ. ಬೊಕ್ಕಸ ಬರಿದಾಗಿ ಸರ್ಕಾರ ದಿವಾಳಿಯಾಗಿದೆ.

ಇದನ್ನು ಹೇಗಾದರೂ ಸರಿಪಡಿಸಿಕೊಳ್ಳಲು ಹೆಣಗುತ್ತಿರುವ ಸರ್ಕಾರ, ಸಿಕ್ಕ ಸಿಕ್ಕ ಎಲ್ಲ ವಸ್ತುಗಳ ದರ ಹೆಚ್ಚಳ ಮಾಡಿದೆ. ಆದರೂ ಪರಿಸ್ಥಿತಿ ಸುಧಾರಿಸುತ್ತಿಲ್ಲ. ಹೀಗಾಗಿ ಇಂತಹ ದರ ಮತ್ತು ಶುಲ್ಕ ಹೆಚ್ಚಳದಂತಹ ವಾಮ ಮಾರ್ಗಗಳ ಮೂಲಕ ಸರ್ಕಾರ ಉದ್ಯಮವನ್ನು ಶೋಷಣೆ ನಡೆಸುತ್ತಿದೆ ಎಂದು ಆರೋಪಿಸಿದ್ದಾರೆ.

ಮದ್ಯ ಉತ್ಪಾದನೆ, ಬಾಟ್ಲಿಂಗ್, ಮಾರಾಟ ಮಳಿಗೆಗಳು ಸೇರಿ ಎಲ್ಲ ಸ್ವರೂಪದ ಶುಲ್ಕಗಳನ್ನು ಶೇಕಡಾ ನೂರರಷ್ಟು ಹೆಚ್ಚಳಕ್ಕೆ ಮುಂದಾಗಿದೆ. ಇದಕ್ಕಾಗಿ ಅಬಕಾರಿ ಕಾನೂನುಗಳಿಗೆ ತಿದ್ದುಪಡಿ ಮಾಡಿ ಕರಡು ನಿಯಮಗಳ ಅಧಿಸೂಚನೆಯನ್ನು ಪ್ರಕಟಿಸಿದೆ. ಜುಲೈ 1 ರಿಂದ ಪರಿಷ್ಕೃತ ದರಗಳು ಜಾರಿಗೊಳ್ಳಲಿವೆ. ಆ ಮೂಲಕ ಉದ್ಯಮದ ಅಂತ್ಯಕ್ಕೆ ಮೊಳೆ ಹೊಡೆದಂತಾಗಲಿದೆ ಎಂದಿದ್ದಾರೆ.

ಇಲಾಖೆಗೆ 40 ಸಾವಿರ ಕೋಟಿಯ ಗುರಿ ನಿಗದಿ ಮಾಡಲಾಗಿದೆ. ಇದನ್ನು ತಲುಪಲು ಅಧಿಕಾರಿಗಳು ಇದ್ದಬದ್ದ ಎಲ್ಲಾ ಅವಕಾಶಗಳನ್ನು ಬಳಕೆ ಮಾಡುತ್ತಿದ್ದಾರೆ. ಆ ಮೂಲಕ ಉದ್ಯಮವನ್ನು ಸಂಕಷ್ಟಕ್ಕೆ ದೂಡಲಾಗುತ್ತಿದೆ ಎಂದು ಟೀಕಿಸಿದ್ದಾರೆ.

ಉದ್ಯಮದ ಹಿತದೃಷ್ಟಿಯಿಂದ ಸರ್ಕಾರ ಅವೈಜ್ಞಾನಿಕ ಕ್ರಮಗಳನ್ನು ಬಿಟ್ಟು ಉದ್ಯಮ, ಮಾರಾಟಗಾರರು ಮತ್ತು ಗ್ರಾಹಕರ ಹಿತದೃಷ್ಟಿಯಿಂದ ನಿರ್ಧಾರ ಕೈಗೊಳ್ಳಬೇಕು. ಸನ್ನದು ಶುಲ್ಕ ಪರಿಷ್ಕರಣೆಯನ್ನು ಮರು ಪರಿಶೀಲಿಸಬೇಕು ಎಂದು ಅಶೋಕ್ ಅವರು ಆಗ್ರಹಿಸಿದ್ದಾರೆ.

## ಕದನ ವಿರಾಮಕ್ಕೆ ಗಡುವಿಲ್ಲ



**ನವದೆಹಲಿ,ಮೇ18**–ಭಾರತ–ಪಾಕಿಸ್ತಾನ ನಡುವಿನ ಕದನ ವಿರಾಮ ಇಂದು ಕೊನೆಗೊಳ್ಳುತ್ತಿದೆ ಎಂಬ ವರದಿಗಳನ್ನು ತಳ್ಳಿ ಹಾಕಿರುವ ಭಾರತೀಯ ಸೇನೆ ಕದನ ವಿರಾಮ ಒಪ್ಪಂದಕ್ಕೆ 'ಅವಧಿ ಮುಕ್ತಾಯ ದಿನಾಂಕವಿಲ್ಲ' ಹಾಗೆಯೇ ಎರಡೂ ದೇಶಗಳ ಡಿಜಿಎಂಓ ಗಳ ಸಭೆಯೂ ಇಂದು ನಿಗದಿಯಾಗಿಲ್ಲ ಎಂದು ಸ್ಪಷ್ಟಪಡಿಸಿದೆ.

ಜಮ್ಮು–ಕಾಶ್ಮೀರದ ಪಹಲ್ಗಾಮ್ ಪ್ರಕರಣಕ್ಕೆ ಪ್ರತೀಕಾರವಾಗಿ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರಮ ಮಿಲಿಟರಿ ಕಾರ್ಯಾಚರಣೆಯ ನಂತರ ಭಾರತ–ಪಾಕ್ ನಡುವೆ ಕದನ ವಿರಾಮ ಘೋಷಣೆಯಾಗಿತ್ತು. ಕದನ ವಿರಾಮದ ಬಳಿಕ ಕಳೆದ ಮೇ 12 ರಂದು ಭಾರತ–ಪಾಕ್‌ನ ಮಿಲಿಟರಿ ಕಾರ್ಯಾಚರಣೆ ಮಹಾನಿರ್ದೇಶಕರು (ಡಿಜಿ–ಎಂಓ)ಗಳ ಸಭೆ ನಡೆದು ಗಡಿಯಲ್ಲಿ ಸೇನೆಯನ್ನು ಕಡಿತ ಮಾಡುವುದು ಹಾಗೂ ಭವಿಷ್ಯದಲ್ಲಿ ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವ ಬಗ್ಗೆ ಚರ್ಚೆಗಳು ನಡೆದಿದ್ದವು.

ಭಾರತ–ಪಾಕ್‌ನ ಡಿಜಿಎಂಓ ಸಭೆಗಳ ನಂತರ ಕದನ ವಿರಾಮ ಇಂದಿಗೆ ಅಂತ್ಯವಾಗುತ್ತದೆ. ಮತ್ತೆ ಡಿಜಿಎಂಓಗಳ ಸಭೆ ಇಂದು ನಡೆಯಲಿದೆ ಎಂಬ ವರದಿಗಳು ಪ್ರಕಟವಾಗಿದ್ದವು. ಈ ವರದಿಗಳನ್ನು ತಳ್ಳಿ ಹಾಕಿರುವ ಭಾರತೀಯ ಸೇನೆ ಕದನವಿರಾಮಕ್ಕೆ ನಿರ್ದಿಷ್ಟ ಅವಧಿ ನಿಗದಿ ಮಾಡಿಲ್ಲ. ಕದನ ವಿರಾಮದ ಅವಧಿ ಮುಕ್ತಾಯ ದಿನಾಂಕವೂ ಇಲ್ಲ ಎಂದು ಸ್ಪಷ್ಟಪಡಿಸಿದೆ.

ಇಂದು ಎರಡೂ ದೇಶಗಳ ಡಿಜಿಎಂಓ ಗಳ ಸಭೆ ನಡೆಯಲಿದೆ ಎಂಬ ವರದಿಯನ್ನು ಸೇನೆ ಅಲ್ಲಗಳೆದಿದ್ದು, ಇಂದು ಯಾವುದೇ ಡಿಜಿಎಂಓಗಳ ಮಾತುಕತೆ ನಿಗದಿಯಾಗಿಲ್ಲ ಎಂದು ಸ್ಪಷ್ಟಪಡಿಸಿದೆ.

ಕದನವಿರಾಮದ ಬಗ್ಗೆ ಮೇ 12 ರಂದು ನಡೆದ ಡಿಜಿಎಂಓಗಳ ಸಂವಹನ ಜಾರಿಯಲ್ಲಿದೆ. ಯುದ್ಧ ವಿರಾಮದ ಮುಂದುವರಿಕೆಗೆ ಸಂಬಂಧಿಸಿದಂತೆ ಯಾವುದೇ ಮುಕ್ತಾಯ ದಿನಾಂಕ ಇಲ್ಲ ಎಂದು ಭಾರತೀಯ ಸೇನೆ ಪುನರುಚ್ಚರಿಸಿದೆ.

ಭಾರತ–ಪಾಕ್ ನಡುವಿನ ಮಿಲಿಟರಿ ಸಂಘರ್ಷದ ನಂತರ ಭಾರತದ ಡಿಜಿಎಂಓ ಲೆಫ್ಟಿನೆಂಟ್ ಜನರಲ್ ರಾಜುಗಾಯ್ ಹಾಗೂ ಪಾಕಿಸ್ತಾನದ ಡಿಜಿಎಂಓ ಮೇಜರ್ ಜನರಲ್ ಕಾಸಿಫ್ ಅಬ್ದುಲ್ಲ ಹಾಟ್‌ಲೈನ್‌ನಲ್ಲಿ ಮಾತುಕತೆ ನಡೆಸಿ ಗಡಿಯಲ್ಲಿನ ಉದ್ವಿಗ್ನ ವಾತಾವರಣವನ್ನು ತಿಳಿಗೊಳಿಸುವ ನಿಟ್ಟಿನಲ್ಲಿ ಕೆಲವೊಂದು ನಿರ್ಧಾರಗಳಿಗೆ ಬಂದಿದ್ದರು.

ಅದರಂತೆ ಗಡಿಯಲ್ಲಿನ ಉದ್ವಿಗ್ನತೆ ಕಡಿಮೆ ಮಾಡಲು ಸೇನೆ ಕಡಿತ, ಸೇನೆಯಲ್ಲಿ ಯಾವುದೇ ಅಪ್ರಚೋದಿತ ಗುಂಡಿನ ದಾಳಿಯನ್ನು ನಿಲ್ಲಿಸುವ ಸಂಬಂಧವೂ ಮಾತುಕತೆಗಳು ನಡೆದು ಕದನ ವಿರಾಮದ ಬದ್ಧತೆಯನ್ನು ತೋರಿದ್ದರು.

## ಯಳಗೋಡು ಗ್ರಾಮ ಪಂಚಾಯಿತಿ ಕ್ಷಯಮುಕ್ತ

**ಚಿತ್ರದುರ್ಗ:** ಚಿತ್ರದುರ್ಗ ತಾಲ್ಲೂಕಿನ ಯಳಗೋಡು ಗ್ರಾಮ ಪಂಚಾಯಿತಿ ಕ್ಷಯ ಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಣೆ ಆಗಲು ಗ್ರಾಮ ಪಂಚಾಯಿತಿ ಕಾಳಜಿ, ಬದ್ಧತೆಯಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸಿ.ಓ.ಸುಧಾ ಹೇಳಿದರು.

ತಾಲ್ಲೂಕಿನ ಯಳಗೋಡು ಗ್ರಾಮ ಪಂಚಾಯಿತಿಯಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಕ್ಷಯಮುಕ್ತ ಭಾರತ ಅಭಿನಂದನಾ ಕಾರ್ಯಕ್ರಮದಲ್ಲಿ ಯಳಗೋಡು ಗ್ರಾಮ ಪಂಚಾಯಿತಿಗೆ ಕಂಚಿನ ಲೇಪನದ ಮಹಾತ್ಮ ಗಾಂಧೀಜಿಯವರ ಪ್ರತಿಮೆ ಮತ್ತು ಅಭಿನಂದನ ಪತ್ರ ವಿತರಿಸಿ ಅವರು ಮಾತನಾಡಿದರು.

ಯಳಗೋಡು ಗ್ರಾಮ ಪಂಚಾಯಿತಿ ಕ್ಷಯ ಮುಕ್ತ ಆಗಲು ಈ ಗ್ರಾಮದಲ್ಲಿ ಒಂದು ಸಾವಿರ ಜನಸಂಖ್ಯೆಗೆ ವರ್ಷಕ್ಕೆ 30 ಜನರು ಕ್ಷಯ ಸಂಶಯಾಸ್ಪದ ರೋಗಿಗಳು ಆಗಿರುತ್ತಾರೆ. ಅವರನ್ನು ಕಫ ಪರೀ–ಕ್ಷೆಗೆ ಒಳಪಡಿಸಿದಾಗ ಶೇ.1 ಕ್ಕಿಂತ ಕಡಿಮೆ ಕ್ಷಯ ರೋಗಿಗಳನ್ನು ಎಲ್ಲರ ಸಹಕಾರದಿಂದ ಕಂಡು ಹಿಡಿದಿದ್ದಾರೆ. ಹಾಗಾಗಿ ಯಳಗೋಡು ಗ್ರಾಮ ಪಂಚಾಯಿತಿಯು ಕ್ಷಯ ಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಿಸಿರುತ್ತಾರೆ ಎಂದು ಹೇಳಿದರು.

ದೇಶದಲ್ಲಿ ಶೇ.40 ಜನರಿಗೆ ಕ್ಷಯದ ಸೋಂಕು ತಗಲಿರುತ್ತದೆ. ಆದರೆ ಅವರೆಲ್ಲ ಕ್ಷಯ ರೋಗಿಗಳಲ್ಲ. ಕ್ಷಯ ರೋಗದ ಲಕ್ಷಣಗಳು ಕಂಡು ಬಂದರೆ ಆಗ ಮಾತ್ರ ಕ್ಷಯರೋಗಿ ಎಂದು ಗುರುತಿಸಿ, ಅಂತಹವರಿಗೆ ಆರು ತಿಂಗಳ ಉಚಿತ ಚಿಕಿತ್ಸೆಯನ್ನು ನೀಡಿದರೆ ರೋಗವು ಗುಣಮುಖವಾಗಲು



ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕ್ಷಯ ರೋಗವು ಮೈಕೋ ಬ್ಯಾಕ್ಟೀರಿಯಂ ಟ್ಯೂಬರ್ ಕ್ಯೂಲೈ ಎಂಬ ಬ್ಯಾಕ್ಟೀರಿಯಾದಿಂದ ಹರಡುತ್ತದೆ. ಇದು ಗಾಳಿಯಿಂದ ಒಬ್ಬರಿಂದ ಒಬ್ಬರಿಗೆ ಹರಡುವ ಸಾಂಕ್ರಾಮಿಕ ರೋಗವಾಗಿರುತ್ತದೆ ಹಾಗೂ ಕ್ಷಯ ರೋಗವು ರೋಗ ನಿರೋಧಕ ಶಕ್ತಿ ಕಡಿಮೆ ಇರುವಂತಹ ಜನರಿಗೆ ಬೇಗನೆ ಹರಡುತ್ತದೆ. ಈ ರೋಗದ ರೋಗ ಲಕ್ಷಣಗಳು ಅಂದರೆ ಜ್ವರ ಬರುವುದು, ಒಂದು ವಾರಕ್ಕಿಂತ ಹೆಚ್ಚು ಕೆಮ್ಮು, ತೂಕ ಕಡಿಮೆಯಾಗುವುದು, ಸಂಜೆ ಹೊತ್ತಿನಲ್ಲಿ ಬೆವರುವುದು, ಜ್ವರ ಕಾಣಿಸುವುದು, ಹಸಿವಾಗದೆ ಇರುವುದು, ಎದೆ ನೋವು, ಕೆಮ್ಮುವಾಗ ಕಫದಲ್ಲಿ ರಕ್ತ ಬೀಳುವುದು ಈ ರೀತಿಯ ಹಲವು ಲಕ್ಷಣಗಳು ಕಂಡು ಬಂದಲ್ಲಿ ಶೀಘ್ರವಾಗಿ ಪರೀಕ್ಷಿಸಿ, ರೋಗ ಪತ್ತೆ ಹಚ್ಚಿದ ತಕ್ಷಣ ಆರು ತಿಂಗಳು ಉಚಿತ ಕ್ಷಯ ಚಿಕಿತ್ಸೆಯನ್ನು ನೀಡುವುದರ ಮುಖಾಂತರ ಕ್ಷಯ ರೋಗವನ್ನು ನಾಶ ಮಾಡಬಹುದು ಎಂದು ತಿಳಿಸಿದರು.

ತಂಬಾಕು ಸೇವನೆ ಸಿಗರೇಟು ಮದ್ಯಪಾನ, ಗುಟುಕ ಸೇವಿಸುವ ಜನರಲ್ಲಿ ರೋಗನಿರೋಧಕ ಶಕ್ತಿ ಕಡಿಮೆ ಇದ್ದು, ಅಂತಹವರಿಗೆ ಈ ರೋಗವು ಬೇಗನೆ ಹರಡುತ್ತದೆ ಮತ್ತು ಮಧುಮೇಹ ಕಾಯಿಲೆ ಇರುವವರೆಗೂ ಹಾಗೂ ಅಪೌಷ್ಟಿಕ ಕೊರತೆಯಿಂದ ಕೂಡ ಬಳಲುತ್ತಿರುವವರು ಬೇಗನೆ ಈ ಕ್ಷಯ ರೋಗಕ್ಕೆ ತುತ್ತಾಗುವ ಸಾಧ್ಯತೆ ಹೆಚ್ಚಿರುತ್ತದೆ. ಆದ್ದರಿಂದ ಈ ಮೇಲಿನ ಲಕ್ಷಣಗಳು ಕಂಡು ಬಂದಲ್ಲಿ ತಕ್ಷಣವೇ ಹಿಂಜರಿಯದೆ ಕಫ ಪರೀ–ಕ್ಷೆ ಮಾಡಿಸಿಕೊಳ್ಳಿ ಎಂದು ತಿಳಿಸಿದರು.

ಗ್ರಾಮದ ಒಳಿತಿಗಾಗಿ ಗ್ರಾಮದ ಅಧ್ಯಕ್ಷರು, ಗ್ರಾಮ ಪಂಚಾಯಿತಿ ಸದಸ್ಯರು, ಯಾವುದೇ ಗ್ರಾಮ ಪಂಚಾಯಿತಿ ಸಭೆಯಲ್ಲಿ ಕ್ಷಯರೋಗದ ಬಗ್ಗೆ ಮುಕ್ತವಾಗಿ ಮಾತನಾಡಿ ಕ್ಷಯರೋಗದ ಬಗ್ಗೆ ಜಾಗೃತಿ ಮೂಡಿಸಿದರೆ ಮಾತ್ರ ಕ್ಷಯ ಮುಕ್ತ ಭಾರತ ಮಾಡಲು ಸಾಧ್ಯ ಎಂದು ತಿಳಿಸಿದರು. ಇದರಲ್ಲಿ ಸಮುದಾಯದ ಎಲ್ಲಾರ ಪಾತ್ರ ಹೆಚ್ಚಿರುತ್ತದೆ. ಹಾಗೂ ಅಂತರ್ ಇಲಾಖೆಯವರ ಸಹಕಾರ ಕೂಡ ಅಷ್ಟೇ ಪ್ರಾಮುಖ್ಯತೆ ಹೊಂದಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ಬಸವರಾಜ್ ಮಾತನಾಡಿ, ಸಮುದಾಯದ ಪ್ರತಿಯೊಬ್ಬರಿಗೂ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸಿ ಕ್ಷಯ ಮುಕ್ತ ಭಾರತ ಮಾಡೋಣ ಎಂದು ತಿಳಿಸಿದರು.

ಸಭೆಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅನಿತಾ ನಾಗರಾಜ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರಹ್ಲಾದ್, ಗ್ರಾಮ ಪಂಚಾಯಿತಿ ಸದಸ್ಯರಾದ ಬಸವರಾಜ್, ರೆಹಮತ್ ಉಲ್ಲಾ, ಮಹಾಂತೇಶ್, ದಂಡೆಪ್ಪ, ವೆಂಕಟೇಶ್, ತಿಪ್ಪೇಸ್ವಾಮಿ ಮತ್ತು ವೈದ್ಯಾಧಿಕಾರಿ ಅಶ್ವಿನಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಸಮುದಾಯ ಆರೋಗ್ಯ ಅಧಿಕಾರಿ ಶಾಲಿನಿ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ಜ್ಯೋತಿ, ವಿಜಯ್ ಕುಮಾರಿ, ಸುನಿತಾ, ಆರೋಗ್ಯ ನಿರೀಕ್ಷಣಾಧಿಕಾರಿ ಕುಚೇಲ. ಫಾರ್ಮಸಿ ಅಧಿಕಾರಿ ರಾಮರೆಡ್ಡಿ ಹಾಗೂ ಆಶಾ ಕಾರ್ಯಕರ್ತರು, ಗ್ರಾಮದ ಮುಖಂಡರು ಇದ್ದರು.

## ಭತ್ತಕ್ಕೆ ಕನಿಷ್ಠ ಬೆಂಬಲ ಬೆಲೆ ನಿಗದಿಗಾಗಿ ಆಗ್ರಹ



**ದಾವಣಗೆರೆ:** ಭತ್ತಕ್ಕೆ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸುವಂತೆ ಸುಗ್ರೀವಾಜ್ಞೆ ಹೊರಡಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ (ಹುಚ್ಚವ್ವನಹಳ್ಳಿ ಮಂಜುನಾಥ್ ಬಣ) ನಿನ್ನೆ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿತು.

ನಗರದ ಜಯದೇವ ವೃತ್ತದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆಯು ಎಪಿಎಂಸಿವರೆಗೆ ಸಾಗಿತು. ಅಲ್ಲಿ ಪ್ರತಿಭಟನಾಕಾರರು ಭತ್ತದ ಬೆಲೆ ಕುಸಿದಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಕೂಡಲೇ ಅಧಿಕಾರಿಗಳ ಸಭೆ ನಡೆಸಿ, ಭತ್ತವನ್ನು ಕ್ವಿಂಟಾಲ್‌ಗೆ 2320 ರೂ.ಗಿಂತ ಕಡಿಮೆ ದರಕ್ಕೆ ಖರೀದಿಸದಂತೆ ಸೂಚಿಸಬೇಕೆಂದು ಕಾರ್ಯದರ್ಶಿಯವರಿಗೆ ಒತ್ತಾಯಿಸಿದರು.

ನಂತರ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಲಾಯಿತು. ಈ ಸಂದರ್ಭದಲ್ಲಿ ಪ್ರತಿಭಟನಾನಿರತರನ್ನುದ್ದೇಶಿಸಿ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ್, ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್ ಭತ್ತಕ್ಕೆ 2320 ರೂ. ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಿದ್ದರೂ, ಇದಕ್ಕೆ ಯಾವುದೇ ಕಾನೂನಿನ ಮಾನ್ಯತೆ ಇಲ್ಲ. ರೈತರು ಪ್ರತಿ ಎಕರೆಗೆ 6,000 ರೂ. ನಷ್ಟ ಅನುಭವಿಸಬೇಕಾಗುತ್ತದೆ ಎಂದು ಹೇಳಿದರು.

ರಾಜ್ಯ ಸರ್ಕಾರವು ಮಧ್ಯಪ್ರವೇಶಿಸಿ, ಕೇರಳ ಮಾದರಿಯಲ್ಲಿ ಪ್ರತಿ ಕ್ವಿಂಟಾಲ್ ಭತ್ತಕ್ಕೆ ರೂ. 1200 ಪ್ರೋತ್ಸಾಹ ಧನ ನೀಡಬೇಕು. ಕೇಂದ್ರದ ಕನಿಷ್ಠ ಬೆಂಬಲ ಬೆಲೆ ಮತ್ತು ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಸೇರಿ ಪ್ರತಿ ಕ್ವಿಂಟಾಲ್‌ಗೆ ರೂ. 3500 ನೀಡಬೇಕು. ಸುಗ್ರೀವಾಜ್ಞೆಯ ಮೂಲಕ ಕನಿಷ್ಠ ಬೆಂಬಲ ಬೆಲೆಗೆ ಕಾನೂನು ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಲೋಕೇಶ್, ಈ ವಿಷಯವನ್ನು ಸರ್ಕಾರದ ಗಮನಕ್ಕೆ ತರುವುದಾಗಿ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಹುಚ್ಚವ್ವನಹಳ್ಳಿ ಮಂಜುನಾಥ್, ಶುಕ್ರವಾರ ಮಾರುಕಟ್ಟೆಯಲ್ಲಿ ಕ್ವಿಂಟಾಲ್‌ಗೆ ರೂ. 2320 ಕ್ಕಿಂತ ಹೆಚ್ಚಿನ ದರ ಸಿಕ್ಕರೆ ಸರಿ, ಇಲ್ಲದಿದ್ದರೆ ಶನಿವಾರದಿಂದ ಎಲ್ಲಾ ಗ್ರಾಮಗಳಲ್ಲಿ ರಸ್ತೆ ತಡೆ ಚಳುವಳಿ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯಲ್ಲಿ ಚಿನ್ನಸಮುದ್ರ ಭೀಮಾನಾಯ್ಕ, ಎಲೋದಹಳ್ಳಿ ರವಿಕುಮಾರ್, ಚಿಕ್ಕಮಲ್ಲನಹೊಳೆ ಚಿರಂಜೀವಿ, ರಾಜನಹಟ್ಟಿ ರಾಜು, ಹೂವಿನಮಡು ನಾಗರಾಜ್, ಚಿಕ್ಕತೊಗಲೇರಿ ನಟರಾಜ್, ಕೆಂಚಪ್ಪ, ನಿಂಗಪ್ಪ, ಯರನಾಗತಿಹಳ್ಳಿ ಪರಮೇಶ್ವರಪ್ಪ, ಕೈದಾಳ್ ವಸಂತಕುಮಾರ್, ಆಲೂರು ಪರಶುರಾಮ್, ಕಡರನಾಯಕನಹಳ್ಳಿ ಪ್ರಭು, ಅಸ್ತಪನಹಳ್ಳಿ ಗಂಡುಗಲಿ, ಕೋಲ್ಕುಂಟೆ ಬಸವರಾಜ್, ಕುಂದವಾಡ ದೊಡ್ಡಣ್ಣ, ಮಹೇಶ್, ಆಲೂರು ಪುಟ್ಟನಾಯ್ಕ್, ಕೊಡಗನೂರು ಭೀಮಣ್ಣ, ತಿಮ್ಮಣ್ಣ, ಹುಚ್ಚವ್ವನಹಳ್ಳಿ ಪ್ರಕಾಶ್ ಸೇರಿದಂತೆ ಅನೇಕ ರೈತ ಮುಖಂಡರು ಉಪಸ್ಥಿತರಿದ್ದರು.

## ಭದ್ರಾವತಿ – ಚಿಕ್ಕಜಾಜೂರು ನಡುವಿನ ರೈಲ್ವೆ ಹೊಸ ಮಾರ್ಗದ ಸಮೀಕ್ಷೆಗೆ ಮಂಜೂರಾತಿ

**ಹುಬ್ಬಳ್ಳಿ, ಮೇ 16** – ಕರ್ನಾಟಕದ ರೈಲು ಮೂಲಸೌಕರ್ಯವನ್ನು ಬಲಪಡಿಸುವ ಮಹತ್ವದ ಕ್ರಮದಲ್ಲಿ, ನೈಋತ್ಯ ರೈಲ್ವೆ ವಲಯದ ಅಡಿಯಲ್ಲಿ ಬರುವ ಎರಡು ಪ್ರಮುಖ ಹೊಸ ರೈಲು ಮಾರ್ಗಗಳ ಅಂತಿಮ ಸ್ಥಳ ಸಮೀಕ್ಷೆ ನಡೆಸಲು ರೈಲ್ವೆ ಮಂಡಳಿ ಅನುಮೋದನೆ ನೀಡಿದೆ.

ಆಲಮಟ್ಟಿ ಮತ್ತು ಯಾದಗಿರಿ ನಡುವೆ 162 ಕಿ.ಮೀ ಉದ್ದದ ಮಾರ್ಗವನ್ನು ನಿರ್ಮಿಸಲು ಸಮೀಕ್ಷೆ ನಡೆಸಲಾಗುವುದು. ಇದಕ್ಕಾಗಿ ರೂ. 4.05 ಕೋಟಿ ವೆಚ್ಚವನ್ನು ಮಂಜೂರು ಮಾಡಲಾಗಿದೆ. ಭದ್ರಾವತಿ ಮತ್ತು ಚಿಕ್ಕಜಾಜೂರು ನಡುವಿನ 73 ಕಿ.ಮೀ ಮಾರ್ಗವನ್ನು ಚನ್ನಗಿರಿ ಮೂಲಕ ಒಳಗೊಂಡಿರುತ್ತದೆ. ಇದರ ಅಂದಾಜು ವೆಚ್ಚ 1.825 ಕೋಟಿ ರೂ. ಒಟ್ಟಾರೆಯಾಗಿ, ಈ ಸಮೀಕ್ಷೆಗಳಿಗೆ ಅಂದಾಜು 5.875 ಕೋಟಿ ರೂ.ವೆಚ್ಚವಾಗಲಿದೆ.

ರಾಜ್ಯದಾದ್ಯಂತ ಸಂಪರ್ಕವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಪ್ರಮುಖ ರೈಲ್ವೆ ಯೋಜನೆಗಳ ಯೋಜನೆ ಮತ್ತು ಅಭಿವೃದ್ಧಿಯಲ್ಲಿ ಈ ಉಪಕ್ರಮವು ನಿರ್ಣಾಯಕ ಮೊದಲ ಹೆಜ್ಜೆಯಾಗಿದೆ.

ಪ್ರಸ್ತಾವಿತ ಆಲಮಟ್ಟಿ–ಯಾದಗಿರಿ ಮಾರ್ಗವು ಉತ್ತರ ಕರ್ನಾಟಕ ಮತ್ತು ಪ್ರಮುಖ ಆರ್ಥಿಕ ಕಾರಿಡಾರ್‌ಗಳ ನಡುವಿನ ಸಂಪರ್ಕವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವುದರಿಂದ ಇದು ಕಾರ್ಯತಂತ್ರದ ಮಹತ್ವವನ್ನು ಹೊಂದಿದೆ.

ಆಲಮಟ್ಟಿ ತನ್ನ ಅಣೆಕಟ್ಟು ಮತ್ತು ಜಲವಿದ್ಯುತ್ ಉತ್ಪಾದನೆಗೆ ಹೆಸರುವಾಸಿಯಾಗಿದ್ದು, ಈ ಪ್ರದೇಶದ ಕೃಷಿ ಮತ್ತು ಇಂಧನ ವಲಯದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಮತ್ತೊಂದೆಡೆ, ಯಾದಗಿರಿ ಹೈದರಾಬಾದ್–ಮುಂಬೈ ರೈಲು ಕಾರಿಡಾರ್‌ನಲ್ಲಿ ಒಂದು ಪ್ರಮುಖ ಜಂಕ್ಷನ್ ಆಗಿದೆ. ಈ ಎರಡೂ ಸ್ಥಳಗಳ ನಡುವಿನ ಸುಧಾರಿತ ರೈಲು ಸಂಪರ್ಕವು ಪ್ರಾದೇಶಿಕ ವ್ಯಾಪಾರ, ಸಾರಿಗೆ ಮತ್ತು ಸಂಪನ್ಮೂಲಗಳ ಲಭ್ಯತೆಯನ್ನು ಹೆಚ್ಚಿಸುತ್ತದೆ. ಅಂತೆಯೇ, ಭದ್ರಾವತಿ–ಚಿಕ್ಕಜಾಜೂರು ಮಾರ್ಗವು ಮಧ್ಯ ಕರ್ನಾಟಕದಲ್ಲಿ ರಾಜ್ಯದೊಳಗಿನ ಸಂಪರ್ಕವನ್ನು ಬಲಪಡಿಸುತ್ತದೆ.

ಉಕ್ಕು ಮತ್ತು ಕಾಗದ ಕೈಗಾರಿಕೆಗಳನ್ನು ಹೊಂದಿರುವ ಕೈಗಾರಿಕಾ ಪಟ್ಟಣವಾದ ಭದ್ರಾವತಿಯು ಕರ್ನಾಟಕದ ಹಲವಾರು ಭಾಗಗಳನ್ನು ಸಂಪರ್ಕಿಸುವ ಪ್ರಮುಖ ರೈಲ್ವೆ ಜಂಕ್ಷನ್ ಚಿಕ್ಕಜಾಜೂರಿಗೆ ನೇರ ಸಂಪರ್ಕವನ್ನು ಪಡೆಯುತ್ತದೆ. ಈ ಮಾರ್ಗವು ಸರಕು ಸಾಗಣೆ, ಕೈಗಾರಿಕಾ ಬೆಳವಣಿಗೆ ಮತ್ತು ಉತ್ತಮ ಪ್ರಯಾಣಿಕ ಸಂಪರ್ಕಕ್ಕೆ ಸಹಕಾರಿಯಾಗಲಿದೆ ಎಂದು ನಿರೀಕ್ಷಿಸಲಾಗಿದೆ.

## ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರ ನೇಮಕಾತಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕಗಳ ಸಮರ್ಪಕ ವಸೂಲಾತಿಗಾಗಿ ಡೇ–ನಲ್ಮ್ ಅಭಿಯಾನದಡಿ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ರಚಿಸಲಾಗಿರುವ ಅರ್ಹ ಮಹಿಳಾ ಸ್ವ–ಸಹಾಯ ಸಂಘಗಳನ್ನು ತೊಡಗಿಸಿಕೊಂಡು ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕವನ್ನು ವಸೂಲಾತಿ, ಸಂಗ್ರಹಣೆ ಮಾಡಲು ಮಹಿಳಾ ಸ್ವ–ಸಹಾಯ ಗುಂಪುಗಳ ಸದಸ್ಯರ ನೇಮಕಾತಿಗಾಗಿ ಆಸಕ್ತಿಯುಳ್ಳ ಸದಸ್ಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನೀರಿನ ಬಳಕೆಯ ಶುಲ್ಕದ ಹಿಂದಿನ ಬಾಕಿ ಮೊತ್ತ ಬಡ್ಡಿ ಸಹಿತವಾಗಿ ಮತ್ತು ಪ್ರಸ್ತುತ ವಾರ್ಷಿಕ ಬೇಡಿಕೆಯ ಸಹಿತ ವಸೂಲಿ ಮಾಡುವುದು ಹಾಗೂ ಬಹುದಿನಗಳಿಂದ ಬಾಕಿ ಇರುವ ಆಸ್ತಿ ತೆರಿಗೆಯನ್ನು ಸಮರ್ಪಕವಾಗಿ ವಸೂಲಿ ಮಾಡಲು ಸ್ಥಳೀಯ ಮಹಿಳಾ ಸ್ವಸಹಾಯ ಗುಂಪುಗಳ ಸೇವೆಯನ್ನು ಪಡೆಯಲು ಮತ್ತು ಮಹಿಳಾ ಸ್ವಸಹಾಯ ಗುಂಪುಗಳಿಗೆ ವಸೂಲಾದ ಮೊತ್ತದಲ್ಲಿ ಶೇಕಡ 5ರಷ್ಟನ್ನು ಪ್ರೋತ್ಸಾಹಧನದ ರೂಪದಲ್ಲಿ ನೀಡಲು ಸರ್ಕಾರದಿಂದ ಆದೇಶಿಸಲಾಗಿರುತ್ತದೆ. ಆಸಕ್ತ ಮಹಿಳಾ ಸ್ವ–ಸಹಾಯ ಗುಂಪುಗಳ ಸದಸ್ಯರುಗಳು ತಮ್ಮ ವೈಯಕ್ತಿಕ ವಿವರಗಳನ್ನು ಡೇ–ನಲ್ಮ್ ಹಿಂಬರಹದೊಂದಿಗೆ www.davanagerecity.mrc.gov.in ವೆಬ್ ಸೈಟ್ ನಲ್ಲಿ ನಿಗದಿತ ನಮೂನೆಯಲ್ಲಿ ಜೂನ್ 20 ಒಳಗಾಗಿ ಸಲ್ಲಿಸಬೇಕು ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ದಾವಣಗೆರೆ :** ದಾವಣಗೆರೆ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರಸಕ್ತ ಸಾಲಿಗೆ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜು ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜು ಹಾಗೂ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿ.ಯು.ಸಿ ಪಿ.ಸಿ.ಎಂ.ಬಿ(ವಿಜ್ಞಾನ ವಿಭಾಗ) ವಿಷಯಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಈ ವಸತಿ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿ, ಸಮವಸ್ತ್ರ, ಪಠ್ಯಪುಸ್ತಕ ಹಾಗೂ ಇನ್ನಿತರೆ ಸಾಮಗ್ರಿಗಳನ್ನು ನೀಡುವುದರ ಜೊತೆಗೆ ಉತ್ತಮವಾದ ವಿದ್ಯಾಭ್ಯಾಸ ನೀಡಲಾಗುವುದು. ಈ ಕಾಲೇಜುಗಳಲ್ಲಿ ಅಲ್ಪಸಂಖ್ಯಾತ ವರ್ಗದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ,ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75% ರಷ್ಟು ಮತ್ತು ಪರಿಶಿಷ್ಠ ಜಾತಿ, ಪರಿಶಿಷ್ಟ ಪಂಗಡ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಶೇ.25%ರಷ್ಟು ಪ್ರವೇಶ ಲಭ್ಯವಿದೆ. ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ದಾಖಲಾತಿಗಾಗಿ ಪೋಷಕರ ಆದಾಯ ಮಿತಿ ರೂ.2.50 ಲಕ್ಷಗಳಿಗೆ ಮೀರಬಾರದು. ಅಭ್ಯರ್ಥಿಗಳು ಮೇ.31 ರೊಳಗಾಗಿ ಸೇವಾ ಸಿಂಧು ಪೋರ್ಟಲ್ https://sevasindhu services.karnataka.gov.in ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ದಾವಣಗೆರೆ ದೂರವಾಣಿ ಸಂ:08192–250022, ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜು, ಕೊಂಡಜ್ಜಿ, ಹರಿಹರ ತಾ॥ ಮೊ:9008815296, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಶಾಲೆ, ಹೊಸ ಕುಂದುವಾಡ ಗ್ರಾಮ, ಎನ್. ಹೆಚ್–13 ರಸ್ತೆ, ದಾವಣಗೆರೆ. ಮೊ:9916828601, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜು ಕೆರೆಬಿಳಚಿ, ಚನ್ನಗಿರಿ ತಾ॥ ಮೊ:9483075634, ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜು ಬೀಡಿ ಲೇಔಟ್, ದಾವಣಗೆರೆ. ಮೊ:7022234663 ಸಂಪರ್ಕಿಸಲು ಇಲಾಖೆಯ ಅಧಿಕಾರಿ ಭಕ್ತ ಮಾಕರ್‌ಂಡೇಯ ತಿಳಿಸಿದ್ದಾರೆ.

## ವಿವಿಧ ಯೋಜನೆಗಳ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನ ತೋಟಗಾರಿಕೆ ಇಲಾಖೆ ವತಿಯಿಂದ ವಿವಿಧ ಯೋಜನೆಗಳ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ರೈತರು ಅರ್ಜಿ ಸಲ್ಲಿಸಲು ಜೂನ್ 6 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ಸಮೀಪದ ರೈತ ಸಂಪರ್ಕ ಕೇಂದ್ರದ ಸಹಾಯ ತೋಟಗಾರಿಕೆ ಅಧಿಕಾರಿಯವರನ್ನು ಸಂಪರ್ಕಿಸಲು ತೋಟಗಾರಿಕೆ ಉಪನಿರ್ದೇಶಕರಾದ ರಾಘವೇಂದ್ರ ಪ್ರಸಾದ್ ತಿಳಿಸಿದ್ದಾರೆ.

## ಜನ, ಜಾನುವಾರು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರ ಮಾಡಿ



**ಹಾಸನ :** ಯಗಚಿಜಲಾನಯನ ಪ್ರದೇಶದಲ್ಲಿ (ಮೂಡಿಗೆರೆ, ಬೇಲೂರು ಮತ್ತು ಚಿಕ್ಕಮಗಳೂರು ತಾಲ್ಲೂಕು) ವ್ಯಾಪಕವಾಗಿ ಮಳೆ ಸುರಿಯುತ್ತಿದ್ದು, ಮೇ.25 ರಂದು ಬೆಳಿಗ್ಗೆ 6 ಗಂಟೆಗೆ 500.00 ಕ್ಯೂಸೆಕ್ಸ್ ನೀರುಜಲಾಶಯಕ್ಕೆ ಹರಿದು ಬರುತ್ತಿದ್ದು, ಜಲಾಶಯದಗರಿಷ್ಟ ನೀರಿನ ಮಟ್ಟವು 964,60 ಮೀ. (3164.85 ಅಡಿ) ಗಳಾಗಿದ್ದು, ಸದರಿ ದಿನಾಂಕದಂದುಬೆಳಗ್ಗೆ 6 ಗಂಟೆಗೆ ನೀರಿನ ಮಟ್ಟವು 964.23 ಮೀ. (9163.639 ಅಡಿ) ಗಳಾಗಿರುತ್ತದೆ. ಪ್ರಸ್ತುತವಾಗಿಯಗಚಿಜಲಾನಯನ ಪ್ರದೇಶದಲ್ಲಿ ವ್ಯಾಪಕವಾಗಿ ಹೆಚ್ಚು ಮಳೆಯಾಗುತ್ತಿದ್ದು, ಇನ್ನೂ ಹೆಚ್ಚಿನ ಪ್ರಮಾಣದಲ್ಲಿಜಲಾಶಯಕ್ಕೆ ನೀರು ಹರಿದುಬರುವ ಸಾಧ್ಯತೆಇರುವುದರಿಂದಜಲಾಶಯದಿಂದಯಾವುದೇ ಸಮಯದಲ್ಲಾದರೂಯಗಚಿ ನದಿಗೆ ಹೆಚ್ಚಿನ ಪ್ರಮಾಣದ ನೀರನ್ನು ಹೊರಬಿಡುವ ಸಾಧ್ಯತೆಇರುತ್ತದೆ. ಈ ಹಿನ್ನೆಲೆಯಲ್ಲಿಯಗಚಿ ನದಿ ಪಾತ್ರ, ನದಿ ದಂಡೆ ಮತ್ತು ನದಿಯ ಆಸು ಪಾಸಿನಲ್ಲಿ ವಾಸಿಸುವ ಎಲ್ಲಾಗ್ರಾಮಸ್ಥರು/ಸ್ಥಳೀಯ ವಾಸಿಗಳು ಮುನ್ನೆಚ್ಚರಿಕೆಕ್ರಮವಾಗಿಜನ, ಜಾನುವಾರು ಹಾಗೂ ಆಸ್ತಿ ಪಾಸ್ತಿ ವಗ್ಯೆರೆಗಳನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರ ಮಾಡಿಕೊಳ್ಳುವ ಬಗ್ಗೆ ಮಾಹಿತಿ ಮತ್ತುಜಾಗೃತಿ ಮೂಡಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲು ಈ ಮೂಲಕ ಸಂಬಂಧಿಸಿದವರಲ್ಲಿ ಕೋರಲಾಗಿದೆ.

ಮುಂದುವರೆದು ಸಾರ್ವಜನಿಕರಿಗೆ ಮಾಹಿತಿ ಮತ್ತುಜಾಗೃತಿ ಮೂಡಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲು ಸಂಬಂಧಿಸಿದ ಸರ್ಕಾರದ ಸ್ಥಳೀಯ ಇಲಾಖಾ ಅಧಿಕಾರಿಗಳಿಗೆ ಈ ಮೂಲಕ ಕಾನೀನಿನಿ, ಬೇಲೂರಿನಯಗಚಿಯೋಜನಾ ವಿಭಾಗದಕಾರ್ಯಪಾಲಕಅಭಿಯಂತರರು ತಿಳಿಸಿದ್ದಾರೆ.

## ಪ್ರೋತ್ಸಾಹ ಧನಕ್ಕೆಅರ್ಜಿಆಹ್ವಾನ

**ಹಾಸನ;** ಎಸ್.ಎಸ್.ಎಲ್.ಸಿ., ಮತ್ತು ಮೆಟ್ರಿಕ್ ನಂತರದ ಕೋರ್ಸ್‌ಗಳಾದ ಪಿ.ಯು.ಸಿ, ಪದವಿ, ಸ್ನಾತಕೋತ್ತರ ಪದವಿ, ಇಂಜಿನಿಯರಿಂಗ್ ಮತ್ತು ವೈದ್ಯಕೀಯ ವಿಭಾಗಗಳಲ್ಲಿ 2024–2025ನೇ ಸಾಲಿನ ಶೈಕ್ಷಣಿಕ ವರ್ಷದ ಸಾಲಿನಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮದರ್ಜೆಯಲ್ಲಿತೇರ್ಗಡೆ ಹೊಂದಿದ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡಲಾಗುತ್ತಿದೆ. ಅರ್ಹ ವಿದ್ಯಾರ್ಥಿಗಳು ಆನ್‌ಲೈನ್ ವಿಳಾಸ www.sw.kar.nic.inಇಲ್ಲಿಅರ್ಜಿ ಸಲ್ಲಿಸಿ, ದಾಖಲಾತಿಗಳನ್ನು ಆಯಾಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಿಸಿ ಉಪ ನಿರ್ದೇಶಕರಕಚೇರಿ, ಸಮಾಜಕಲ್ಯಾಣ ಇಲಾಖೆ, ಹಾಸನ ಇಲ್ಲಿಗೆ ಸಲ್ಲಿಸತಕ್ಕದ್ದು.

ವಿಶೇಷ ಸೂಚನೆ:– ಏಪ್ರೀಲ್–2025 ರ ಎಸ್.ಎಸ್. ಎಲ್.ಸಿಪರೀಕ್ಷೆಯಲ್ಲಿಶೇಕಡ 60 ಕ್ಕೂಹೆಚ್ಚಿನ ಅಂಕಗಳನ್ನುಪಡೆದು, ಆಧಾರ್‌ಸೀಡ್‌ಆಗಿರುವವಿದ್ಯಾರ್ಥಿಗಳುಅರ್ಜಿಸಲ್ಲಿಸುವಂತಿಲ್ಲ. ಒಂದುವೇಳೆಆಧಾರ್‌ಸೀಡ್‌ಆಗದೆಇರುವವಿದ್ಯಾರ್ಥಿಗಳುದಿನಾಂಕ: 31.12.2025ರೊಳಗೆ ಆಧಾರ್ ಸೀಡ್ ಮಾಡಿಸಿ ಕೊಂಡುಅರ್ಜಿ ಸಲ್ಲಿಸಬೇಕು (ಬ್ಯಾಂಕ್‌ಗೆ ತೆರಳಿ ನಿಮ್ಮಆಧಾರ್ ನಂಬರ್ ಗೆ ಎನ್.ಪಿ.ಸಿ.ಐ. ಮ್ಯಾಪ್ ಮಾಡಿಸಿ ನಂತರಅರ್ಜಿ ಸಲ್ಲಿಸಬೇಕು) ಎಂದುಸಮಾಜಕಲ್ಯಾಣಇಲಾಖೆಯಉಪ ನಿರ್ದೇಶಕರು ತಿಳಿಸಿದ್ದಾರೆ.

# ಉಪಲೋಕಾಯುಕ್ತರ ಭೇಟಿ ಎಫೆಕ್ಟ್, 13 ವಿವಿಧ ಸ್ವಯಂಪ್ರೇರಿತ ದೂರು ದಾಖಲು, ಶಾಂತಿಸಾಗರ ಕೆರೆ ಒತ್ತುವರಿ ತೆರವು, ಸಂರಕ್ಷಣೆಗೆ ಒತ್ತು, 27 ಅಧಿಕಾರಿಗಳ ಮೇಲೆ ದೂರು



**ದಾವಣಗೆರೆ:** ಕರ್ನಾಟಕ ಉಪಲೋಕಾಯುಕ್ತರು ಹಾಗೂ ನ್ಯಾಯಮೂರ್ತಿಗಳಾದ ಬಿ.ವೀರಪ್ಪನವರು ಏಪ್ರಿಲ್ 22 ರಿಂದ 26 ರ ವರೆಗೆ ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡ ವೇಳೆ ಆಡಳಿತದಲ್ಲಿ ನ್ಯೂನ್ಯತೆ ಕಂಡು ಬಂದು ಪ್ರಕರಣಗಳನ್ನು ಪತ್ತೆಹಚ್ಚಿ 13 ವಿವಿಧ ಇಲಾಖೆ ಅಧಿಕಾರಿಗಳ ಮೇಲೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಅನುಪಾಲನಾ ವರದಿ ನೀಡಲು ಸೂಚನೆ ನೀಡಲಾಗಿದೆ.

ಉಪಲೋಕಾಯುಕ್ತರು ಮತ್ತು ಲೋಕಾಯುಕ್ತ ಅಪರ ನಿಬಂಧಕರು, ಉಪನಿಬಂಧಕರು ಸೇರಿದಂತೆ ಲೋಕಾಯುಕ್ತ ಹಿರಿಯ ಪೊಲೀಸ್ ಅಧಿಕಾರಿಗಳು ಪ್ರವಾಸದ ವೇಳೆ ಭಾಗಿಯಾಗಿದ್ದರು. ಈ ವೇಳೆ ವಿವಿಧ ಇಲಾಖೆಗಳಿಗೆ ಭೇಟಿ ನೀಡಲಾಗಿತ್ತು. ಮತ್ತು ಶಾಂತಿಸಾಗರ ಕೆರೆ ಸೇರಿದಂತೆ ಕಲ್ಲುಗಣಿಗಾರಿಕೆ ಮಾಡುತ್ತಿರುವ ಸ್ಥಳಗಳಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಈ ವೇಳೆ ಲೋಪದೋಷಗಳು ಕಂಡು ಬಂದ ಇಲಾಖೆ ಅಧಿಕಾರಿಗಳ ಮೇಲೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದ್ದು ಮುಂದುವರೆದಿದೆ.

ಶಾಂತಿಸಾಗರ ಕೆರೆ ಒತ್ತುವರಿ; ಶಾಂತಿಸಾಗರ ಕೆರೆ 5447.10 ಎಕರೆ ವಿಸ್ತೀರ್ಣ ಹೊಂದಿದೆ. ಆದರೆ ಚಿಕ್ಕೋಡಾ ಹಿನ್ನೀರಿನಲ್ಲಿ 146 ಎಕರೆ ಹಿನ್ನೀರಿನಲ್ಲಿ ಒತ್ತುವರಿಯಾಗಿದೆ ಎಂದು ಕಂಡು ಬಂದಿರುತ್ತದೆ. ಮತ್ತು ಕೆರೆಯಲ್ಲಿನ ಹೂಳು ತೆಗೆದು ಹೆಚ್ಚಿನ ನೀರು ಸಂಗ್ರಹಿಸಲು ಅವಕಾಶ ಇದೆ. ಇಲ್ಲಿ ಪ್ರವಾಸೋದ್ಯಮ ಅಭಿವೃದ್ದಿ, ಪರಿಸರ ಸಂರಕ್ಷಣೆ ಸೇರಿದಂತೆ ಸುತ್ತಮುತ್ತಲಿನ 41 ಗ್ರಾಮಗಳು ಬರಲಿದ್ದು ನೈರ್ಮಲ್ಯತೆ ಕಾಪಾಡಿಕೊಳ್ಳುವುದು ಮತ್ತು ಶೌಚಾಲಯದ ನೀರನ್ನು ಕೆರೆಗೆ ಬಿಡದಂತೆ ಕ್ರಮವಹಿಸಬೇಕು. ಈ ಬಗ್ಗೆ ಹೊನ್ನಾಳಿ ಎಸಿ, ಚನ್ನಗಿರಿ ತಹಶೀಲ್ದಾರ್, ಪಂಚಾಯತ್ ರಾಜ್ ಇಂಜಿನಿಯರಿಂಗ್, ಗ್ರಾಮೀಣ ಕುಡಿಯುವ ನೀರು, ಜಲಸಂಪನ್ಮೂಲ, ಪರಿಸರ, ಪ್ರವಾಸೋದ್ಯಮ ಇಲಾಖೆ ಸೇರಿದಂತೆ ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳು ಸೇರಿದಂತೆ 12 ನ್ಯೂನ್ಯತೆಗಳನ್ನು ಉಲ್ಲೇಖಿಸಿ 27 ಅಧಿಕಾರಿಗಳ ಮೇಲೆ ದೂರು ದಾಖಲಿಸಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ; ಬುಳ್ಳಾಪುರ, ಪಂಜೇನಹಳ್ಳಿ, ಹೆಬ್ಬಾಳ,ಆಲೂರು ಸರ್ವೆ ನಂಬಗಳಲ್ಲಿ ಕಲ್ಲುಗಣಿಗಾರಿಕೆ ನಡೆಯುತ್ತಿದ್ದು ಬಫರ್ ಝೋನ್, ಗಡಿನಾಶ, ಮಿನರಲ್ ಸಾಗಣಿ ನಿಯಮ ಉಲ್ಲಂಘನೆ ಸೇರಿದಂತೆ ವಿವಿಧ 36 ನ್ಯೂನ್ಯತೆಗಳನ್ನು ಉಲ್ಲೇಖಿಸಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು, ಬೆಸ್ಕಾಂ, ಸಾರಿಗೆ ಸೇರಿದಂತೆ ಕಂದಾಯ ಇಲಾಖೆ ಅಧಿಕಾರಿಗಳನ್ನು ಒಳಗೊಂಡ 18 ಅಧಿಕಾರಿಗಳ ಮೇಲೆ ದೂರು ದಾಖಲಿಸಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಭೇಟಿ ನೀಡಿದಾಗ ಸರಿಯಾಗಿ ಕಡತ ತೋರಿಸದ ಮತ್ತು ನಿರ್ವಹಣೆ ಮಾಡದ ಕಾರಣ 15 ವಿವಿಧ ನ್ಯೂನ್ಯತೆ ಪರಿಗಣಿಸಿ ಹಿರಿಯ ಭೂ ವಿಜ್ಞಾನಿ ಅಧಿಕಾರಿ ಮೇಲೆ ದೂರು ದಾಖಲಿಸಿಕೊಳ್ಳಲಾಗಿದೆ.

ಮಹಾನಗರ ಪಾಲಿಕೆ ಮೇಲೆ 2 ದೂರು; ಮಹಾನಗರ ಪಾಲಿಕೆ ಮೇಲೆ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಸಂಸ್ಕರಣೆ ಮತ್ತು ನಿರ್ವಹಣೆ ಲೋಪದೋಷ ಸೇರಿ 8 ನ್ಯೂನ್ಯತೆ, ಪಾಲಿಕೆಯಲ್ಲಿ ಹಾಜರಾತಿಯ ವ್ಯತ್ಯಾಸ,

ಖಾಸಗಿ ವ್ಯಕ್ತಿಯಿಂದ ಕಡತ ನಿರ್ವಹಣೆ ಸೇರಿ 15 ವಿವಿಧ ನ್ಯೂನ್ಯತೆ ಗಮನಿಸಿ ಮೊದಲ ದೂರು ಪಾಲಿಕೆಯ ಕಾರ್ಯಪಾಲಕ ಇಂಜಿನಿಯರ್ ಮತ್ತು ಇನ್ನೊಂದು ಉಪ ಆಯುಕ್ತರ ಮೇಲೆ ದೂರು ದಾಖಲಿಸಲಾಗಿದೆ.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ; ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಅಂಗಡಿಯವರು ಬಿಳಿಚೀಟಿ ಮೇಲೆ ಬಿಲ್ ಬರೆಯುವುದು ಮತ್ತು ರೈತರಿಂದ ಶೇ 3 ರಿಂದ 8 ರಷ್ಟು ಕಮೀಷನ್ ಪಡೆಯುವುದು, ಅಲ್ಲಿನ ಕಾರ್ಮಿಕರಿಗೆ ಸೌಲಭ್ಯಗಳನ್ನು ಕಲ್ಪಿಸದೇ ಇರುವುದು ಸೇರಿ 15 ನ್ಯೂನ್ಯತೆಗಳನ್ನು ಗಮನಿಸಿ ಎಪಿಎಂಸಿ ಕಾರ್ಯದರ್ಶಿಯ ಮೇಲೆ ಸ್ವಯಂ ಪ್ರೇರಿತ ದೂರು ದಾಖಲಿಸಲಾಗಿದೆ.

ಜಿಲ್ಲಾ ಆಸ್ಪತ್ರೆ ಮತ್ತು ಔಷಧ ಉಗ್ರಾಣ; ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿನಿತ್ಯ 1500 ಕ್ಕಿಂತಲೂ ಹೆಚ್ಚು ಹೊರರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದರೂ ಪ್ರಮುಖ ಪರೀಕ್ಷಾ ಸಾಧನಗಳಿಲ್ಲ, ಎಂಆರ್‌ಐ ಇಲ್ಲ, ಮಹಿಳೆಯರಿಗೆ ಪ್ರತ್ಯೇಕ ಸರತಿ ಸಾಲಿನ ವ್ಯವಸ್ಥೆ ಇಲ್ಲ, ಶವಗಾರದಲ್ಲಿ ಮರಣೋತ್ತರ ಪರೀಕ್ಷೆ ಮಾಡುವ ವೇಳೆ ತ್ಯಾಜ್ಯವನ್ನು ಚರಂಡಿಗೆ ನೇರವಾಗಿ ಬಿಡಲಾಗುತ್ತಿದೆ. ಶೌಚಾಲಯಗಳ ಸ್ವಚ್ಚತೆ ಇಲ್ಲ, ಆಹಾರದ ವಿತರಣೆಯಲ್ಲಿ ಗುಣಮಟ್ಟ ಕಾಪಾಡಿಕೊಳ್ಳುತ್ತಿಲ್ಲ ಎಂದು ವಿವಿಧ 20 ನ್ಯೂನ್ಯತೆಗಳನ್ನು ಗಮನಿಸಿ ಜಿಲ್ಲಾ ಸರ್ಜನ್ ಮೇಲೆ ದೂರು ದಾಖಲಿಸಲಾಗಿದೆ.

ಔಷಧ ಉಗ್ರಾಣದಲ್ಲಿ ಔಷಧ ನಾಶಪಡಿಸುವಾಗ ನಿಯಮಗಳನ್ನು ಪಾಲನೆ ಮಾಡುತ್ತಿಲ್ಲ, ಅವಧಿ ಮೀರಿದ ಔಷಧಿಗಳಿವೆ. ಸಿಬ್ಬಂದಿಗಳು ಗುರುತಿನ ಚೀಟಿ ಧರಿಸಿಲ್ಲ ಎಂಬಿತ್ಯಾದಿ 4 ನ್ಯೂನ್ಯತೆಗಳನ್ನು ಪರಿಗಣಿಸಿ ಹಿರಿಯ ಫಾರ್ಮಸಿ ಅಧಿಕಾರಿ ಮೇಲೆ ದೂರು ದಾಖಲಿಸಲಾಗಿದೆ.

ಬಾಬುಜಗಜೀವರ್ ರಾಂ ಭವನ; ಕೋಟ್ಯಾಂತರ ರೂ.ಗಳ ತೆರಿಗೆ ಹಣದಿಂದ ಬಾಬು ಜಗಜೀವನ್ ರಾಂ ಭವನ ನಿರ್ಮಾಣ ಮಾಡಿದ್ದರೂ ಇದರ ಉಪಯೋಗ ಮಾಡುವಲ್ಲಿ ಸಮಾಜ ಕಲ್ಯಾಣ ಇಲಾಖ ನಿರ್ಲಕ್ಷ್ಯತೆ ವಹಿಸಿದೆ. ಇದನ್ನು ಪರಿಗಣಿಸಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರ ಮೇಲೆ ದೂರು ದಾಖಲಿಸಲಾಗಿದೆ.

ಸಾರಿಗೆ ಕಚೇರಿ; ಸಾರಿಗೆ ಇಲಾಖೆಗೆ ಭೇಟಿ ನೀಡಿದ ವೇಳೆ ಇಲ್ಲದ ವಾಹನಗಳು, ಮಿನರಲ್ ಸಾಗಣೆ ಮಾಡುವಾಗ ತಪಾಸಣೆ ಮಾಡಿದ ಬಗ್ಗೆ, ಶಾಲಾ ವಾಹನಗಳು ಸರ್ವೋಚ್ಚ ನ್ಯಾಯಾಲಯದ ಮಾರ್ಗಸೂಚಿ ಅಳವಡಿಕೆ, ಷರತ್ತುಗಳ ಪೂರೈಕೆ ಮಾಡಿದ ಮಾಹಿತಿ, ಖನಿಜ ಸಾಗಣೆ ವಾಹನಗಳ

ಪರ್ಮಿಟ್ ನೀಡಿಕೆ, ಖನಿಜ ಸಾಗಣೆ ವಾಹನಗಳಿಗೆ ಎಂಡಿಪಿ ಮತ್ತು ಜಿಪಿಎಸ್ ಅಳವಡಿಕೆ, ಖಾಸಗಿ ವಾಹನಗಳ ಮೇಲೆ ಕಾನೂನಿನಲ್ಲಿ ಅವಕಾಶ ಇಲ್ಲದೇ ಇದ್ದರೂ ಅಧ್ಯಕ್ಷರು, ಕಾರ್ಯದರ್ಶಿ ಎಂದು ನಂಬರ್ ಪ್ಲೇಟ್ ಮೇಲೆ ಹೆಸರು ಅಳವಡಿಸಿದ ವಾಹನಗಳ ಮೇಲೆ ತೆಗೆದುಕೊಂಡ ಕ್ರಮದ ಮಾಹಿತಿ ಸೇರಿದಂತೆ ಸರಿಯಾದ ಮಾಹಿತಿ ನೀಡದ ಕಾರಣ 12 ನ್ಯೂನ್ಯತೆಗಳನ್ನು ಗುರುತಿಸಿ ಸಾರಿಗೆ ಅಧಿಕಾರಿಯವರ ಮೇಲೆ ದೂರು ದಾಖಲಿಸಲಾಗಿದೆ.

ನೊಂದಣಿ ಇಲಾಖೆ; ದಾವಣಗೆರೆ ಉಪನೊಂದಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿದಾಗ ಕಚೇರಿಯಲ್ಲಿ ನಗದು ನಿರ್ವಹಣೆ ಸರಿಯಾಗಿ ಮಾಡಿರುವುದಿಲ್ಲ. ಸಿಬ್ಬಂದಿಗಳ ಹಾಜರಾತಿ ವಹಿಯಲ್ಲಿ ವೈಟ್ನರ್ ನಿಂದ ತಿದ್ದಲಾಗಿದೆ. ಹೊರಗುತ್ತಿಗೆ ಸಿಬ್ಬಂದಿ ವೇತನಕ್ಕಿಂತ ಹೆಚ್ಚು ಯುಪಿಐನಲ್ಲಿ ವಹಿವಾಟು ಮಾಡಿರುವುದು ಸೇರಿದಂತೆ 8 ಅಂಶಗಳನ್ನು ಉಲ್ಲೇಖಿಸಿ ಉಪನೊಂದಣಾಧಿಕಾರಿಗಳ ಮೇಲೆ ದೂರು ದಾಖಲಿಸಲಾಗಿದೆ.

ತಾಲ್ಲೂಕು ಕಚೇರಿ; ದಾವಣಗೆರೆ ತಾಲ್ಲೂಕು ಕಚೇರಿಗೆ ಭೇಟಿ ನೀಡಿದ್ದ ವೇಳೆ ಸಿಬ್ಬಂದಿಯವರು ಗೈರು ಹಾಜರಾಗಿದ್ದರೂ ಹಾಜರಾತಿವಹಿಯಲ್ಲಿ ಸಹಿಯನ್ನು ಮಾಡಿರುವುದಿಲ್ಲ ಮತ್ತು ರಜೆಯನ್ನು ದಾಖಲು ಮಾಡದೇ ಖಾಲಿ ಬಿಡಲಾಗಿತ್ತು. ವಿವಿಧ 4 ಅಂಶಗಳನ್ನು ಪರಿಗಣಿಸಿ ತಹಶೀಲ್ದಾರರ ಮೇಲೆ ಸ್ವಯಂಪ್ರೇರಿತ ದೂರು ದಾಖಲಿಸಲಾಗಿದೆ.

# ಆರೋಗ್ಯ ಕೇಂದ್ರಗಳಲ್ಲಿ ಹಾವು ಕಡಿತಕ್ಕೆ ಔಷಧಿ ಕಾಯ್ದಿರಿಸಿ : ಗುರುದತ್ತ ಹೆಗಡೆ

**ಶಿವಮೊಗ್ಗ :** ಹಾವು ಕಡಿತಕ್ಕೊಳಗಾದ ವ್ಯಕ್ತಿಗೆ ಸಕಾಲಕ್ಕೆ ಚಿಕಿತ್ಸೆ ದೊರೆಯದೇ ಸಾವು ಸಂಭವಿಸಬಹುದಾದ ಕಾರಣಗಳಿಂದಾಗಿ ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹಾವು ಮತ್ತು ನಾಯಿ ಕಡಿತಕ್ಕೆ ಅಗತ್ಯವಿರುವ ಔಷಧಗಳನ್ನು ಸರ್ಕಾರದ ನಿಯಮಾನುಸಾರ ದಾಸ್ತಾನು ಇಟ್ಟುಕೊಳ್ಳುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಆರೋಗ್ಯ ಇಲಾಖೆಯಿಂದ ಜಿಲ್ಲೆಯಲ್ಲಿನ ಅನುಷ್ಠಾನಗೊಳ್ಳುತ್ತಿರುವ ವಿವಿಧ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಶಿಕಾರಿಪುರ ತಾಲೂಕು ಹೋತನಕಟ್ಟೆ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಗೊಳಪಡುವ ಮುಡುಬಸಿದ್ದಾಪುರದ 55ವರ್ಷದ ಮಹಿಳೆ ಲೋಲಾಕ್ಷಮ್ಮ ಇವರು ಹಾವು ಕಡಿತಕ್ಕೆ ಒಳಗಾದ ಸಂದರ್ಭದಲ್ಲಿ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ಶಿಫಾರಸ್ಸು ಮಾಡದೇ ನಾಟಿ ಔಷಧಿ ನೀಡಿ, ಮಹಿಳೆಯ ಸಾವಿಗೆ ಕಾರಣರಾದ ಗೌತಮಪುರ ಸಮೀಪದ ಕಣ್ಣೂರಿನ ನಾಟಿ ವೈದ್ಯ ವಾಸಪ್ಪ ಅವರ ಮೇಲೆ ಮೊಕದ್ದಮೆ ದಾಖಲಿಸುವಂತೆ ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿದರು.

ಅಲ್ಲದೇ ಜಿಲ್ಲೆಯ ಶಿಕಾರಿಪುರ ತಾಲೂಕಿನಲ್ಲಿ ಅತಿಹೆಚ್ಚು ಹಾವು ಕಡಿತ ಮತ್ತು ಸಾವಿನ ಪ್ರಕರಣಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ ಅಲ್ಲಿನ ವೈದ್ಯಾಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತೆಯರು ಜನರಲ್ಲಿ ಜಾಗೃತಿ ಮೂಡಿಸಿ, ಸಕಾಲಿಕವಾಗಿ ಚಿಕಿತ್ಸೆ ಕೊಡಿಸಿ, ಅಮೂಲ್ಯ ಜೀವ ರಕ್ಷಣೆಗೆ ಮುಂದಾಗುವಂತೆ ಅವರು ಸಲಹೆ ನೀಡಿದರು.

ಗ್ರಾಮ ಪಂಚಾಯಿತಿ ಹಂತದಲ್ಲಿ ಕಾರ್ಯನಿರ್ವಹಿಸುವ ಆಶಾ ಕಾರ್ಯಕರ್ತೆಯರು ಕೇವಲ ಗರ್ಭಿಣಿ, ಬಾಣಂತಿಯರ ಬಗ್ಗೆ ಮಾತ್ರ ಗಮನ ಕೇಂದ್ರೀಕರಿಸದೇ ಗ್ರಾಮೀಣ ಜನರ ಆರೋಗ್ಯ ಮತ್ತು ಸಾಂದರ್ಭಿಕ ಅವಘಡಗಳ ಸಂದರ್ಭದಲ್ಲಿಯೂ ಅಗತ್ಯ ಸಲಹೆ–ಸೂಚನೆ ನೀಡಿ, ಚಿಕಿತ್ಸೆ ಕೊಡಿಸಲು ಗಮನಹರಿಸುವಂತೆ ಸೂಚಿಸಿದ ಅವರು, ಹಾವು ಮತ್ತು ನಾಯಿ ಕಡಿತದ ಸಂದರ್ಭದಲ್ಲಿ ಜನರಲ್ಲಿ ಆತ್ಮಸ್ಥೈರ್ಯ ತುಂಬಿ, ವಿಳಂಬಕ್ಕೆ ಅವಕಾಶವಿಲ್ಲದಂತೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ, ಚಿಕಿತ್ಸೆ ಕೊಡಿಸಲು ಶ್ರಮಿಸುವಂತೆ ಸೂಚಿಸಿದ ಅವರು, ಗ್ರಾಮೀಣ ಜನರೂ ಕೂಡ ಆರೋಗ್ಯ ಸಂಬಂಧಿಸಿದ ತಮ್ಮ ತಕ್ಷಣದ ಅಗತ್ಯಗಳಿಗೆ ಆಶಾ ಕಾರ್ಯಕರ್ತರ ಸಲಹೆ–ಸಹಕಾರವನ್ನು ಪಡೆದುಕೊಳ್ಳುವಂತೆ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎನ್.ಹೇಮರ್ನ್ತವರು ಮಾತನಾಡಿ, ಈ ಸಂಬಂಧ ಜನಸಾಮಾನ್ಯರಿಗೆ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಆಯೋಜಿಸಿ. ಎಲ್ಲಾ ವೈದ್ಯರೂ ಕೂಡ ಹಾವು ಮತ್ತು ನಾಯಿ ಕಡಿತಕ್ಕೆ ಚಿಕಿತ್ಸೆ ನೀಡಬಹುದಾಗಿದ್ದು, ಸರ್ಕಾರಿ ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸುವ ಎಲ್ಲಾ ವೈದ್ಯರಿಗೆ ಸೂಕ್ತ ತರಬೇತಿ ನೀಡುವಂತೆಯೂ ಸೂಚಿಸಿದ ಅವರು, ಜಿಂಗಲ್ಸ್‌ಮೂಲಕ ಜನರಲ್ಲಿ ಅವರು ಮೂಡಿಸಲು ಕ್ರಮ ವಹಿಸುವಂತೆ ಅವರು ಸಲಹೆ ನೀಡಿದರು.

ಹಾವು ಕಡಿತದ ಅಮೂಲ್ಯ ಹಾಗೂ ತುರ್ತು ಸಂದರ್ಭದಲ್ಲಿ ಚಿಕಿತ್ಸೆಗಾಗಿ ಆಸ್ಪತ್ರೆಗೆ ಧಾವಿಸುವ ರೋಗಿಗೆ ವಿಳಂಬಕ್ಕೆ ಅವಕಾಶವಿಲ್ಲದಂತೆ ಹಾಗೂ ವೈದ್ಯರು ಯಾವುದೇ ನಿರ್ಲಕ್ಷ್ಯ ತೋರದಂತೆ ತ್ವರಿತವಾಗಿ ಚಿಕಿತ್ಸೆ ನೀಡಬೇಕು. ತಾಲೂಕು ವೈದ್ಯಾಧಿಕಾರಿಗಳು ಆಸ್ಪತ್ರೆಗಳಲ್ಲಿ ಸದಾ ಅಗತ್ಯ ಔಷಧಗಳನ್ನು ದಾಸ್ತಾನು ಮಾಡಿಟ್ಟುಕೊಳ್ಳಬೇಕು. ಈ ಸಂಬಂಧ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಪ್ರಚಾರ ಫಲಕಗಳನ್ನು ಅಳವಡಿಸುವಂತೆ ಸೂಚಿಸಿದ ಅವರು, ಮೃತ ಕುಟುಂಬದ ಸದಸ್ಯರಿಗೆ ಸರ್ಕಾರದಿಂದ ಪರಿಹಾರ ಧನ ದೊರೆಯುವಂತಿದ್ದಲ್ಲಿ ಅಗತ್ಯ ಸಲಹೆ–ಸಹಕಾರ ನೀಡುವಂತೆಯೂ ವೈದ್ಯರಿಗೆ ಸೂಚಿಸಿದರು.

108 ವಾಹನಗಳ ಸಿಬ್ಬಂದಿಗಳೂ ಸಹ ಅನಗತ್ಯವಾಗಿ ವಿಳಂಬ ಮಾಡದೇ, ರೋಗಿಗೆ ಅಗತ್ಯವಾದ ಚಿಕಿತ್ಸೆಯ ಬಗ್ಗೆ ಯಾವ ಆಸ್ಪತ್ರೆಗೆ ಕೊಂಡೊಯ್ಯಬೇಕೆಂಬ ಬಗ್ಗೆ ತಕ್ಷಣದಲ್ಲಿ ನಿರ್ಣಯ ಕೈಗೊಂಡು, ತ್ವರಿತವಾಗಿ ತಮ್ಮ ಸಮೀಪದ ಆಸ್ಪತ್ರೆಗೆ ರೋಗಿಗಳನ್ನು ಕೊಂಡೊಯ್ದು ಚಿಕಿತ್ಸೆ ಕೊಡಿಸುವಲ್ಲಿ ಸಹಕರಿಸಬೇಕು ಎಂದರು.

ನಾಯಿಗಳ ಹಾವಳಿ : ಜಿಲ್ಲೆಯ ಸಾಗರ ತಾಲೂಕಿನಲ್ಲಿ ಅತಿ ಹೆಚ್ಚು ನಾಯಿಗಳ ಕಡಿತದ ಪ್ರಕರಣಗಳು ದಾಖಲಾಗಿವೆ. ಅವುಗಳ ನಿಯಂತ್ರಣಕ್ಕೆ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಸೂಕ್ತ ಕೈಗೊಳ್ಳುವಂತೆ ಸೂಚಿಸಿದ ಅವರು, ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲೂಕು ವೈದ್ಯಾಧಿಕಾರಿಗಳ ನಡುವೆ ಸಮನ್ವಯತೆ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಹೇಳಿದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆನಿಷೇಧಾಜ್ಞೆ ಜಾರಿ

**ಚಿಕ್ಕಮಗಳೂರು:** ಇಂದಿನಿಂದ ಮೇ 31 ರವರೆಗೆ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆ –2 ನಡೆಯುತ್ತಿದ್ದು, ಪರೀಕ್ಷಾ ಪ್ರಕ್ರಿಯೆಯನ್ನು ಶಾಂತಿ ಮತ್ತು ಶಿಸ್ತುಪಾಲನೆಯೊಂದಿಗೆ ನಡೆಸುವ ದೃಷ್ಟಿಯಿಂದ ಪರೀಕ್ಷೆ ನಡೆಯುವ ದಿನಗಳಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಆದೇಶ ಹೊರಡಿಸಿದ್ದಾರೆ.

ಪರೀಕ್ಷೆ ನಡೆಯುತ್ತಿರುವ ಕೇಂದ್ರಗಳು ಇಂತಿವೆ: ಬೀರೂರಿನ ಕೆ.ಎಲ್.ಕೆ. ಸರ್ಕಾರಿ ಪದವಿ ಪೂರ್ವ ಕಾಲೇಜು, ಕಡೂರಿನ ಸರ್ಕಾರಿ ಜೂನಿಯರ್ ಕಾಲೇಜು, ವೇದಾವತಿ ಬಾಲಕಿಯರ ಪ್ರೌಢಶಾಲೆ, ಕೊಪ್ಪದ ಕರ್ನಾಟಕ ಪಬ್ಲಿಕ್ ಸ್ಕೂಲ್, ಮೂಡಿಗೆರೆಯ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ನರಸಿಂಹರಾಜಪುರದ ಕರ್ನಾಟಕ ಪಬ್ಲಿಕ್ ಸ್ಕೂಲ್, ಶೃಂಗೇರಿಯ ಸರ್ಕಾರಿ ಜೂನಿಯರ್ ಕಾಲೇಜು, ತರೀಕೆರೆಯ ಬಾಲಕರ ಸರ್ಕಾರಿ ಜೂನಿಯರ್ ಕಾಲೇಜು, ಅಜ್ಜಂಪುರದ ಶೆಟ್ರು ಸಿದ್ದಪ್ಪ ಸರ್ಕಾರಿ ಪರದವಿ ಪೂರ್ವ ಕಾಲೇಜು, ನಗರದ ಬೇಲೂರು ರಸ್ತೆಯ ಸರ್ಕಾರಿ ಪದವಿ ಪೂರ್ವ ಕಾಲೇಜು, ಸೇಂಟ್ ಜೋಸೆಫರ ಕಾನ್ವೆಂಟ್‌ನ ಬಾಲಕಿಯರ ಪ್ರೌಢಶಾಲೆ ಹಾಗೂ ಬಸವನಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜು.

## ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

ಚಿಕ್ಕಮಗಳೂರು, ಮೇ 26: 2025–26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯು ಚಿಕ್ಕಮಗಳೂರು ತಾಲ್ಲೂಕು ವ್ಯಾಪ್ತಿಯಲ್ಲಿ ನಡೆಯುತ್ತಿರುವ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ 5 ರಿಂದ 10ನೇ ತರಗತಿ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪಿಯುಸಿ, ಪದವಿ ಹಾಗೂ ವಿವಿಧ ವೃತ್ತಿಪರ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನ. ವಿದ್ಯಾರ್ಥಿಗಳು www.swd.karnataka.nic.in <http://www.swd.karnataka.nic.in/> ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ನಗರದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್–)ರವರ ಕಚೇರಿಯನ್ನು (08262–295123, 9480843100) ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

## ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಆರಂಭ

**ಹಾಸನ :** ಸಮಾಜಕಲ್ಯಾಣಇಲಾಖೆಯ ಮೆಟ್ರಿಕ್ ಪೂರ್ವ& ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ 2025–26 ನೇ ಸಾಲಿಗೆ ಪ್ರವೇಶಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಇಲಾಖಾ ವೆಬ್ ಸೈಟ್ https://swd.karnataka.gov.in ನಲ್ಲಿಅರ್ಜಿ ಸಲ್ಲಿಸಬಹುದಾಗಿರುತ್ತದೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಆಯಾತಾಲ್ಲೂಕು ಸಹಾಯಕ ನಿರ್ದೇಶಕರ ಕಚೇರಿ ಅಥವಾಜಿಲ್ಲಾ ಉಪ ನಿರ್ದೇಶಕರಕಚೇರಿ, ಸಮಾಜಕಲ್ಯಾಣ ಇಲಾಖೆ, ಹಾಸನ ಇಲ್ಲಿ ಮಾಹಿತಿ ಪಡೆಯಬಹುದಾಗಿರುತ್ತದೆಎಂದುಸಮಾಜಕಲ್ಯಾಣಇಲಾಖೆಯಉಪ ನಿರ್ದೇಶಕರು ತಿಳಿಸಿದ್ದಾರೆ.


## ಡೆಸ್ಕ್ ಮತ್ತು ಬೆಂಚ್‌ಕೊಡುಗೆ

**ಹಾಸನ :** ಹಾಸನದಖುರಂ 4 ಡೆಸ್ಕ್ ಮತ್ತು ಬೆಂಚ್ ಗಳನ್ನು ಜಿಲ್ಲಾಡಳಿತಕ್ಕೆ ಕೊಡುಗೆ ನೀಡಿದರು. ಜಿಲ್ಲಾಧಿಕಾರಿ ಸತ್ಯಭಾಮಅವರು ಸ್ವೀಕರಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಮಂಜುಳಾ, ದಾನಿಗಳಾದ ಖುರಂ ಹಾಜರಿದ್ದರು.

## ಅಂಗನವಾಡಿಗಳಿಗೆ ರಜೆ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಸತತವಾಗಿ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಚಿಕ್ಕಮಗಳೂರು, ಮೂಡಿಗೆರೆ, ಕಳಸ, ಶೃಂಗೇರಿ, ಕೊಪ್ಪ ಮತ್ತು ಎನ್.ಆರ್.ಪುರ ತಾಲ್ಲೂಕುಗಳ ಅಂಗನವಾಡಿ ಕೇಂದ್ರಗಳಿಗೆ ಇಂದಿನಿಂದ ಮೇ 28ರವರೆಗೆ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ದೇವರ ಪೂಜೆಗೆ ಬಡತನ ಇರಬಾರದು'



**ಚಿಕ್ಕಮಗಳೂರು:** ದೇವರು ನಮ್ಮ ನಂಬಿಕೆ. ಪೂಜೆ ನಮ್ಮಆಚರಣೆ. ಆಚರಣೆಗಳ ಮೂಲಕ ನಂಬಿಕೆಗಳನ್ನು ಬಲಗೊಳಿಸಿಕೊಳ್ಳಬೇಕಾಗಿರುವುದರಿಂದ ನಮ್ಮಲ್ಲಿದೇವರ ಪೂಜೆಗೆ ಬಡತನವಿಲ್ಲ ಎಂದು ನಿವೃತ್ತ ಶಿಕ್ಷಕ ಕೆಂಪನಹಳ್ಳಿ ಮುಳ್ಳೇಗೌಡರು ಹೇಳಿದರು.

ಅವರು ನಗರದ ಕೆಂಪನಹಳ್ಳಿಯ ಗ್ರಾಮದೇವರಾದ ಶ್ರೀ ಬೀರಲಿಂಗೇಶ್ವರ ದೇವಸ್ಥಾನದಲ್ಲಿಕಲ್ಕಟ್ಟೆ ಪುಸ್ತಕದ ಮನೆ, ಅಖಿಲ ಭಾರತೀಯ ಸಾಹಿತ್ಯ ಪರಿಷತ್, ಶ್ರೀ ಗುರುಕೃಪ ಸಂಗೀತ ಸೇವಾ ಟ್ರಸ್ಟ್, ಸೂರಂಕಣ, ದೀವಿಗೆ ಬಳಗದಆಶ್ರಯದಲ್ಲಿ ಇತ್ತೀಚೆಗೆಜರುಗಿದ ಭಕ್ತಿಗೀತೆ ಸಮರ್ಪಣಾ ಸಮಾರಂಭದಲ್ಲಿ ಮಾತನಾಡಿದರು.

ನಮ್ಮ ಬೀರಲಿಂಗದೇವರು ಶಕ್ತಿಯನ್ನು ಮೆಚ್ಚುತ್ತಾನೆ. ಹಾಗಾಗಿ ಇಲ್ಲಿ ವೀರಗಾರರ ಸೇವೆ ಇರುತ್ತದೆ. ಭಕ್ತಿಯ ಪ್ರಧಾನ ಭಾವವೇ ನಾದ. ನಾದವೂ ವಿಶ್ವದ ಮಹಾಶಕ್ತಿ. ಇದು ಮನಸ್ಸನ್ನು ಪ್ರಶಾಂತಗೊಳಿಸುತ್ತದೆ. ಈ ದಿಸೆಯಲ್ಲಿಕಲ್ಕಟ್ಟೆ ಗಾನದೀವಿಗೆ ಸರಣಿ ನಿಜಕ್ಕೂಜನಸಾಮಾನ್ಯರಿಗೆ ನಾದೋಪಾಸನೆಯ ಪರಿಚಯ ಮಾಡಿಸುತ್ತಿದೆ, ವಿಶ್ವಶಾಂತಿಗೆ ಸಹಕರಿಸುತ್ತಿದೆಎಂದುಅವರು ತಿಳಿಸಿದರು.

ಗೀತೆಯನ್ನುಯುಟ್ಯೂಬ್‌ಗೆ ಇಂದೀಕರಿಸಿದ ಅಂಧ ಮಕ್ಕಳ ಆಶಾಕಿರಣ ಶಾಲೆಯ ಮುಖ್ಯಶಿಕ್ಷಕ ಲಕ್ಷ್ಮಣಗೌಡ ಮಾತನಾಡಿ, ಪ್ರತೀ ದೇವಸ್ಥಾನಗಳೂ ನಮ್ಮ ನಂಬಿಕೆಯ ಕೇಂದ್ರಗಳು. ನಂಬಿಕೆ ಇಲ್ಲದೇಜೀವನವಿಲ್ಲ. ನಮ್ಮದೇಹದಲ್ಲಿನರಕ್ತಸಂಚಾರವೂ ಸಹ ಲಯ ಬದ್ಧ ಸಂಗೀತದ ನಾದವನ್ನು ಹೊಂದಿದೆ. ನಾಗರಾಜರಾವ್‌ಕಲ್ಕಟ್ಟೆ, ರೇಖಾನಾಗರಾಜರಾವ್ ಮತ್ತುಕೆ. ಎನ್.ನಾಗಭೂಷಣ್ ಸಂಯೋಜನೆಯಲ್ಲಿ ಮೂಡಿ ಬರುತ್ತಿರುವ ಪ್ರತಿ ಹಾಡುಗಳೂ ನಮ್ಮೂರಧಾರ್ಮಿಕ ಶ್ರೀಮಂತಿಕೆಯನ್ನು ತೋರಿಸುತ್ತದೆ. ಧಾರ್ಮಿಕತೆಇಲ್ಲದೇ ಬಾಳಿನಲ್ಲಿ ಪರಿಶುದ್ಧತೆ ಸಾಧ್ಯವಿಲ್ಲಎಂದರು.

ದೇವಾಲಯ ಬುಡಕಟ್ಟು ಸಮಿತಿಯ ಕಾರ್ಯದರ್ಶಿ ಬಸಂತ್‌ರವರು ಮಾತನಾಡಿ, ಸ್ಥಳೀಯ ಕಲಾವಿದರು ನಡೆಸುತ್ತಿರುವ ಈ ಕಾರ್ಯಕ್ರಮ ನಿಜಕ್ಕೂಊರಿನವರು ಹೆಮ್ಮೆ ಪಡುವಂಥಾದ್ದು. ಮನೆ ಗೆದ್ದು ಮಾರುಗೆಲ್ಲುಎನ್ನುವುದು ಸತ್ಯವಾದ ಮಾತು. ನಾಗರಾಜರಾವ್‌ಕಲ್ಕಟ್ಟೆಅವರು ಮನೆ, ಮಾರುಎರಡನ್ನೂಗೆಲ್ಲುತ್ತಿರುವುದು ನಮ್ಮಹೆಮ್ಮೆಎಂದರು.

ಅಧ್ಯಕ್ಷೀಯ ನುಡಿಯಾಡಿದ ನಿರ್ಮಾಪಕಿ, ಅಭಾಸಾಪದ ಸಾಹಿತ್ಯಕೂಟದ ಸಂಚಾಲಕಿರೇಖಾನಾಗರಾಜರಾವ್‌ಅವರು, ಮೂವತ್ತೆರಡನೇಗೀತೆಯಾಗಿ ಬಂದ ಈ ಹಾಡುಕಾನಡರಾಗದಲ್ಲಿದೆ. ಇಲ್ಲಿಯವರೆಗೆಇಪ್ಪತ್ತಾರು ರಾಗಗಳನ್ನು ತಂಡ ಬಳಸಿಕೊಂಡಿರುವುದಲ್ಲದೇ, ಪ್ರತಿ ಹಾಡಿನಲ್ಲೂಒಂದುಚರಣದ ನಂತರ ಪಲ್ಲವಿಯ ಬಳಕೆಯಲ್ಲಿ ವಿಶಿಷ್ಠತೆ ತರಲಾಗಿದೆಎಂದರು.

ಸಮಾರಂಭದಲ್ಲಿಅರ್ಚಕರಾದನಿಂಗಪ್ಪ, ಜಯಮ್ಮ, ಶೀಲಾ ಲಕ್ಷ್ಮಣಗೌಡ, ಗಾಯಕ ನಾಗರಾಜರಾವ್‌ಕಲ್ಕಟ್ಟೆ, ಧರ್ಮಕೆ.ಎಸ್., ಶೈಲ, ರುಕ್ಮಿಣಿ, ಪುನೀತ್, ರಾಜೇಶ್, ಮಧು ಕೆ.ಎಂ., ಚಂದನ್, ವೀರಗಾರರಾದಡಂಕೇಶ್, ಮಂಜುನಾಥ್, ಬಾಲಕಲಾವಿದೆ ಮೈತ್ರೇಯಿಎಲ್. ಆರ್., ರಘು ಕೆ.ಎಂ., ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಾಲಕಾಲಕ್ಕೆ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳಿ : ಬಿ.ಟಿ.ಕುಮಾರಸ್ವಾಮಿ

**ಚಿತ್ರದುರ್ಗ :** ಬದುಕಿಗೆ ಕಣ್ಣುಗಳು ಬಹಳ ಅವಶ್ಯಕವಾಗಿದ್ದು, ಕಾಲಕಾಲಕ್ಕೆ ಕಣ್ಣುಗಳ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಸ್ಪತ್ರೆ, ಜಿಲ್ಲಾ ಅಂಧತ್ವ ನಿವಾರಣಾ ವಿಭಾಗ, ನಗರಸಭೆ ಹಾಗೂ ಶಿವಮೊಗ್ಗ ಶಂಕರ ಕಣ್ಣಿನ ಆಸ್ಪತ್ರೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಉಚಿತ ಕಣ್ಣಿನ ತಪಾಸಣೆ, ಶಸ್ತ್ರ ಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಜೀವನದ ಎಲ್ಲ ಚಟುವಟಿಕೆಗಳಿಗೆ ಮೂಲ ಕಣ್ಣು. ಕಣ್ಣುಗಳು ನಮ್ಮ ಆತ್ಮದ ಕಿಟಕಿಗಳಿದ್ದಂತೆ, ಕಣ್ಣಿನ ಬಗ್ಗೆ ಕಾಳಜಿ, ರಕ್ಷಣೆ ವಹಿಸುವುದು ಅತ್ಯಂತ ಅವಶ್ಯಕವಾಗಿದ್ದು, ಉಚಿತ ಕಣ್ಣಿನ ತಪಾಸಣಾ ಶಿಬಿರಗಳಲ್ಲಿ ಭಾಗವಹಿಸುವ ಮೂಲಕ ಕಣ್ಣಿನ ತಪಾಸಣೆ ಮಾಡಿಸಿಕೊಂಡು ಕಣ್ಣುಗಳ ಆರೋಗ್ಯ ಕಾಪಾಡಿಕೊಳ್ಳಿ ಎಂದರು.

ಹೊರ ಜಗತ್ತನ್ನು ನೋಡಿ ಆನಂದಿಸಬೇಕಾದರೆ ಕಣ್ಣನ್ನು ಜೋಪಾನವಾಗಿ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದ ಅವರು, ವ್ಯಕ್ತಿಯ ಮರಣದ ನಂತರ ನೇತ್ರದಾನಕ್ಕೆ ಅವಕಾಶವಿದ್ದು, ಕಣ್ಣುಗಳನ್ನು ದಾನ ಮಾಡುವ ಮೂಲಕ ಅಂಧರ ಬಾಳಿಗೆ ಬೆಳಕಾಗೋಣ ಎಂದು ಹೇಳಿದರು.

ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್. ರಾಘವೇಂದ್ರ ಮಾತನಾಡಿ, ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿ ನಡೆಯುವ ಉಚಿತ ಕಣ್ಣಿನ ತಪಾಸಣೆ ಶಿಬಿರಗಳಿಗೆ ನಗರಸಭೆ ವತಿಯಿಂದ ಅಗತ್ಯ ಸಹಕಾರ ನೀಡಲಾಗುವುದು. ನೇತ್ರದಾನ ಮಹಾದಾನವಾಗಿದ್ದು, ಎಲ್ಲರೂ ಸಹ ಕೈಜೋಡಿಸಬೇಕಿದೆ ಎಂದರು.

ಚಲನಚಿತ್ರ ಕಲಾವಿದ ದೊಡ್ಡಣ್ಣ ಮಾತನಾಡಿ, ಕೆ.ಸಿ.ವೀರೇಂದ್ರ (ಪಪ್ಪಿ) ಶಾಸಕರಾಗಿ ಆಯ್ಕೆಯಾದ ಮರುದಿನದಿಂದಲೇ ಕ್ಷೇತ್ರದ ಜನರ ಸೇವೆಯಲ್ಲಿ



ತಮ್ಮನ್ನು ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದು, ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ನಡೆಸಿಕೊಂಡು ಬರಲಾಗಿದೆ. ಇದುವರೆಗೂ 20 ಗ್ರಾಮ ಪಂಚಾಯಿತಿಗಳಲ್ಲಿ ಕಣ್ಣು ತಪಾಸಣಾ ಶಿಬಿರವನ್ನು ಅತ್ಯಂತ ಯಶಸ್ವಿಯಾಗಿ ನಡೆಸಿಕೊಂಡು ಬರಲಾಗಿದೆ. ಕ್ಷೇತ್ರದಲ್ಲಿ 6,451 ಜನರು ಪರೀಕ್ಷೆಗೆ ಒಳಗಾಗಿ, ಈ ಪೈಕಿ 667 ಜನರು ಕಣ್ಣಿನ ಶಸ್ತ್ರಚಿಕಿತ್ಸೆಗೆ ಒಳಪಟ್ಟಿದ್ದು, 2,460 ಜನರಿಗೆ ಕನ್ನಡಕಗಳನ್ನು ವಿತರಿಸಲಾಗಿದೆ ಎಂದು ಹೇಳಿದರು.

ಚಿತ್ರದುರ್ಗ ನಗರದ ಎಲ್ಲ ವಾರ್ಡ್‌ಗಳಲ್ಲಿ ಪ್ರತಿ ತಿಂಗಳು ಒಂದೊಂದು ವಾರ್ಡಿನ ನಾಗರೀಕರಿಗೆ ಪ್ರತ್ಯೇಕವಾಗಿ ಉಚಿತ ಕಣ್ಣಿನ ನೇತ್ರ ತಪಾಸಣಾ ಶಿಬಿರವನ್ನು ಆಯೋಜಿಸಲಾಗುವುದು. ಈ ಶಿಬಿರದ ಪ್ರಯೋಜನವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಅಂಧತ್ವ ನಿವಾರಣಾಧಿಕಾರಿ ಡಾ. ಜಿ.ಓ.ನಾಗರಾಜ್ ಮಾತನಾಡಿ, ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈಗಾಗಲೇ 20ಕ್ಕೂ ಹೆಚ್ಚು ಗ್ರಾಮ ಪಂಚಾಯಿತಿಗಳಲ್ಲಿ ಉಚಿತ ಕಣ್ಣಿ ಆರೋಗ್ಯ ತಪಾಸಣೆಗಳನ್ನು ಆಯೋಜಿಸಲಾಗಿದ್ದು, ಇಂದು ಚಿತ್ರದುರ್ಗ ನಗರದ 27ನೇ ವಾರ್ಡ್‌ನಲ್ಲಿ ಶಿಬಿರ ಆಯೋಜಿಸಲಾಗಿದೆ. ಪ್ರತಿ ತಿಂಗಳು ಒಂದೊಂದು ವಾರ್ಡಿನ ನಾಗರೀಕರಿಗೆ ಪ್ರತ್ಯೇಕವಾಗಿ ಶಿಬಿರ ನಡೆಯಲಿದೆ. ಉಚಿತ ಕಣ್ಣಿನ ತಪಾಸಣಾ ಶಿಬಿರಕ್ಕೆ ಜಿಲ್ಲಾ ಅಂಧತ್ವ ನಿವಾರಣಾ ವಿಭಾಗದಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್. ಶಿವಣ್ಣ, ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ. ಗಿರೀಶ್, ಡಿವೈಎಸ್‌ಪಿ ಪಿ.ಕೆ.ದಿನಕರ್, ಶಂಕರ ಕಣ್ಣಿನ ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿ ಡಾ.ರವಿಶಂಕರ್, ಮಾಜಿ ನಗರಸಭಾ ಅಧ್ಯಕ್ಷ ಹೆಚ್.ಸಿ. ನಿರಂಜನಮೂರ್ತಿ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಸೇರಿದಂತೆ ಮುಖಂಡರಾದ ಮುಹಿಬುಲ್ಲಾ, ನರಸಿಂಹಮೂರ್ತಿ ಮತ್ತಿತರು ಇದ್ದರು.

## ರಾಜ್ಯದಲ್ಲಿ ಹಿಟ್ಲರ್ ಆಡಳಿತ: ಜೋಶಿ ಕಿಡಿ



**ಬೆಂಗಳೂರು :** ರಾಜ್ಯದಲ್ಲಿ ಹಿಟ್ಲರ್ ಆಡಳಿತ ಜಾರಿಗೆ ಬಂದಿದ್ದೇಯೇ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕಿಡಿ–ಕಾರಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರದ ಬಗ್ಗೆ ತಪ್ಪು ಹಾಗೂ ತಿರುಚಿದ ಮಾಹಿತಿ, ಸುಳ್ಳು ಸಂಗತಿ ಅಳವಡಿಸಿ ಬಿಜೆಪಿ ಸುಳ್ಳು ಪ್ರಚಾರ ಮಾಡಿದೆ ಎಂದು ಕಾಂಗ್ರೆಸ್ ಆರೋಪಿಸಿದ ಬೆನ್ನಲ್ಲೇ ಜೋಷಿ ಅವರಿಂದ ಈ ಹೇಳಿಕೆ ಹೊರಬಿದ್ದಿದೆ.

ಬಿಜೆಪಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲು ರಾಜ್ಯ ಸರ್ಕಾರ ಒಳಾಡಳಿತ ಇಲಾಖೆ ಅಧಿಸೂಚನೆ ಹೊರಡಿಸುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರದ ನಿಲುವು ಗಮನಿಸಿದರೆ ರಾಜ್ಯದಲ್ಲಿ ಹಿಟ್ಲರ್ ಆಡಳಿತ ಜಾರಿಗೆ ಬಂದಿದ್ದೇಯಾ ಎಂಬ ಪ್ರಶ್ನೆ ಮೂಡಿದೆ ಎಂದು ಹೇಳಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಜೋಶಿ ಅವರು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ನೀತಿಗಳನ್ನು ಪಾಲಿಸುತ್ತೇವೆ ಎಂದು ಹೇಳುವ ಕಾಂಗ್ರೆಸ್ ಸರ್ಕಾರದ ನಡುವೆ ಹಿಟ್ಲರ್ ಆಡಳಿತಕ್ಕಿಂತಲೂ ಕಡೆಯಾಗಿದೆ. ವಾಕ್ ಸ್ವಾತಂತ್ರ್ಯ ಕಸಿಯುವುದು ಸಂವಿಧಾನದಲ್ಲಿ ಬರೆದಿದೇಯೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪ್ರಶ್ನಿಸಿದ್ದಾರೆ.

ಸರ್ಕಾರದ ವೈಫಲ್ಯಗಳ ಬಗ್ಗೆ ಮಾತನಾಡಿದರೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ಸಂ–ಕೋಚ ಏಕೆ? ಕಾಂಗ್ರೆಸ್ ಸರ್ಕಾರ ದುರಾಡಳಿತ ಮತ್ತು ಭ್ರಷ್ಟಾಚರದ ರಾಜ್ಯದ ಅರ್ಥವ್ಯವಸ್ಥೆಯೆಂದು ಹಾಳು ಮಾಡಿದ್ದಿರೀ. ಈ ಬಗ್ಗೆ ಮಾತನಾಡಿದರೆ ನಿಮಗೆ ಭಯ ಏಕೆ ಎಂದು ಕಿಡಿಕಾರಿದ್ದಾರೆ.

# ಉತ್ತಮ ಆರೋಗ್ಯಕ್ಕೆ ಸ್ವಚ್ಛತೆ ಅಗತ್ಯವಾಗಿದ್ದು ಜಾಗೃತೆ ವಹಿಸಿ : ಮಾಜಿ ಶಾಸಕ ಎಸ್.ರಾಮಪ್ಪ



**ಹರಿಹರ :** ಉತ್ತಮ ಆರೋಗ್ಯಕ್ಕೆ ಸ್ವಚ್ಛತೆ ಅಗತ್ಯವಾಗಿದ್ದು ಸದಾಕಾಲ ಜಾಗೃತೆ ವಹಿಸುವುದನ್ನು ರೂಡಿಸಿಕೊಳ್ಳುವಂತೆ ಶಿಬಿರಾರ್ಥಿಗಳಿಗೆ ಮಾಜಿ ಶಾಸಕ ಎಸ್. ರಾಮಪ್ಪ ಕಿವಿಮಾತು ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್.ಎಸ್.ಎಸ್ ಘಟಕ–1 ಮತ್ತು 2 ರ ವತಿಯಿಂದ ತಾಲೂಕಿನ ಸಲಗನಹಳ್ಳಿ ಗ್ರಾಮದಲ್ಲಿ 7 ದಿನಗಳ ಕಾಲ ಆಯೋಜಿಸಿದ್ದ 'ವಿಕಸಿತ ಭಾರತ ನಿರ್ಮಾಣದಲ್ಲಿ ಯುವಕರ ಪಾತ್ರ' ಎಂಬ ಧ್ಯೇಯದ ವಾರ್ಷಿಕ ಶಿಬಿರದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾ ಡಿದ ಅವರು, ಜನತೆಯ ಉತ್ತಮ ಆರೋಗ್ಯಕ್ಕೆ ಸ್ವಚ್ಛತೆಯು ಕೂಡ ತುಂಬಾ ಮುಖ್ಯವಾಗಿದೆ.

ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಾರ್ಥಿಗಳು ಸ್ವಚ್ಛತೆ ಮತ್ತು ನೈರ್ಮಲ್ಯದ ಕಾರ್ಯವನ್ನು ವಾರಗಳ ಕಾಲ ಗ್ರಾಮದಲ್ಲಿ ನಿರ್ವಹಿಸಿದ್ದಾರೆ. ಇದನ್ನು ಗ್ರಾಮಸ್ಥರು ಮುಂದುವರೆಸಿಕೊಂಡು ಹೋಗುವ ಮೂಲಕ ಉತ್ತಮ ಅರೋಗ್ಯ ಕಾಪಾಡಿಕೊಳ್ಳಬೇಕು ಎಂದು ಅವರು ಗ್ರಾಮಸ್ಥರಲ್ಲಿ ಮನವಿ ಮಾಡಿ, ಗ್ರಾಮೀಣ ಅಭಿವೃದ್ಧಿಯು ಹಲವರ ಪ್ರಯತ್ನದಿಂದ ಸಾಧ್ಯ ಅದರಲ್ಲಿ ಪದವಿ ಕಾಲೇಜಿನ ವಿದ್ಯಾರ್ಥಿಗಳು ಎನ್.ಎಸ್.ಎಸ್ ಶಿಬಿರದ ಮೂಲಕ ತಮ್ಮ ಅಳಿಲು ಸೇವೆಯನ್ನು ಗ್ರಾಮಕ್ಕೆ ನೀಡಿದ್ದಾರೆ ಎಂದು ಶಿಬಿರಾರ್ಥಿಗಳ ಕಾರ್ಯವನ್ನು ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ.ಎಂ.ಎನ್. ರಮೇಶ್ ರವರು ಮಾತನಾಡಿ, ಶಿಬಿರದಿಂದ ಗ್ರಾಮದ ಅನುಕೂಲಕ್ಕಿಂತ, ನಮ್ಮ ವಿದ್ಯಾರ್ಥಿಗಳೂ ಸಾಕಷ್ಟು ಕಲಿತಿದ್ದಾರೆ. ಶಿಬಿರದಿಂದ ಗ್ರಾಮದ ಮತ್ತು ಕಾಲೇಜಿನ ಪ್ರತಿಭೆಗಳಿಗೆ ವೇದಿಕೆ ದೊರೆತಿದೆ. ಸಮಾಜಮುಖಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮದ ಸಂಘ ಸಂಸ್ಥೆಗಳಿಂದ ಶಿಬಿರಾರ್ಥಿಗಳಿಗೆ ಜೀವನೋಪಾಯದ ಮಾಹಿತಿ ಮತ್ತು ಅನುಭವವು ಸಿಕ್ಕಿದೆ ಎಂದು ಗ್ರಾಮಸ್ಥರ ಸಹಕಾರವನ್ನು ಸ್ಮರಿಸಿಕೊಂಡರು.

ಎನ್‌ಎಸ್‌ಎಸ್ ಘಟಕ ಕಾರ್ಯಕ್ರಮಾಧಿಕಾರಿ ಯೋಗೇಶ್.ಕೆ.ಜೆ ಮಾತನಾಡಿ, ಸಲಗನಹಳ್ಳಿ ಗ್ರಾಮದ ಜನತೆಯಿಂದ ಶಿಬಿರಾರ್ಥಿ ಗಳು ಮತ್ತು ನಾವುಗಳು ಹಲವಾರು ಬಗೆಯ ಜ್ಞಾನ ಪಡೆದಿದ್ದು, ಗ್ರಾಮಸ್ಥರಿಗೂ ನಮ್ಮ ಶಿಬಿರದಿಂದ ಅಲ್ಪ ಪ್ರಮಾಣ ಜಾಗೃತಿ ಕಾರ್ಯವಾಗಿದೆ. ವಿದ್ಯಾರ್ಥಿಗಳ ಬದುಕಿಗೆ ಸಹಾಯವಾಗುವ ಕೌಶಲ್ಯಗಳನ್ನು ಕಲಿಯುವುದರೊಂದಿಗೆ, ಗ್ರಾಮೀಣ ಜನತೆಯ ಬದುಕು–ಬವಣೆಯನ್ನು ಅರಿತಿದ್ದಾರೆ. ಅಲ್ಲದೆ ಸರಾಗವಾಗಿ ಶಿಬಿರ ನಡೆಯುಲು ಗ್ರಾಮದ ಮುಖಂಡರು ಅನುವು ಮಾಡಿದ ಸೌಲಭ್ಯಗಳನ್ನು ನೆನೆದು ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಸಲಗನಹಳ್ಳಿಯ ಗ್ರಾ.ಪಂ ಸದಸ್ಯೆ ಕೆ.ಡಿ. ವಿಜಯ, ಮುಖ್ಯಶಿಕ್ಷಕಿ ಆರ್.ಉಮಾ, ಶಿಕ್ಷಕರಾದ ಎಂ.ಬಿ.ಅಶ್ವಕ್ ಆಹಮದ್, ಎಲ್.ಐ.ಸಿ ಶಿವಣ್ಣ,ಐ.ಕ್ಯೂ.ಎಸ್.ಸಿ ಸಂಯೋಜಕ ಡಾ.ಹೆಚ್.ಪಿ.ಅನಂತನಾಗ್ ,ಎನ್‌ಎಸ್‌ಎಸ್ ಘಟಕ–1ರ ಕಾರ್ಯಕ್ರಮಾಧಿಕಾರಿ ಡಾ.ಎಸ್. ಗಂಗರಾಜು,ಇಂಗ್ಲೀಷ್ ವಿಭಾಗದ ಮುಖ್ಯಸ್ಥ ಡಾ.ಬಿ.ಕೆ.ಮಂಜು ನಾಥ್, ಐ.ಕ್ಯೂ.ಎಸ್.ಸಿ ಸಹ ಸಂಯೋಜಕ ಅಬ್ದುಲ್ ಬಷೀರ, ಅವರುಗಳು ಉಪಸ್ಥಿತರಿದ್ದು, ಶಿಬಿರ ಕುರಿತು ಮಾತನಾಡಿದರು. ಇತಿಹಾಸ ವಿಭಾಗದ ಉಪನ್ಯಾಸಕ ಎ.ರಾಜಪ್ಪ ಸೇರಿದಂತೆ ಗ್ರಾಮದ ಮುಖಂಡರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ರಾಷ್ಟ್ರಪತಿಗಳ ಅನುಮೋದನೆಗೆ ಕಾಯ್ದಿರಿಸಿದ ರಾಜ್ಯಪಾಲರು



**ಬೆಂಗಳೂರು:** ರಾಜ್ಯ ಸರ್ಕಾರ ಮಂಡಿಸಿದ್ದ ಕರ್ನಾಟಕ ಹಿಂದು ಧಾರ್ಮಿಕ ಸಂಸ್ಥೆಗಳು ಮತ್ತು ದತ್ತಿ (ತಿದ್ದುಪಡಿ) ಮಸೂದೆಯನ್ನು ರಾಷ್ಟ್ರಪತಿಗಳ ಒಪ್ಪಿಗೆಗಾಗಿ ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಕಾಯ್ದಿರಿಸಿದ್ದಾರೆ.

ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಶುಕ್ರವಾರ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ದತ್ತಿ ದತ್ತಿ (ತಿದ್ದುಪಡಿ) ಮಸೂದೆಯನ್ನು ರಾಷ್ಟ್ರಪತಿಗಳ ಒಪ್ಪಿಗೆಗಾಗಿ ಕಾಯ್ದಿರಿಸಿದ್ದಾರೆ.

"ಈ ಮಸೂದೆಯು ಸಾಂವಿಧಾನಿಕ ನಿರ್ಬಂಧಗಳಿಗೆ ಒಳಪಡುತ್ತಿದೆ. ಪರಿಶೀಲನೆಯ ಅಗತ್ಯವಿದೆ. ಹೀಗಾಗಿ, ಹೆಚ್ಚಿನ ಸಾಂವಿಧಾನಿಕ ತೊಡಕುಗಳನ್ನು ನಿವಾರಿಸಲು ಪ್ರಸ್ತಾವಿತ ಮಸೂದೆಗೆ ಒಪ್ಪಿಗೆ ನೀಡುವ ಬದಲು, ಗೌರವಾನ್ವಿತ ರಾಷ್ಟ್ರಪತಿಗಳ ಪರಿಗಣನೆಗೆ ಕಾಯ್ದಿರಿಸುವುದು ಸೂಕ್ತವೆಂದು ನಾನು ಭಾವಿಸುತ್ತೇನೆ" ಎಂದು ರಾಜ್ಯಪಾಲ ಗೆಹ್ಲೋಟ್ ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

ಅಂದಹಾಗೆ ಈ ಮಸೂದೆಯನ್ನು ಮಾರ್ಚ್ 6, 2024 ರಂದು ಅಂಗೀಕರಿಸಲಾಗಿತ್ತು. ಮೇ 16, 2025 ರಂದು ಹೊಸದಾಗಿ ರಾಜ್ಯಪಾಲರಿಗೆ ಸಲ್ಲಿಸಲಾಗಿತ್ತು. ಮಸೂದೆಯು ಹೆಚ್ಚಿನ ಆದಾಯ ಗಳಿಸುವ ದೇವಾಲಯಗಳಿಂದ ನಿಧಿಯ ಸಾಮಾನ್ಯ ನಿಧಿಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಮಸೂದೆಯು, ಹೆಚ್ಚಿನ ಆದಾಯ ಗಳಿಸುವ ದೇವಾಲಯಗಳಿಂದ ಸರ್ಕಾರಕ್ಕೆ ಬರುವ ನಿಧಿಯ ಮೊತ್ತವನ್ನು ಹೆಚ್ಚಿಸುವುದಾಗಿ ಹೇಳುತ್ತದೆ. ಇದರಡಿ, ಒಂದು ಕೋಟಿ ರೂ.ಗೂ ಅಧಿಕ ಆದಾಯ ಪಡೆಯುವ ಧಾರ್ಮಿಕ ಸಂಸ್ಥೆಗಳ ಒಟ್ಟು ಆದಾಯದಲ್ಲಿ ದತ್ತಿ ಇಲಾಖೆಗೆ ಬರುವ ಪಾಲನ್ನು 10%ರಷ್ಟು ಹೆಚ್ಚಿಸಲು ಸರ್ಕಾರ ನಿರ್ಧರಿಸಿದೆ. ಆ ಹಣವನ್ನು ಕಡಿಮೆ ಮತ್ತು ಅತೀ ಕಡಿಮೆ ಆದಾಯ ಹೊಂದಿರುವ ವರ್ಗ–ಬಿ ಮತ್ತು ವರ್ಗ–ಸಿ ದೇವಾಲಯಗಳ ಅಭಿವೃದ್ಧಿಗೆ ವರ್ಗಾಯಿಸಲು ಮಸೂದೆಯಲ್ಲಿ ಸರ್ಕಾರ ಪ್ರಸ್ತಾಪಿಸಿದೆ.

ಮಸೂದೆಯು ಅಧಿಸೂಚಿತ ವರ್ಗ–ಸಿ ಧಾರ್ಮಿಕ ಸಂಸ್ಥೆಗಳಿಗೆ ಮಾತ್ರ ಸಹಾಯಧನವನ್ನು ಪ್ರಸ್ತಾಪಿಸುತ್ತದೆ. ನಿರ್ವಹಣಾ ಸಮಿತಿಯ ನಾಲ್ವರು ಸಾಮಾನ್ಯ ಸದಸ್ಯರು ವಿಶ್ವಕರ್ಮ ಹಿಂದೂ ದೇವಾಲಯ ವಾಸ್ತುಶಿಲ್ಪ ಮತ್ತು ಶಿಲ್ಪಕಲೆಯಲ್ಲಿ ಪರಿಣತಿ ಹೊಂದಿರಬೇಕು ಎಂದು ಇದು ಪ್ರಸ್ತಾಪಿಸುತ್ತದೆ.

## ಜೂ.3: ಡಿಸಿಎಫ್ ಕಚೇರಿಯಲ್ಲಿ ಸಾರ್ವಜನಿಕ ಅಹವಾಲು ಸಭೆ

**ಚಿಕ್ಕಮಗಳೂರು :** ರಾಷ್ಟ್ರೀಯ ಹೆದ್ದಾರಿ 173ರ ಮೂಡಿಗೆರೆಯಿಂದ ಹೊಳಲ್ಕೆರೆ ಸೆಕ್ಷನ್ 72.260 (ಕಡೂರಿನ ತುರುವನಹಳ್ಳಿ ಕ್ರಾಸ್) ರಿಂದ 113.80 (ಅಹಮ್ಮದ್ ನಗರ ಗಡಿ) ರವರೆಗೆ ಹೆದ್ದಾರಿ ಅಗಲೀಕರಣ ಕಾಮಗಾರಿಗೆ ರಸ್ತೆ ಬದಿಯಲ್ಲಿರುವ ಮರಗಳನ್ನು ತೆರವುಗೊಳಿಸಬೇಕಾಗಿರುವ ಕಾರಣ ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯ್ದೆ ಪ್ರಕರಣದಡಿ 50ಕ್ಕಿಂತ ಹೆಚ್ಚು ಮರಗಳನ್ನು ಕಡಿಯಬೇಕಾಗಿದ್ದಲ್ಲಿ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಿ ಕ್ರಮ ಕೈಗೊಳ್ಳಲು ಮೇ 20 ರಂದು ಬೆಳಿಗ್ಗೆ 11.30 ಗಂಟೆಗೆ ಸಭೆ ನಿಗದಿಪಡಿಸಲಾಗಿತ್ತು ಸಭೆಯನ್ನು ಜೂನ್ 3 ರಂದು ಬೆಳಿಗ್ಗೆ 11.30 ಗಂಟೆಗೆ ಚಿಕ್ಕಮಗಳೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿಯಲ್ಲಿ ಮರು ನಿಗದಿ ಮಾಡಲಾಗಿದೆ. ಮರ ತೆರವು ಬಗ್ಗೆ ಸಾರ್ವಜನಿಕರಿಂದ ಆಕ್ಷೇಪಣೆಗಳಿದ್ದಲ್ಲಿ ಸಭೆಗೆ ಹಾಜರಾಗಿ ಆಕ್ಷೇಪಣೆ ಸಲ್ಲಿಸಬಹುದು ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕರ ಆರೋಗ್ಯ ಕಾಪಾಡಲು ತಪಾಸಣಾ ಶಿಬಿರ ಸಹಕಾರಿ

**ಚಿಕ್ಕಮಗಳೂರು:** ಸಾರ್ವಜನಿಕರ ಆರೋಗ್ಯ ಕಾಪಾಡಲು ಉಚಿತ ಆರೋಗ್ಯ ತಪಾಸಣಾ ಶಿಬಿರ ಸಹಕಾರಿ ಎಂದು ಮಾಜಿ ಸಚಿವ ಸಿ.ಆರ್. ಸಗೀರ್ ಅಹಮದ್ ತಿಳಿಸಿದರು.

ಅವರು ಐಜಿ ರಸ್ತೆಯ ಉರ್ದು ಶಾಲೆಯಲ್ಲಿ ನ್ಯಾಷನಲ್ ವೆಲ್‌ಫೇರ್ ಮತ್ತು ಚಾಲಿಟೇಬಲ್ ಟ್ರಸ್ಟ್ ಹಾಗೂ ಕಣಚೂರು ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಮಂಗಳೂರು ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದರು.

ರಾಜಕೀಯದಲ್ಲಿ ಯಾವ ಮುಸಲ್ಮಾನ ನೂರಾರು ಕೋಟಿ ರೂವರೆಗೆ ಲೂಟಿ ಹೊಡೆದಿಲ್ಲ, ಈ ಕುರಿತು ಬಿಜೆಪಿ ಆರೋಪಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ದೇಶದ್ರೋಹದ ಕೆಲಸ ಮಾಡುವ ವ್ಯಕ್ತಿ ಇಲ್ಲಿ ಬದುಕಲು ಅವಕಾಶವಿಲ್ಲ, ನಾವೆಲ್ಲಾ ಭಾರತ ಮಾತೆಯ ಮಕ್ಕಳು, ದೇಶ ಮತ್ತು ಪ್ರಜೆಗಳನ್ನು ರಕ್ಷಿಸಲು ದೇವರಲ್ಲಿ ಪ್ರಾರ್ಥಿಸುತ್ತೇವೆ ಎಂದರು.

ಜಾತಿ ಸಮೀಕ್ಷೆ ನಡೆಯುತ್ತಿದ್ದು, ಕಾಂಗ್ರೆಸ್ ಸರ್ಕಾರದ ಈ ನಿರ್ಧಾರದಿಂದ ಎಲ್ಲಾ ಸಮುದಾಯದ ವರ್ಗದ ಜನರಿಗೆ ಅನುಕೂಲವಾಗಬೇಕು, ಯಾವುದೇ ಸರ್ಕಾರ ಅಸ್ಥಿತ್ವಕ್ಕೆ ಬರಬೇಕಾದರೆ ಪ.ಜಾ, ಪ.ಪಂ ಹಾಗೂ ಮುಸ್ಲಿಂರ ಬೆಂಬಲ ಬೇಕು. ಆದರೆ, ಕಾಂಗ್ರೆಸ್ ಸರ್ಕಾರ ಬಂದು ಎರಡು ವರ್ಷವಾದರೂ ಒಂದು ನಿವೇಶನ ವಿತರಿಸಿಲ್ಲ ಎಂದು ಆರೋಪಿಸಿದರು.



ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಮಂಗಳೂರಿನ ಆಸ್ಪತ್ರೆ ಉಚಿತ ಆರೋಗ್ಯ ತಪಾಸಣೆಯನ್ನು ನಡೆಸುವ ಮೂಲಕ ಕಾರ್ಯಪ್ರವೃತ್ತರಾಗಿ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿರುವುದು ಶ್ಲಾಘನೀಯ ಎಂದ ಅವರು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ಖ್ಯಾತ ಮಕ್ಕಳ ತಜ್ಞ ಡಾ. ಜೆ.ಪಿ ಕೃಷ್ಣೇಗೌಡ ಮಾತನಾಡಿ, ಬಡವರು ಶ್ರೀಮಂತರು ಎಂಬ ಬೇಧ ಭಾವವಿಲ್ಲದೆ ಒಳ್ಳೆಯ ಮನಸ್ಸಿನಿಂದ ಜನರ ಆರೋಗ್ಯಕ್ಕೆ ಪೂರಕವಾದ ಉಚಿತ ಚಿಕಿತ್ಸಾ ಶಿಬಿರಗಳನ್ನು ಆಯೋಜಿಸಿರುವುದು ಸಂತೋಷಕರ ಸಂಗತಿ, ಬ್ರೆಸ್ಟ್ ಕ್ಯಾನ್ಸರ್‌ಗೆ ತುತ್ತಾಗಿ ವಾರ್ಷಿಕ 16 ಲಕ್ಷ ಮಹಿಳೆಯರು ನಿಧನರಾಗುತ್ತಿದ್ದಾರೆಂದು ವಿವರಿಸಿದರು.

ಇದರ ಜೊತೆಗೆ ಗರ್ಭಕಂಠ ಕ್ಯಾನ್ಸರ್ ಹೆಚ್ಚಾಗುತ್ತಿದ್ದು, ಇದನ್ನು ಮನಗಂಡು ಎಲ್ಲರೂ ಆಸ್ಪತ್ರೆಗೆ ಹೋಗು ಚಿಕಿತ್ಸೆ ಪಡೆಯಲು ಶಕ್ತರಾಗಿರುವುದಿಲ್ಲ, ಇಂತಹ ಶಿಬಿರಗಳಲ್ಲಿ ತಜ್ಞವೈದ್ಯರುಗಳನ್ನು ಕರೆತಂದು ಆ ಮೂಲಕ ಉಚಿತ ಚಿಕಿತ್ಸೆ ನೀಡುತ್ತಿರುವುದ ನಮ್ಮೆಲ್ಲರ ಭಾಗ್ಯ ಎಂದರು.

ಮಾಜಿ ಸಚಿವ ಸಗೀರ್ ಅಹಮದ್ ಅವರ ಶ್ರಮದ ಫಲವಾಗಿ ಚಿಕ್ಕಮಗಳೂರು ನಗರದ ಜನತೆ ಯಗಚಿ ನೀರು ಕುಡಿಯಲು ಸಹಕಾರಿಯಾಗಿದ್ದು, ಇದಕ್ಕಾಗಿ ಅವರನ್ನು ಅಭಿನಂದಿಸುತ್ತ ಸಮಾಜದಲ್ಲಿ ಸಿಕ್ಕಿದ ಅಧಿಕಾರವಧಿಯಲ್ಲಿ ಶಾಶ್ವತವಾದ ಜನೋಪಯೋಗಿ ಕಾರ್ಯಗಳನ್ನು ಕೈಗೊಳ್ಳಬೇಕೆಂದು ಕಿವಿಮಾತು ಹೇಳಿದರು.

## ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ

**ಚಿಕ್ಕಮಗಳೂರು:** ರಾಜ್ಯ ಸರ್ಕಾರಿ ನೌಕರರ ಸಂಘದಿಂದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲು 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯು ಪರೀಕ್ಷೆಗಳಲ್ಲಿ ಶೇ.90 ಮತ್ತು ಶೇ.90 ಕ್ಕಿಂತ ಹೆಚ್ಚು ಗಳಿಸಿರುವ ರಾಜ್ಯ ಸರ್ಕಾರಿ ನೌಕರರ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ದೇವೇಂದ್ರ ಅವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಸಾಧನೆ ಮಾಡಿರುವ ಪ್ರತಿಭಾನ್ವಿತ ಮಕ್ಕಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತೀ ವರ್ಷ 10 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಗುರುತಿಸಲಾಗುತ್ತಿದೆ. ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ ತಂದೆ, ತಾಯಿ ರಾಜ್ಯ ಸರ್ಕಾರದ ಖಾಯಂ ನೌಕರರಾಗಿರಬೇಕು. ಸಂಘವು ನಿಗದಿಪಡಿಸಿರುವ ನಮೂನೆಯಲ್ಲಿ ಸಂಘದ ಜಿಲ್ಲೆ ಅಥವಾ ತಾಲ್ಲೂಕು ಅಧ್ಯಕ್ಷರಿಂದ ದೃಢೀಕರಿಸಿ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಬೇಕು. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ(080–22354783/84) ಯನ್ನು ಸಂಪರ್ಕಿಸುವಂತೆ ಸಂಘದ ಅಧ್ಯಕ್ಷ ದೇವೇಂದ್ರ ಅವರು ಕೋರಿದ್ದಾರೆ.

# ಸಮ್ಮೇಳನಾಧ್ಯಕ್ಷೆ ಲಕ್ಷ್ಮೀ ಶ್ಯಾಮ್‌ರಾವ್‌ಗೆ ಪದಾಧಿಕಾರಿಗಳು ಅಭಿನಂದನೆ


**ಚಿಕ್ಕಮಗಳೂರು, ಮೇ.27:–** ಕನ್ನಡ ಸಾಹಿತ್ಯ ಪರಿಷತ್ತು ತಾಲ್ಲೂಕು ಮಹಿಳಾ ಘಟಕದ ಪ್ರಥಮ ಸಮ್ಮೇ ಳನಾಧ್ಯಕ್ಷರಾಗಿ ಆಯ್ಕೆಗೊಂಡ ಲೇಖಕಿ ಲಕ್ಷ್ಮೀ ಶ್ಯಾಮ್‌ರಾವ್ ಅವರನ್ನು ಜಿಲ್ಲಾ ಕಸಾಪ ಪದಾಧಿಕಾರಿಗಳು ಭಾನುವಾರ ಸ್ವಗೃಹಕ್ಕೆ ಭೇಟಿ ನೀಡಿ ಅಭಿನಂದಿಸಿ ಗೌರವಿಸಿದರು.

ಕಸಾಪ ಸ್ವಾಗತ ಸಮಿತಿ ಅಧ್ಯಕ್ಷೆ ರೇಖಾ ಹುಲಿಯಪ್ಪಗೌಡ ಮಾತನಾಡಿ ಜೂನ್ 14 ರಂದು ನಗರದ ಕುವೆಂಪು ಕಲಾಮಂದಿರದಲ್ಲಿ ತಾಲ್ಲೂಕು ಮಹಿಳಾ ಕಸಾಪ ಸಮ್ಮೇಳನವನ್ನು ಆಯೋಜಿಸಲಾಗಿದ್ದು ಮಹಿಳಾ ಸಾಹಿತ್ಯ ಲೋಕದಲ್ಲಿ ಅಪಾರ ಸಾಧನೈದ ಲಕ್ಷ್ಮೀ ಶ್ಯಾಮ್‌ರಾವ್‌ರ ಸೇವೆ ಗುರುತಿಸಿ ಒಕ್ಕೊರಲಿನಿಂದ ಸಮ್ಮೇಳ ನಾಧ್ಯಕ್ಷರಾಗಿ ಆಯ್ಕೆಗೊಳಿಸಲಾಗಿದೆ ಎಂದರು.

ಪ್ರಸ್ತುತ ತಮ್ಮದೇ ಶೈಲಿಯಲ್ಲಿ ಕವನ ಸಂಕಲನ, ಕಥೆಗಳು ರಚಿಸುವ ಜೊತೆಗೆ ಅನೇಕ ಗ್ರಂಥಗಳ ಅನು ವಾದವನ್ನು ಮಾಡಿರುವ ಕೀರ್ತಿ ಲಕ್ಷ್ಮೀ ಅವರಿಗಿದೆ. ಅಲ್ಲದೇ ತಮ್ಮ ಅನಾರೋಗ್ಯವನ್ನು ಲೆಕ್ಕಿಸದೇ ಸಾಮಾಜಿ ಕ ಚಟುವವಟಿಕೆಗಳಲ್ಲಿ ಹುರುಪಿನಿಂದ ಭಾಗವಹಿಸುವವರನ್ನು ಸಮ್ಮೇಳನಾಧ್ಯಕ್ಷರಾಗಿ ಮಾಡಿರುವುದು ಹೆಮ್ಮೆ ಯ ಸಂಗತಿ ಎಂದರು.

ರಾಜ್ಯದಲ್ಲೇ ಪ್ರಪ್ರಥಮ ಬಾರಿಗೆ ತಾಲ್ಲೂಕು ಮಹಿಳಾ ಕಸಾಪ ಘಟಕದ ಸಮ್ಮೇಳನ ಜಿಲ್ಲಾ ಕೇಂದ್ರದಲ್ಲಿ ನಡೆಯುತ್ತಿದೆ. ಈ ಸಮ್ಮೇಳನದ ಮುಖ್ಯ ರೂವಾರಿ ಲಕ್ಷ್ಮೀರವರ ಸಾರಥ್ಯದಲ್ಲಿ ಕಾರ್ಯಕ್ರಮ ಅತ್ಯಂತ ಯಶಸ್ವಿಗೊಳ್ಳುವ ಜೊತೆಗೆ ಸಾಹಿತ್ಯಾಸಕ್ತರು, ಬರಹಗಾರರು, ಲೇಖಕರಿಗೆ ಬಹಳಷ್ಟು ಅನುಕೂಲವಾಗಲಿದೆ ಎಂದು ಹೇಳಿದರು.

ಕಸಾಪ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ಮಾತನಾಡಿ ಜೂನ್ 14ರ ಕಾರ್ಯಕ್ರಮದಲ್ಲಿ ಬೆಳಿಗ್ಗೆ ಧ್ವಜಾ ರೋಹಣ ನಡೆಯಲಿದೆ. ಅಂದಿನ ಕಾರ್ಯಕ್ರಮದ ಉದ್ಘಾಟನೆಯನ್ನು ಕನ್ನಡಾಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಡಾ॥



ಪುರುಷೋತ್ತಮ್ ಬಿಳಿಮಲೆ ಅವರು ನೆರವೇರಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸ್ಮರಣ ಸಂಚಿಕೆ ಬಿಡುಗಡೆ, ಮೂವರಿಗೆ ಸಾಹಿತ್ಯ ಸಿರಿ, ಅನೇಕರಿಗೆ ಸಾಹಿತ್ಯ ಸೇವೆ ಗುರುತಿಸಿ ಕನ್ನಡಸಿರಿ ಪ್ರಶಸ್ತಿ ವಿತರಿಸಲಾಗುವುದು. ಸಾಹಿತಿ ದೀಪಾ ಹಿರೇಗುತ್ತಿ ಸಮಾರೋಪ ನುಡಿಗಳನ್ನಾಡಲಿದ್ದಾರೆ. ಹಾಸನ ಕಸಾಪ ಅಧ್ಯಕ್ಷ ಮಲ್ಲೇಶ್‌ಗೌಡ ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಕಸಾಪ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸವಿತಾರಮೇಶ್ ಪ್ರವೇಶನುಡಿಗಳನ್ನಾಡಲಿದ್ದಾರೆ. ಮಾಜಿ ಶಾ ಸಕಿ ಮೋಟಮ್ಮ ಜಾನಪದ ಗೋಷ್ಟಿ ಹಾಗೂ ಡಾ॥ ಪುಷ್ಪಭಾರತಿ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಲಿದ್ದಾರೆ.

ಜಿಲ್ಲಾ ಲೇಖಕಿರ ಸಂಘದ ಅಧ್ಯಕ್ಷೆ ಅಜ್ಜಂಪುರ ಎಸ್.ಶೃತಿ ಕವಿಗೋಷ್ಠಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಮಾಲತಿ ಜಾನಪದ ಗೋಷ್ಠಿ ಉದ್ಘಾಟಿಸಲಿದ್ದಾರೆ. ಹಾಗೂ ಕ್ಷೇತ್ರದ ಜನಪ್ರತಿನಿ ಧಿಗಳು, ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕಸಾಪ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್.ಎಸ್.ವೆಂಕಟೇಶ್, ತಾಲ್ಲೂಕು ಅಧ್ಯಕ್ಷ ದಯಾನಂದ್ ಮಾವಿನಕೆರೆ, ನಿಕಟ ಪೂರ್ವ ಅಧ್ಯಕ್ಷ ಬಿಸಲೇಹಳ್ಳಿ ಸೋಮಶೇಖರ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ನಿರ್ಮಲ ಮಂಚೇಗೌಡ, ತಾಲ್ಲೂಕು ಅಧ್ಯಕ್ಷೆ ವಿಜಯಲಕ್ಷ್ಮೀ, ನಗರಾಧ್ಯಕ್ಷ ಸಚಿನ್‌ಸಿಂಗ್, ದಾಸ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷೆ ಮಹಾಲಕ್ಷ್ಮೀ, ಕನ್ನಡದ ಕಟ್ಟಾಳುಗಳಾದ ಸುನೀತಾ ಕಿರಣ್, ಬಿ.ಪ್ರಕಾಶ್ ಮತ್ತಿತರರು ಹಾಜರಿದ್ದರು.

## ನಗರಸಭೆಗೆ 10 ಕೋಟಿ ರೂ. ಮಂಜೂರು

**ಚಿಕ್ಕಮಗಳೂರು :** ನಗರಸಭೆಗೆ ಎಸ್.ಎಫ್.ಸಿ. ವಿಶೇಷ ಅನುದಾನದಡಿ 10 ಕೋಟಿ ರೂ.ಗಳ ಕ್ರಿಯಾ ಯೋಜನೆಯು ಮಂಜೂರಾಗಿದ್ದು, ಅದರಂತೆ ಈ ಯೋಜನೆಯಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.

## ಮರ ಬಿದ್ದು ಮನೆ ಜಖಂ –ಓರ್ವರು ಆಸ್ಪತ್ರೆಗೆ ದಾಖಲು

**ಚಿಕ್ಕಮಗಳೂರು, ಮೇ.27:–** ನಿನ್ನೆ ರಾತ್ರಿ ಸುರಿದ ಮಳೆಯಿಂದ ವಸ್ತಾರೆ ಹೋಬಳಿ ಮೈಲಿಮನೆ ಗ್ರಾಮದ ವಾಸಿ ಕವಿತಾ ಅವರ ಮನೆಯ ಮೇಲೆ ಮರ ಬಿದ್ದು ಸಂಪೂರ್ಣ ಹಾನಿಯಾಗಿದೆ.

ಆಕೆಯ ಸೊಸೆ ನಂ ದಿನಿ ಅವರಿಗೆ ಕಾಲು ಮತ್ತು ಬೆನ್ನಿಗೆ ಪೆಟ್ಟಾಗಿದ್ದು ಚಿಕಿತ್ಸೆಗಾಗಿ ಸರ್ಕಾರಿ ಜಿಲ್ಲಾಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆ ಯುತ್ತಿರುತ್ತಾರೆ. ಈ ಸಂದರ್ಭದಲ್ಲಿ ಎಸ್ಸಿಎಸ್ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯ ಹುಣಸೇಮಕ್ಕಿ ಲಕ್ಷ್ಮಣ್ ಇದ್ದರು.



## ಬೆಳಗಾವಿ ವೈದ್ಯಕೀಯ ಕಾಲೇಜಿನಿಂದ 10 ಲಕ್ಷ ರೂ ಲಂಚ ಪಡೆದ ಎನ್‌ಎಂಸಿ ವೈದ್ಯನನ್ನು ಬಂಧಿಸಿದ ಸಿಬಿಐ

**ಬೆಳಗಾವಿ:** ಬೆಳಗಾವಿಯಲ್ಲಿರುವ ಖಾಸಗಿ ವೈದ್ಯಕೀಯ ಕಾಲೇಜಿಗೆ ಅನುಕೂಲಕರ ತಪಾಸಣಾ ವರದಿ ನೀಡಲು 10 ಲಕ್ಷ ರೂ. ಲಂಚ ಪಡೆಯುತ್ತಿದ್ದ ರಾಷ್ಟ್ರೀಯ ವೈದ್ಯಕೀಯ ಆಯೋಗದ(ಎನ್‌ಎಂಸಿ) ಮೌಲ್ಯಮಾಪಕರಾಗಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ವೈದ್ಯರನ್ನು ಸಿಬಿಐ ಬಂಧಿಸಿದೆ.

ಎನ್‌ಎಂಸಿ ವೈದ್ಯರ ಬಂಧನಕ್ಕೆ ಸಂಬಂಧಿಸಿದಂತೆ ಸಿಬಿಐ ನಡೆಸಿದ ಶೋಧದ ವೇಳೆ ಕನಿಷ್ಠ 44.6 ಲಕ್ಷ ರೂ. (ಸುಮಾರು) ಹೆಚ್ಚುವರಿ ನಗದು ಪತ್ತೆಯಾಗಿದೆ. ಸಿಬಿಐ ಪತ್ರಿಕಾ ಪ್ರಕಟಣೆಯ ಪ್ರಕಾರ, ರಾಷ್ಟ್ರೀಯ ವೈದ್ಯಕೀಯ ಆಯೋಗ(ಎನ್‌ಎಂಸಿ)ದಲ್ಲಿ ಮೌಲ್ಯಮಾಪಕರಾಗಿ ಕಾರ್ಯನಿರ್ವಹಿಸುತ್ತಿರುವ ಆರೋಪಿ ವೈದ್ಯರು, ಅನುಕೂಲಕರ ತಪಾಸಣಾ ವರದಿಯನ್ನು ನೀಡಲು ಖಾಸಗಿ ವೈದ್ಯಕೀಯ ಕಾಲೇಜಿನ ಪ್ರತಿನಿಧಿಗಳಿಂದ 10 ಲಕ್ಷ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ ಎಂಬ ಆರೋಪದ ಮೇಲೆ ಸಿಬಿಐ ಮೇ 24 ರಂದು ಈಗ ಬಂಧಿತ ವೈದ್ಯ ಸೇರಿದಂತೆ ಮೂವರು ಆರೋಪಿಗಳು ಮತ್ತು ಕರ್ನಾಟಕದ ಬೆಳಗಾವಿಯಲ್ಲಿರುವ ಇಬ್ಬರು ಖಾಸಗಿ ವ್ಯಕ್ತಿಗಳು, ಖಾಸಗಿ ವೈದ್ಯಕೀಯ ಸಂಸ್ಥೆಯ ವಿರುದ್ಧ ಪ್ರಕರಣ ದಾಖಲಿಸಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**